ಸಂಪುಟ: ೦೭/ ಸಂಚಿಕೆ: ೧೯೬/ ಬುಧವಾರ ದಿನಾಂಕ : ೨೪-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ಧಾರವಾಡ ಬಾಗಲಕೋಟ ವಿಜಯಪುರ ಗದಗ ಕೊಪ್ಪಳ ಹಾವೇರಿ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 196/ WEDNESDAY Date : 24-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00




ನವರಾತ್ರಿ ಉತ್ಸವದ ಎರಡನೆಯ ದಿನವಾದ ಮಂಗಳವಾರ ಧಾರವಾಡ ಶಾಂತಿ ನಿಕೇತನ ನಗರದ ಶ್ರೀ ಕರಿಯಮ್ಮ ದೇವಿಗೆ ಶ್ರೀ ಪದ್ಮಾವತಿ ದೇವಿ ಅಲಂಕಾರ.

## ಜಾತಿ ಗಣತಿ ಮುಂದೂಡುವಂತೆ ಒಕ್ಕಲಿಗರ ನಿಯೋಗ ಮನವಿ

**ಬೆಂಗಳೂರು:** ಜಾತಿ ಗಣತಿ ಎಂದು ಕರೆಯಲ್ಪಡುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ರಾಜ್ಯಾದ್ಯಂತ ಸೋಮವಾರಿಂದ ಆರಂಭವಾಗಿದ್ದು, ಇದನ್ನು ಮುಂದೂಡುವಂತೆ ಒಕ್ಕಲಿಗ ಮುಖಂಡರ ನಿಯೋಗ ಮಂಗಳವಾರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದೆ.

ಖರ್ಗೆ ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ರಾಜ್ಯ ಒಕ್ಕಲಿಗ ಮೀಸಲಾತಿ ಸಮಿತಿಯ ಮುಖ್ಯ ಸಂಚಾಲಕ ನಾಗರಾಜ್ ಯಲಚವಾಡಿ ಅವರು, ಸುಮಾರು 800 ಜಾತಿಗಳಿದ್ದವು. ಈಗ, ಹಿಂದುಳಿದ ವರ್ಗಗಳ ಆಯೋಗವು 1,561 ಜಾತಿಗಳ ಪಟ್ಟಿಯನ್ನು ಸಿದ್ಧಪಡಿಸಿದೆ. ಯಾವುದೇ ವಿಚಾರಣೆ ಅಥವಾ ಶಾಸ್ತ್ರೀಯ ಅಧ್ಯಯನಗಳಿಲ್ಲದೆ ಜಾತಿಗಳನ್ನು ಸೇರಿಸಲಾಗಿದೆ. ಇದಲ್ಲದೆ, ಸರ್ಕಾರವು ಸಮೀಕ್ಷಾ ಅಪ್ಲಿಕೇಶನ್‌ನಲ್ಲಿ ಸರಿಯಾದ ತರಬೇತಿಯನ್ನು ನೀಡಿಲ್ಲ ಎಂದು ಹೇಳಿದರು. ಈ ಎಲ್ಲ ಕಾರಣಗಳಿಂದಾಗಿ ನಾವು ಸಮೀಕ್ಷೆಯನ್ನು ಮುಂದೂಡುವಂತೆ ಮನವಿ ಮಾಡಿದ್ದೇವೆ ಎಂದು ನಾಗರಾಜ್ ಯಲಚವಾಡಿ ತಿಳಿಸಿದರು.

ಈಗಾಗಲೇ ಸರ್ಕಾರ ಹೇಳಿರುವಂತೆ ಸಮೀಕ್ಷೆಯನ್ನು ಕೇವಲ 15 ದಿನಗಳಲ್ಲಿ ಪೂರ್ಣಗೊಳಿಸಲು ಸಾಧ್ಯವಿಲ್ಲ. ಹೀಗಾಗಿ ಸಮೀಕ್ಷೆಯನ್ನು 45 ದಿನಗಳ ಕಾಲ ಮುಂದೂಡುವಂತೆ ರಾಜ್ಯ ಸರ್ಕಾರ ಸೂಚಿಸಬೇಕು ಎಂದು ಮನವಿ ಮಾಡಿದ್ದೇವೆ. ನಮ್ಮ ಮನವಿಯನ್ನು



ಪರಿಶೀಲಿಸುವುದಾಗಿ ಖರ್ಗೆ ಭರವಸೆ ನೀಡಿದ್ದಾರೆ ಎಂದು ಯಲಚವಾಡಿ ಹೇಳಿದ್ದಾರೆ.

ನವರಾತ್ರಿ ಪ್ರಾರಂಭವಾಗುತ್ತಿರುವ ಈ ಸಮಯದಲ್ಲಿ ಸಮೀಕ್ಷೆ ನಡೆಸಿದರೆ ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗದು. ಆದ್ದರಿಂದ 45 ದಿನಗಳ ನಂತರ, 60 ದಿನಗಳ ಕಾಲ ಸಮೀಕ್ಷೆ ನಡೆಸಬೇಕು ಎಂದು ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಶ್ರೀ ಶನಿವಾರ ಆಗ್ರಹಿಸಿದ್ದರು. ಆದಿಚುಂಚನಗಿರಿ ಶ್ರೀಗಳ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ಶನಿವಾರ ಒಕ್ಕಲಿಗ ಸಮುದಾಯದ ಬೃಹತ್ ಸಭೆ ನಡೆಸಲಾಗಿತ್ತು. ಅದರಲ್ಲಿ ಡಿಸಿಎಂ ಡಿಕೆ ಶಿವಕುಮಾರ್, ಕೇಂದ್ರ ಸಚಿವ ಹೆಚ್?ಡಿ ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ, ವಿಧಾನಸಭೆ ಪ್ರತಿಪಕ್ಷ ನಾಯಕ ಆರ್ ಅಶೋಕ್ ಸೇರಿ ಸಮುದಾಯದ ಅನೇಕ ಗಣ್ಯರು ಭಾಗವಹಿಸಿದ್ದರು.

## ಬುರುಡೆ ಗ್ಯಾಂಗ್‌ಗೆ ಹಣಕಾಸು ಸಹಾಯ 11ಮಂದಿಗೆ ನೋಟೀಸ್

**ಬೆಳ್ತಂಗಡಿ:** ಎಸ್‌ಐಟಿ ತನಿಖೆಯನ್ನು ಚುರುಕುಗೊಳಿಸಿದ್ದು, ಬುರುಡೆ ಗ್ಯಾಂಗ್‌ಗೆ ಹಣಕಾಸು ಸಹಾಯ ಮಾಡಿದ್ದ 11 ಮಂದಿಗೆ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದೆ.

ಪ್ರಮುಖವಾಗಿ ಚಿನ್ನಯ್ಯ ಹಾಗೂ ಪತ್ನಿಯ ಅಕೌಂಟ್‌ಗೆ ಹಣ ವರ್ಗಾವಣೆ ಮಾಡಿದವರ ಬಗ್ಗೆ ಎಸ್‌ಐಟಿ ಮಾಹಿತಿ ಕಲೆ ಹಾಕಿದ್ದಲ್ಲದೇ ಆತನ ಕುಟುಂಬದ ಪ್ರತಿಯೊಬ್ಬರ ಬ್ಯಾಂಕ್ ಖಾತೆಯ ಮಾಹಿತಿಗಳನ್ನು ಪಡೆದು ಪರಿಶೀಲಿಸುತ್ತಿದೆ. ಮಹಿಳೆಯರ ಖಾತೆಯಿಂದಲೂ ಚಿನ್ನಯ್ಯನ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆಯಾಗಿರುವುದು ಎಸ್‌ಐಟಿ ತನಿಖೆಯಲ್ಲಿ ಬಯಲಾಗಿದೆ. ಬುರುಡೆ ಪ್ರಕರಣದಲ್ಲಿ ಶಾಮೀಲಾಗಿರುವ ಕಾಣದ ಕೈಗಳ ಪತ್ತೆ ಬಗ್ಗೆ ಎಸ್‌ಐಟಿ ತನಿಖೆ ನಡೆಸುತ್ತಿದ್ದು ಮಹತ್ವದ ಬೆಳವಣಿಗೆ ಸಾಧಿಸಿದೆ ಎಂದು ಮೂಲಗಳು ತಿಳಿಸಿವೆ. ಸದ್ಯ ಮಹೇಶ್ ಶೆಟ್ಟಿ ತಿಮರೋಡಿ ಬೆಂಬಲಿಗರು ಸೇರಿದಂತೆ 11 ಜನರಿಗೆ ಎಸ್‌ಐಟಿ ಅಧಿಕಾರಿಗಳು ವಿಚಾರಣೆಗೆ



ಹಾಜರಾಗುವಂತೆ ನೋಟಿಸ್ ನೀಡಿದ್ದು, ಈಗಾಗಲೇ 6 ಮಂದಿಯನ್ನು ವಿಚಾರಣೆ ನಡೆಸಿದ್ದಾರೆ. ಕಳೆದ ಒಂದು ವರ್ಷದಿಂದ ಹಣ ವರ್ಗಾವಣೆ ಆಗಿರುವ ಬಗ್ಗೆಯೂ ಎಸ್‌ಐಟಿ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ತನಿಖೆ ಆಳಕ್ಕೆ ಇಳಿಯುತ್ತಿದ್ದಂತೆ ಪ್ರಕರಣದಲ್ಲಿ ಇನ್ನಷ್ಟು ಮಂದಿ ಹಣಕಾಸಿನ ನೆರವು ನೀಡಿರುವ ಬಗ್ಗೆಯೂ ಮಾಹಿತಿ ಸಿಕ್ಕಿದ್ದು, ಅವರಿಗೂ ಎಸ್‌ಐಟಿ ನೋಟಿಸ್ ನೀಡುವ ಸಾಧ್ಯತೆಗಳಿವೆ.ಈಗಾಗಲೇ ಷಡ್ಯಂತ್ರದ ಬಗ್ಗೆ ಹಲವರ ಪಾತ್ರದ ಬಗ್ಗೆ ಆರೋಪಗಳು ಕೇಳಿಬರುತ್ತಿದ್ದು, ಇದುವರೆಗೂ ಯಾರನ್ನೂ ಬಂಧಿಸಿಲ್ಲ.

## ಪಾಕ್ ವಿಮಾನಗಳಿಗೆ ನಿರ್ಬಂಧ ವಿಸ್ತರಿಸಿದ ಭಾರತ

**ನವದೆಹಲಿ:** ಪಾಕಿಸ್ತಾನ ನಾಗರಿಕ ಮತ್ತು ಮಿಲಿಟರಿ ವಿಮಾನಗಳಿಗೆ ತನ್ನ ವಾಯುಪ್ರದೇಶದ ನಿರ್ಬಂಧವನ್ನು ಭಾರತ ಅಕ್ಟೋಬರ್ 24 ರವರೆಗೆ ವಿಸ್ತರಿಸಿದೆ. ನೆರೆಯ ರಾಷ್ಟ್ರ ಪಾಕಿಸ್ತಾನ ಸಹ ಭಾರತೀಯ ವಿಮಾನಗಳಿಗೆ ತನ್ನ ವಾಯುಪ್ರದೇಶವನ್ನು ಅಕ್ಟೋಬರ್ 24 ರವರೆಗೆ ನಿರ್ಬಂಧಿಸಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಏಪ್ರಿಲ್‌ನಿಂದ ಎರಡೂ ದೇಶಗಳು ಪರಸ್ಪರ ವಿಮಾನಗಳಿಗೆ ತಮ್ಮ ವಾಯುಪ್ರದೇಶವನ್ನು ಬಂದ್ ಮಾಡಿವೆ. ವಾಯುಪ್ರದೇಶ ನಿರ್ಬಂಧವನ್ನು ವಿಸ್ತರಿಸಿದ್ದಕ್ಕಾಗಿ ಭಾರತ ಮತ್ತು ಪಾಕಿಸ್ತಾನ ಎರಡೂ ದೇಶಗಳು ಯುಪಡೆಯವರಿಗೆ(NOTAM) ಪ್ರತ್ಯೇಕ ನೋಟಿಸ್‌ಗಳನ್ನು ನೀಡಿವೆ.

## ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ

### 70 ಸಾವಿರಕ್ಕೂ ಅಧಿಕ ಮಂದಿಯ ಸಮೀಕ್ಷೆ ಪೂರ್ಣ

**ಬೆಂಗಳೂರ:** ರಾಜ್ಯಾದ್ಯಂತ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯು ನಡೆಯುತ್ತಿದ್ದು, ಎರಡು ದಿನಗಳು ಸೇರಿ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿರುವ 18,487 ಕುಟುಂಬಗಳ 71,004 ಮಂದಿಯ ಸಮೀಕ್ಷೆಯನ್ನು ಪೂರ್ಣಗೊಳಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಆಯೋಗವು ಮಾಹಿತಿ ನೀಡಿದೆ. ಸೋಮವಾರದಂದು 10,642 ಮಂದಿಯ ಸಮೀಕ್ಷೆಯ ಹಾಗೂ ಮಂಗಳವಾರದಂದು 60,362 ಮಂದಿಯ ಸಮೀಕ್ಷೆಯು ಪೂರ್ಣಗೊಂಡಿದೆ ಎಂದು ಹಿಂದುಳಿದ ವರ್ಗಗಳ ಆಯೋಗದ ಸದಸ್ಯ ಕಾರ್ಯದರ್ಶಿ ಕೆ.ಎ. ದಯಾನಂದ್ ತಿಳಿಸಿದ್ದಾರೆ.

ಬಾಗಲಕೋಟೆ ಜಿಲ್ಲೆಯ 7,496, ಬಳ್ಳಾರಿ 564, ಬೆಳಗಾವಿ 6,783, ಬೆಂಗಳೂರು ಗ್ರಾಮಾಂತರ 284, ಬೆಂಗಳೂರು ನಗರ 187, ಬೀದರ್ 861, ಚಾಮರಾಜನಗರ 471, ಚಿಕ್ಕಬಳ್ಳಾಪುರ 123, ಚಿಕ್ಕಮಗಳೂರು 2,664, ಚಿತ್ರದುರ್ಗ 5,074, ದಕ್ಷಿಣ ಕನ್ನಡ 431, ದಾವಣಗೆರೆ 4,377, ಧಾರವಾಡ 721, ಗದಗ 6,903, ಹಾಸನ ಜಿಲ್ಲೆಯಲ್ಲಿ 1,519 ಮಂದಿಯ ಸಮೀಕ್ಷೆ ಪೂರ್ಣಗೊಂಡಿದೆ. ಹಾವೇರಿ 10,820, ಕಲಬುರಗಿ 3,996, ಕೊಡಗು 1,124, ಕೋಲಾರ 233, ಕೊಪ್ಪಳ 1,144, ಮಂಡ್ಯ 4,398, ಮೈಸೂರು 1,018, ರಾಯಚೂರು 2,129, ರಾಮನಗರ 759, ಶಿವಮೊಗ್ಗ 1,184, ತುಮಕೂರು 21, ಉಡುಪಿ 231, ಉತ್ತರ ಕನ್ನಡ 3,475, ವಿಜಯನಗರ 773, ವಿಜಯಪುರ 743 ಮತ್ತು ಯಾದಗಿರಿ ಜಿಲ್ಲೆಯಲ್ಲಿ 498 ಮಂದಿಯ ಸಮೀಕ್ಷೆ ಪೂರ್ಣಗೊಂಡಿದೆ ಎಂದು ಆಯೋಗವು ಅಂಕಿ-ಅಂಶಗಳನ್ನು ಪ್ರಕಟಿಸಿದೆ.

### ಕಬ್ಬಿನ ಬೆಳೆ ಮಧ್ಯೆ ಬೆಳೆದಿದ್ದ 441 ಕೆಜಿ ಗಾಂಜಾ ಜಪ್ತಿ

## ಬೆಳಗಾವಿ ಇತಿಹಾಸದಲ್ಲೇ ದೊಡ್ಡ ಪ್ರಕರಣ

**ಚಿಕ್ಕೋಡಿ (ಬೆಳಗಾವಿ):** ಕಬ್ಬಿನ ಬೆಳೆಯ ಮಧ್ಯೆ ಅಕ್ರಮವಾಗಿ ಗಾಂಜಾ ಬೆಳೆದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ. ಜೊತೆಗೆ 20 ಲಕ್ಷಕ್ಕೂ ಹೆಚ್ಚು ಮೌಲ್ಯದ 441 ಕೆಜಿ ಗಾಂಜಾವನ್ನು ವಶಪಡಿಸಿಕೊಂಡಿದ್ದಾರೆ. ಬೆಳಗಾವಿ ಸೈಬರ್ ಮತ್ತು ರಾಯಭಾಗ ಪೊಲೀಸರು ಜಂಟಿವಾಗಿ ಈ ಕಾರ್ಯಾಚರಣೆ ನಡೆಸಿದ್ದಾರೆ.

ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ನಿಡಗುಂದಿ ಗ್ರಾಮದ ಸಿಂಗಾಡಿ ಮಾಳಪ್ಪ ಹಿರೇಕೋಡಿ ಬಂಧಿತ ಆರೋಪಿ. ಇವರು ತಮ್ಮ ಒಂದು ಎಕರೆ ಕಬ್ಬಿನ ಗದ್ದೆಯ ಮಧ್ಯೆ ಅಕ್ರಮವಾಗಿ ಗಾಂಜಾ ಬೆಳೆ ಬೆಳೆದಿರುವ ಬಗ್ಗೆ ಪೊಲೀಸರಿಗೆ ಮಾಹಿತಿ ಬಂದಿತ್ತು. ಈ ಖಚಿತ ಮಾಹಿತಿ ಮೇರೆಗೆ ಬೆಳಗಾವಿ ಸೈಬರ್ ಮತ್ತು ರಾಯಭಾಗ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಪತ್ತೆ ಮಾಡಿದ್ದಾರೆ. ಈ ಕುರಿತು ಬೆಳಗಾವಿ ನಗರದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಎಸ್‌ಪಿ ಭೀಮಾಶಂಕರ್ ಗುಳೇದ, ಕಬ್ಬಿನ ಗದ್ದೆಯಲ್ಲಿ ಅಕ್ರಮವಾಗಿ ಬೆಳೆದಿದ್ದ 441 ಕೆಜಿ ತೂಕದ ಗಾಂಜಾ ಜಪ್ತಿ ಮಾಡಲಾಗಿದೆ. ಓರ್ವ ಆರೋಪಿಯನ್ನು ಬಂಧಿಸಲಾಗಿದ್ದು, ಸದ್ಯ ಆತ ನ್ಯಾಯಾಂಗ ಬಂಧನಲ್ಲಿದ್ದಾನೆ ಎಂದು ತಿಳಿಸಿದರು.

### ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಿ.ಇ.ಓ.ರಾಹುಲ್ ಶಿಂಧೆ ಸೂಚನೆ

## ಸ್ವಚ್ಛತಾಗಾರರಿಗೆ ಮೆಡಿಕಲ್ ಚೆಕ್ ಅಪ್ ಕಡ್ಡಾಯ

**ಬೆಳಗಾವಿ:** ಗ್ರಾಮ ಪಂಚಾಯತಿಗಳ ವ್ಯಾಪ್ತಿಯಡಿ ಕಾರ್ಯನಿರ್ವಹಿಸುತ್ತಿರುವ ಸ್ವಚ್ಛತಾಗಾರರ ಆರೋಗ್ಯದ ಹಿತದೃಷ್ಟಿಯಿಂದ ತಾಲ್ಲೂಕಾ ಮಟ್ಟದ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಆರೋಗ್ಯ ತಪಾಸಣೆ ಕೈಗೊಳ್ಳಬೇಕು ಮತ್ತು ಸ್ವಚ್ಛತಾಗರರ ಸುರಕ್ಷತೆಗಾಗಿ ಕಡ್ಡಾಯವಾಗಿ ಸುರಕ್ಷಿತ ಪರಿಕರಗಳಾದ ಗ್ಲೌಜ, ಎಪರಾನ್, ಹೆಲ್ಮೆಟ್, ಗಮ್ ಬೂಟ್, ಸ್ಪೆಕ್ಟ್ ಮತ್ತು ಸ್ಯಾನಿಟೈಜರ್ ಗಳನ್ನು ನೀಡಬೇಕೆಂದು ಎಲ್ಲ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಅವರು ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಜಿಲ್ಲಾ ಹಾಗೂ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸ್ವಚ್ಛ ಭಾರತ ಮಿಷನ್ ಗೆ ಸಂಬಂಧಿಸಿದಂತೆ ಜಿಲ್ಲೆಯಾದ್ಯಂತ 13 ತಾಲ್ಲೂಕುಗಳಲ್ಲಿ ಪಿ.ಡಬ್ಲ್ಯೂ.ಎಮ್. ಘಟಕಗಳಲ್ಲಿ ಪ್ಲಾಸ್ಟಿಕ್ ವೇಸ್ಟ ಮ್ಯಾನೇಜಮೆಂಟ ಮಷೀನ್ಗಳನ್ನು ಅಳವಡಿಸಿ ಅಕ್ಟೋಬರ್ -2 ರಂದು ಉದ್ಘಾಟನೆಯನ್ನು ಮಾಡಬೇಕು. ಅಲ್ಲದೇ ಅಕ್ಟೋಬರ್ -2 ರಂದು ವಿಶೇಷ ಗ್ರಾಮ ಸಭೆ ನಡೆಸಿ ಮಾದರಿ ಗ್ರಾಮಗಳ ಘೋಷಣೆ ಮಾಡುವುದು. ಬಾಕಿ ಇರುವ ವೈಯಕ್ತಿಕ ಗೃಹ ಶೌಚಾಲಯಗಳನ್ನು ಪೂರ್ಣಗೊಳಿಸಿ ಪ್ರಗತಿ ಸಾಧಿಸಿಸುವುದು.ಗೋಕಾಕ ತಾಲ್ಲೂಕಿನಲ್ಲಿ ನಿರ್ಮಾಣವಾಗುತ್ತಿರುವ ಎಮ್.ಆರ್.ಎಫ? (ವಸ್ತು ಪುಸ್ಸಂಪಾದನಾ



ಸೌಲಭ್ಯ) ಘಟಕವನ್ನು ತ್ವರೀತಗತಿಯಲ್ಲಿ ಕಾಮಗಾರಿ ಮುಕ್ತಾಯಗೊಳಿಸಲು ರಾಹುಲ್ ಶಿಂಧೆ ಅವರು ತಿಳಿಸಿದರು.

ಸರ್ಕಾರದ ಆಯವ್ಯಯದಲ್ಲಿ ಘೋಷಿಸಿದ ಕಾರ್ಯಕ್ರಮಗಳಾದ ಸವಳು-ಜವಳು (ಭಾಧಿತ ಕೃಷಿ ಭೂಮಿಯ ಅಭೀವೃದ್ಧಿ), ಬೂದು ನೀರು ನಿರ್ವಹಣಾ ಘಟಕ 1.0 ಹಾಗೂ 2.0, ಒಗ್ಗೂಡಿಸುವಿಕೆಯಡಿ ಸ್ಪೈಸ್ ಕ್ರಾಪ್, ಹಸಿರು ಪಥ, ರೈತ ಪಥ ಹಾಗೂ ಕೃಷಿ ಕವಚ ದಡಿ ಕೈಗೆತ್ತಿಕೊಂಡ ಕಾಮಗಾರಿಗಳನ್ನು ಆದ್ಯತೆ ಅನುಷ್ಠಾನಗೊಳಿಸಲು ನಿರ್ದೇಶನ ನೀಡಿದರು. ಮನರೇಗಾ ಯೋಜನೆಯ ಗ್ರಾಮೀಣ ಜನರಿಗೆ ನಿರಂತರ ಕೆಲಸ ನೀಡುವುದು. ಎನ್.ಎಮ್.ಎಮ್. ಎಸ್ ಕುರಿತು ಪ್ರತಿ ನಿತ್ಯ ಗ್ರಾಮ ಪಂಚಾಯತ ಮತ್ತು ತಾಲ್ಲೂಕು ಪಂಚಾಯತಿಯಿಂದ ಸಂಬಂಧ ಪಟ್ಟ ಅಧಿಕಾರಿಗಳು ಶೇ 100 ರಷ್ಟು ಪರಿಶೀಲನೆ ಮಾಡುವುದು ಮುಂದಿನ ಸಭೆಯಲ್ಲಿ ಪ್ರಗತಿ ಪರಿಶೀಲನೆ ಪ್ರಗತಿ ಕಡಿಮೆ ಇದ್ದಲ್ಲಿ ಅಂತಹವರ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಸಾಮಾಜಿಕ ಲೆಕ್ಕ ಪರಿಶೋದನೆ ಕುರಿತು ಬಾಕಿ ಇರುವ ಕಂಡಿಕೆಗಳನ್ನು ಅಡಹಾಕ್ ಕಮಿಟಿಯಲ್ಲಿ ಇತ್ಯರ್ಥಗೊಳಿಸಲು ತಾ.ಪಂ. ಇಒ ಗಳಿಗೆ ಹೇಳಿದರು.

ಓಂಬುಡ್ಸ ಪರ್ಸನ್ ಸೂಚಿಸಿರುವ ವಸೂಲಾತಿ ಮೊತ್ತವನ್ನು ವಸೂಲಾತಿ ಮಾಡಲು ಸೂಚಿಸಿದರು. ಅತಿ ಹೆಚ್ಚು ಬಾಕಿ ಉಳಿದ 192.18 ಲಕ್ಷ ವಸೂಲಾತಿ ಬಗ್ಗೆ ಕ್ರಮ ವಹಿಸುಂತೆ ರಾಯಬಾಗ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಿಳಿಸಿದರು.

"ಸಕಾಲ ಯೋಜನೆ" ಯಡಿ ಕಾಲಮಿತಿ ಮೀರಿ ಬಾಕಿ ಉಳಿದ ಅರ್ಜಿಗಳನ್ನು ಮುಂದಿನ 2 ದಿನದಲ್ಲಿ ವಿಲೇವಾರಿ ಮಾಡಲು ಕ್ರಮಕೈಗೊಳ್ಳುವುದು,.

15ನೇ ಹಣಕಾಸು ಯೋಜನೆ ಅಡಿ ಕಾಮಗಾರಿಗಳ ಸ್ಥಳ ಪರಿಶೀಲನೆ ಮಾಡಿ, ನೈಜ ಕಾಮಗಾರಿಗಳಿಗೆ ಪಾವತಿ ಮಾಡಿ ಪ್ರಗತಿ ಸಾಧಿಸುವುದು ಮತ್ತು ಬಾಕಿ ಇರುವ ಗ್ರಾಮ ಪಂಚಾಯಿತಿ ಕಟ್ಟಡಗಳ ನಿರ್ಮಾಣ ಕಾರ್ಯವನ್ನು ತ್ವರಿತ ಗತಿಯಲ್ಲಿ ಪೂರ್ಣಗೊಳಿಸಲು ಸೂಚಿಸಿದರು.

ಜಲ ಜೀವನ ಮಿಷನ್ ಯೋಜನೆಯ ಕಾಮಗಾರಿಗಳನ್ನು ಪೂರ್ಣಗೊಳಿಸಿ ಗ್ರಾಮ ಪಂಚಾಯಿತಿಗೆ ಹಸ್ತಾಂತರ ಮಾಡಿ ನಂತರ ಹರ್ ಘರ್ ಜಲ್ ಗ್ರಾಮ ಎಂದು ಘೋಷಣೆ ಮಾಡಲು ಕ್ರಮವಹಿಸಲು ಸೂಚಿಸಿದರು.

ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿನ ಮೇಲ್ಮಟ್ಟದ ನೀರು ಸಂಗ್ರಹಣಾ ಘಟಕಗಳನ್ನು ಮಾರ್ಗಸೂಚಿಗಳನ್ವಯ ಸ್ವಚ್ಛತೆ ಹಾಗೂ ಸುರಕ್ಷತೆಗೆ ಕ್ರಮ ವಹಿಸಬೇಕು. ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ಗಮನ ಹರಿಸಬೇಕೆಂದು ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳಾದ ಬಸವರಾಜ ಹೆಗ್ಗನಾಯಕ, ಬಸವರಾಜ ಅಡವಿಮಠ, ಯೋಜನಾ ನಿರ್ದೇಶಕ ರವಿ ಎನ್ ಬಂಗಾರೆಪ್ಪನವರ, ಮುಖ್ಯ ಯೋಜನಾಧಿಕಾರಿ ಗಂಗಾಧರ ದಿವಟರ, ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.

## ಅ.1ರಿಂದ: ನಗದು ರಹಿತ ವೈದ್ಯಕೀಯ ಚಿಕಿತ್ಸೆ ಯೋಜನೆ

**ಬೆಂಗಳೂರು:** ರಾಜ್ಯ ಸರಕಾರಿ ನೌಕರರು ಮತ್ತು ಕುಟುಂಬ ಸದಸ್ಯರಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸುವ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ಅ.1ರಿಂದ ಜಾರಿಗೆ ಬರಲಿದ್ದು, ಈ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ರಾಜ್ಯ ಸರಕಾರ ಮಂಗಳವಾರದಂದು ಹೊಸ ಮಾರ್ಗಸೂಚಿಗಳನ್ನು ಹೊರಡಿಸಿದೆ.

ಈ ಯೋಜನೆಗೆ ಸರಕಾರಿ ನೌಕರರ ವೇತನದಿಂದ ಮಾಸಿಕ ವಂತಿಕೆಯನ್ನು ಕಡಿತಗೊಳಿಸಲಾಗುವುದು. 2025ರ ಅಕ್ಟೋಬರ್ ವೇತನದಿಂದ ಈ ವಂತಿಕೆ ಕಡಿತ ಆರಂಭವಾಗಲಿದೆ. ನೌಕರರ ಗ್ರೂಪ್‌ಗೆ ಅನುಗುಣವಾಗಿ ವಂತಿಕೆ ಕಡಿತವಾಗಲಿದ್ದು, ಗ್ರೂಪ್ - ಎ ನೌಕರರಿಗೆ 1,000 ರೂ., ಗ್ರೂಪ್ - ಬಿ ನೌಕರರಿಗೆ 500 ರೂ., ಗ್ರೂಪ್ - ಸಿ ನೌಕರರಿಗೆ 350 ರೂ., ಗ್ರೂಪ್ - ಡಿ ನೌಕರರಿಗೆ 250 ರೂ. ವಂತಿಕೆ ಕಡಿತವಾಗಲಿದೆ. ಸರಕಾರಿ ನೌಕರರ ವೇತನದಿಂದ ಕಡಿತಗೊಂಡ ವಂತಿಕೆಯನ್ನು ಎಲ್ಲ ವೇತನ ವಿತರಣಾ ಅಧಿಕಾರಿಗಳು(ಡಿಡಿಒ) ಖಜಾನೆ-2ರ ಮೂಲಕ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ನ ಬ್ಯಾಂಕ್ ಖಾತೆಗೆ ಜಮಾ ಮಾಡಬೇಕಿದೆ.

## ಸಾಧಕರನ್ನು ಗುರುತಿಸಿ ಸನ್ಮಾನಿಸುವುದೇ ದೊಡ್ಡ ಸಾಧನೆ

**ಮೈಸೂರು:** ಸಾಧಕರ ಸಾಧನೆಯನ್ನು ಗುರುತಿಸಿ ಅವರನ್ನು ಸನ್ಮಾನಿಸುವುದೇ ನಿಜವಾದ ದೊಡ್ಡ ಸಾಧನೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಕೃಷ್ಣಮೂರ್ತಿಪುರಂನಲ್ಲಿರುವ ಹೋಟೆಲ್ ಮಾಲೀಕರ ಪತ್ತಿನ ಸಹಕಾರ ಸಂಘ ಹಾಗೂ ಹೋಟೆಲ್ ಮಾಲೀಕರ ಸಂಘ ಹಾಗೂ ಹೋಟೆಲ್ ಮಾಲೀಕರ ಧರ್ಮದತ್ತಿ ಸಹಯೋಗದೊಂದಿಗೆ ಮಹಿಳಾ ಹೋಟೆಲ್ ಉದ್ಯಮಿಗಳು ಹಾಗೂ ಸಮಾಜದ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಮಹಿಳಾ ಶ್ರಮಿಕರನ್ನು ಅಭಿನಂದಿಸಿ ಮಾತನಾಡಿದ ಸಚಿವರು, ಸಮಾಜದಲ್ಲಿ ಸಾಧಕರನ್ನು ಗುರುತಿಸುವ ಕೆಲಸ ಆಗಬೇಕಿದೆ ಎಂದರು.

ಇವತ್ತಿನ ದಿನಗಳಲ್ಲಿ ಹೋಟೆಲ್ ಉದ್ಯಮ ಎಂಬುದು ತಮಾಷೆ ಅಲ್ಲ. ಎಲ್ಲಾ ವರ್ಗದವರನ್ನು ಅತಿಥಿ ದೇವೋಭವ ಅಂತ ಸೇವೆ ಮಾಡುವುದೇ ಹೋಟೆಲ್ ಉದ್ಯಮದ ಕೆಲಸ. ಮೈಸೂರಿನ ಹೋಟೆಲ್ ಉದ್ಯಮಿಗಳು, ಸಹಕಾರ ಬ್ಯಾಂಕ್ ಸ್ಥಾಪಿಸುವ ಮೂಲಕ ಎಲ್ಲರಿಗೂ ಆಶ್ರಯ ನೀಡುತ್ತಿದ್ದಾರೆ ಎಂದು ಹೇಳಿದರು.

ನಾನು ಕೂಡ ಬೆಳಗಾವಿಯಲ್ಲಿ ಹೋಟೆಲ್ ಹೊಂದಿರುವೆ, ಎರಡು ಸಕ್ಕರೆ ಕಾರ್ಖಾನೆಯನ್ನು ಹೊಂದಿರುವೆ, ಹೀಗಾಗಿ ಹೋಟೆಲ್ ಉದ್ಯಮದ




ಬಗ್ಗೆ ಅಲ್ಪ ಸ್ವಲ್ಪ ತಿಳಿದುಕೊಂಡಿರುವೆ ಎಂದರು.

ಸಂಘಟನೆ, ಸಂಘ- ಸಂಸ್ಥೆಗಳನ್ನು ಕಟ್ಟುವುದು ತಮಾಷೆಯ ಮಾತಲ್ಲ. ಹಸಿದವರಿಗೆ ಅನ್ನ ಹಾಕುವ ಮೂಲಕ ಸಾಮಾಜಿಕ ಕಾರ್ಯಕ್ರಮವನ್ನು ಹೋಟೆಲ್ ಉದ್ಯಮದವರು ಮಾಡುತ್ತಿದ್ದಾರೆ. 25 ವರ್ಷಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂದು ಈ ಸೊಸೈಟಿಗೆ ಅಡಿಗಲ್ಲು ಹಾಕಿದ್ದರು. ಅವರೇ ಬೆಳ್ಳಿ ಹಬ್ಬದ ಸಮಾರಂಭವನ್ನು ಉದ್ಘಾಟನೆ ಮಾಡಿದ್ದಾರೆ. ಇದು ನಿಜಕ್ಕೂ ಸೊಸೈಟಿಯ ದೊಡ್ಡ ಸಾಧನೆ. ಈ ಹೋಟೆಲ್ ಸೊಸೈಟಿ ಇನ್ನೂ ಎತ್ತರಕ್ಕೆ ಬೆಳೆಯಲಿ ಎಂದು ಹಾರೈಸಿದರು.

ಇವತ್ತು ಕರಾವಳಿ ಭಾಗದ ಉದ್ಯಮಿಗಳು ಅದರಲ್ಲೂ ಹೋಟೆಲ್ ಉದ್ಯಮಿಗಳು ದೇವಸ್ಥಾನದ ಜೀರ್ಣೋದ್ಧಾರಕ್ಕೆ ಒಂದೊಂದು ಕೋಟಿ ರೂ. ದೇಣಿಗೆ ನೀಡುತ್ತಾರೆ. ಇದು ಅವರ ಧನ್ಯತೆಯನ್ನು ತೋರುತ್ತದೆ ಎಂದರು.

ವಿವಿಧ ಸ್ತರದ ಮಹಿಳೆಯರನ್ನು ಗುರುತಿಸಿ ಸನ್ಮಾನಿಸಿರುವುದು ನಿಜಕ್ಕೂ ಹೆಮ್ಮೆಯ ವಿಷಯ. ಅದರಲ್ಲೂ ನರ್ಸ್ ಗಳ ಸೇವೆ ನಿಜಕ್ಕೂ ಶ್ಲಾಘನೀಯ, ನಾನು ಅಪಘಾತದಿಂದ ಆಸ್ಪತ್ರೆಯಲ್ಲಿದ್ದಾಗ ನರ್ಸ್ ಗಳೇ ನನಗೆ ಧೈರ್ಯ ತುಂಬಿದರು ಎಂದು ಹೇಳಿದರು.

ಈ ವೇಳೆ ಹೋಟೆಲ್ ಮಾಲೀಕರ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾದ ನಾರಾಯಣ ವಿ ಹೆಗಡೆ, ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷರಾದ ನಾರಾಯಣ ಗೌಡ ಸಿ, ರವಿ ಶಾಸ್ತ್ರಿ, ಆನಂದ್ ಎಂ.ಶೆಟ್ಟಿ, ಸುಮಿತ್ರ ಎ ತಂತ್ರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಸದನದ 11 ಸದಸ್ಯರ ಪರಿಶೀಲನಾ ಸಮಿತಿ ರಚನೆ

## ಜನಸಂದಣಿ ನಿಯಂತ್ರಣ ಮಸೂದೆ

**ಬೆಂಗಳೂರು:** ಕರ್ನಾಟಕ ವಿಧಾನಸಭೆ ಸ್ಪೀಕರ್ ಯು ಟಿ ಖಾದರ್ 'ಕರ್ನಾಟಕ ಜನಸಂದಣಿ ನಿಯಂತ್ರಣ (ಕಾರ್ಯಕ್ರಮಗಳು ಮತ್ತು ಸಭೆ ನಡೆಯುವ ಸ್ಥಳಗಳಲ್ಲಿ ಜನಸಂದಣಿಯನ್ನು ನಿರ್ವಹಿಸುವುದು) ಮಸೂದೆ, 2025' ನ್ನು ಪರಿಶೀಲಿಸಲು ಗೃಹ ಸಚಿವ ಜಿ ಪರಮೇಶ್ವರ ನೇತೃತ್ವದಲ್ಲಿ ಸದನದ 11 ಸದಸ್ಯರ "ಪರಿಶೀಲನಾ ಸಮಿತಿ"ಯನ್ನು ರಚಿಸಿದ್ದಾರೆ.

ಕಳೆದ ತಿಂಗಳು ನಡೆದ ವಿಧಾನಮಂಡಲ ಅಧಿವೇಶನದಲ್ಲಿ, ಪ್ರಸ್ತಾವಿತ ಶಾಸನ ಪ್ರತಿಭಟನೆಗಳನ್ನು ಕಡಿಮೆ ಮಾಡಬಹುದು ಮತ್ತು ಸಾಂಸ್ಕೃತಿಕ ಮತ್ತು ಧಾರ್ಮಿಕ ಕಾರ್ಯಕ್ರಮಗಳ ಮೇಲೆ ಪರಿಣಾಮ ಬೀರಬಹುದು ಎಂಬ ಕಳವಳ ವ್ಯಕ್ತವಾಗತೊಡಗಿತ್ತು. ವಿರೋಧ ಪಕ್ಷಗಳು ಕರ್ನಾಟಕದ ಕಾಂಗ್ರೆಸ್ ಸರ್ಕಾರವನ್ನು ಮಸೂದೆಯನ್ನು ವಿವರವಾದ ಚರ್ಚೆ ಮತ್ತು ಪರಿಶೀಲನೆಗಾಗಿ ಸದನ ಸಮಿತಿಗೆ ಉಲ್ಲೇಖಿಸುವಂತೆ ಒತ್ತಾಯಿಸಿದ್ದವು. ಜೂನ್ 4 ರಂದು ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ನಡೆದ ಕಾಲ್ತುಳಿತದಲ್ಲಿ 11 ಜನರು ಸಾವನ್ನಪ್ಪಿದ ನಂತರ ಸರ್ಕಾರ ಈ ಮಸೂದೆಯನ್ನು ಪರಿಚಯಿಸಿದೆ.



ದಂಡ ವಿಧಿಸುವ ನಿಬಂಧನೆಗಳನ್ನು ಹೊಂದಿರುವ ಮಸೂದೆಯು ಜನಸಂದಣಿಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವುದು ಮತ್ತು ಕಾರ್ಯಕ್ರಮಗಳು ಮತ್ತು ಸಮಾರಂಭಗಳಲ್ಲಿ ಸಾಮೂಹಿಕ ಸಭೆಗಳನ್ನು ನಿರ್ವಹಿಸುವುದು ಮತ್ತು ಕಾನೂನುಬಾಹಿರ ಸಭೆಗಳನ್ನು ತಡೆಯುವ ಗುರಿಯನ್ನು ಹೊಂದಿದೆ.

ಸದನದ ನಿರ್ಣಯದ ಪ್ರಕಾರ, ಸ್ಪೀಕರ್ ಅವರು ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ವ್ಯವಹಾರ ನಡವಳಿಕೆ ನಿಯಮಗಳ ನಿಯಮ 247 ರ ಅಡಿಯಲ್ಲಿ ಮಸೂದೆಯನ್ನು ಪರಿಶೀಲಿಸಿ ವರದಿ ಸಲ್ಲಿಸಲು ವಿಧಾನಸಭೆಯ ಸದಸ್ಯರನ್ನು ಒಳಗೊಂಡ ಪರಿಶೀಲನಾ ಸಮಿತಿಯನ್ನು ರಚಿಸಿದ್ದಾರೆ ಎಂದು ಸೆ. 19 ರಂದು ಮಾಧ್ಯಮಗಳಿಗೆ ಬಿಡುಗಡೆಯಾದ ವಿಧಾನಸಭೆ ಸಚಿವಾಲಯದ ಟಿಪ್ಪಣಿ ತಿಳಿಸಿದೆ.

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ ಕೆ ಪಾಟೀಲ್, ಶಾಸಕರು - ರಿಜ್ವಾನ್ ಅರ್ಷದ್, ಶ್ರೀನಿವಾಸಯ್ಯ ಎನ್, ರವಿಶಂಕರ್ ಡಿ, ಶ್ರೀನಿವಾಸ್ ವಿ ಮಾನೆ, ಪ್ರಕಾಶ್ ಕೆ ಕೋಳಿವಾಡ್, ಎಚ್ ಡಿ ತಮ್ಮಯ್ಯ, ವಿ ಸುನಿಲ್ ಕುಮಾರ್, ಎಸ್ ಆರ್ ವಿಶ್ವನಾಥ್ ಮತ್ತು ಜಿ ಡಿ ಹರೀಶ್ ಗೌಡ ಅವರನ್ನು ಸಮಿತಿ ಒಳಗೊಂಡಿದೆ.

ಜನಸಂದಣಿಯನ್ನು ನಿಯಂತ್ರಿಸುವ ಉದ್ದೇಶದಿಂದ ಸರ್ಕಾರ ಈ ಮಸೂದೆಯನ್ನು ತಂದಿದೆ ಎಂದು ಹೇಳಿದ್ದ ಗೃಹ ಸಚಿವ ಡಾ.ಜಿ ಪರಮೇಶ್ವರ್, ಸಭೆಗಳಿಗೆ ಅಗತ್ಯವಾದ ಅನುಮತಿಗಳನ್ನು ಸಹ ಈ ಮಸೂದೆ ಎತ್ತಿ ತೋರಿಸುತ್ತದೆ ಮತ್ತು ಯಾವುದೇ ಅಹಿತಕರ ಘಟನೆಗಳು ನಡೆದಲ್ಲಿ ಕಾರ್ಯಕ್ರಮ ಆಯೋಜಕರನ್ನು ಹೊಣೆಗಾರರನ್ನಾಗಿ ಮಾಡಲು ಅವಕಾಶ ನೀಡುತ್ತದೆ ಎಂದು ತಿಳಿಸಿದ್ದರು.

# ಐತಿಹಾಸಿಕ ಸ್ಮಾರಕ ತಾಜಬಾವಡಿಗೆ ಜಿಲ್ಲಾಧಿಕಾರಿ ಭೇಟಿ



**ವಿಜಯಪುರ:** ನಗರದಲ್ಲಿರುವ ಐತಿಹಾಸಿಕ ಬಾವಿಯಾದ ತಾಜಬಾವಡಿ ಸ್ಮಾರಕಕ್ಕೆ ಜಿಲ್ಲಾಧಿಕಾರಿಗಳಾದ ಡಾ.ಆನಂದ. ಕೆ ನೇತೃತ್ವದಲ್ಲಿ ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ಮಾಡಿದರು. ಅಡಾಪ್ಟ ಎ ಮೊನೊಮೆಂಟ್ ಯೋಜನೆಯಡಿ ತಾಜಬಾವಡಿ ಸ್ಮಾರಕವನ್ನು World Monument Fund India Associations Mumbai ಸಂಸ್ಥೆ ಅವರು ದತ್ತು ಪಡೆದಿದ್ದು, ಈ ಸ್ಮಾರಕದಲ್ಲಿ ಸಂರಕ್ಷಣೆ ಮತ್ತು ಪ್ರವಾಸಿ ಮೂಲಭೂತ ಸೌಕರ್ಯಗಳು, ಸೌಂದರೀಕರಣ, ಸುಧಾರಿತ ಪ್ರವಾಸಿ ಸೌಕರ್ಯಗಳನ್ನು ಒದಗಿಸಿ ದೇಶಿ-ವಿದೇಶಿ ಪ್ರವಾಸಿಗರನ್ನು ಆಕರ್ಷಿಸಲು ಹಲವು ಯೋಜನೆ ರೂಪಿಸಿ ಹಮ್ಮಿಕೊಂಡಿರುತ್ತಾರೆ.

ತಾಜಬಾವಡಿ ಅಭಿವೃದ್ಧಿಗೆ ಹಾಗೂ ಮೂಲಭೂತ ಸೌಕರ್ಯ ಒದಗಿಸಲು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ ಜರುಗಿಸಲು ಡಿಸಿ ಸೂಚಿಸಿದರು.

ಕಲುಷಿತ ನೀರು ಬಾವಡಿ ಸೇರದಂತೆ ಅಗತ್ಯ ಕ್ರಮವಹಿಸುವುದು.ಡಿಸೆಂಬರ ಮಾಹೆಯೊಳಗೆ ನೀರನ್ನು ಸಾರ್ವಜನಿಕ ಬಳಕೆಗೆ ಉಪಯೋಗಿಸಲು ಒದಗಿಸಬೇಕು. ತಾಜಬಾವಡಿಯ ಆವರಣದಲ್ಲಿರುವ ವಿದ್ಯುತ್ ಪರಿವರ್ತಕ ಬೇರೆಡೆ ಸ್ಥಳಾಂತರಕ್ಕೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಹಿನ್ನೆಲೆಯಲ್ಲಿ ಕರಪತ್ರ ಬಿಡುಗಡೆಗೊಳಿಸಿದರು.

ಮಹಾನಗರಪಾಲಿಕೆ ಆಯುಕ್ತ ವಿಜಯ ಮೆಕ್ಕಳಿಕಿ, ಪ್ರವಾಸೋದ್ಯಮ ಇಲಾಖೆಯ ಅಧಿಕಾರಿ ಅರವಿಂದ ಹೂಗಾರ, World Monument Funds India Associations, Mumbai ಸಂಸ್ಥೆಯ ಅನಾಬೇಲ್ ಲೋಪೆಜ್ ಯೋಜನಾ ನಿರ್ದೇಶಕರು ಹಾಗೂ ಸಂಸ್ಥೆಯ ಪಧಾದಿಕಾರಿಗಳಾದ ಬಿ.ಶರತಚಂದ್ರ, ಪಾಲಿಕೆ ಸದಸ್ಯರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೊಲೆ ಖಂಡಿಸಿ ಅಹೋರಾತ್ರಿ ಧರಣಿ ಸತ್ಯಾಗ್ರಹ



**ಸಿಂದಗಿ:** ಪರಿಶಿಷ್ಟ ಜಾತಿಯ ಮಾದೇವಪ್ಪ ಹರಿಜನ (ಪೂಜಾರಿ) ಕೊಲೆ ಖಂಡಿಸಿ ಕರ್ನಾಟಕ ವಿವಿಧ ದಲಿತ ಸಂಘಟನೆಗಳು ಮತ್ತು ಪ್ರಗತಿಪರ ಸಂಘಟನೆಗಳ ಕಾರ್ಯಕರ್ತರು ಮತ್ತು ಕೊಲೆಯಾದ ವ್ಯಕ್ತಿಯ ಕುಟುಂಬಸ್ಥರು ಪಟ್ಟಣದ ಡಾ.ಅಂಬೇಡ್ಕರ್ ವೃತ್ತದ ಬಳಿ ಅಹೋರಾತ್ರಿ ಧರಣಿ ಸತ್ಯಾಗ್ರಹ ಪ್ರಾರಂಭಿಸಿದರು.

ಶುಕ್ರವಾರದಂದು ಮೃತ ವ್ಯಕ್ತಿಯ ಗ್ರಾಮ ತಾಲೂಕಿನ ಬನ್ನೆಟ್ಟಿ (ಪಿ.ಎ) ಗ್ರಾಮದಿಂದ ಸಿಂದಗಿಯ ಪಟ್ಟಣದವರೆಗೆ ಕಾಲ್ನಡಿಗೆ ಮೂಲಕ ಪ್ರತಿಭಟನಾಕಾರರು ಆಗಮಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ದಲಿತ ಹೋರಾಟಗಾರ ಶರಣು ಸಿಂಧೆ, ಶ್ರೀನಿವಾಸ ಓಲೇಕಾರ ಮಾತನಾಡಿ, ತಾಲೂಕಿನ ಬನ್ನೆಟ್ಟಿ ಗ್ರಾಮದ ಬಡದಲಿತ ವ್ಯಕ್ತಿ ಮಾದೇವಪ್ಪ ಹರಿಜನ ಅವರ ಕೊಲೆಯಾಗಿ ಇಲ್ಲಿಯವರೆಗೆ ಸುಮಾರು 3ತಿಂಗಳಾದರು ಆರೋಪಿಗಳನ್ನು ಪತ್ತೆ ಹಚ್ಚುವಲ್ಲಿ ಪೊಲೀಸ್ ಇಲಾಖೆ ವಿಫಲವಾಗಿದೆ. ಆರೋಪಿಗಳನ್ನು ಕೂಡಲೇ ಕಾನೂನಾತ್ಮಕವಾಗಿ ಬಂಧಿಸುವವರೆಗೂ ನಮ್ಮ ಹೋರಾಟ ನಿರಂತರವಾಗಿರುತ್ತದೆ. ದೇಶದಲ್ಲಿ ಕಾನೂನು ಅತ್ಯಂತ ಬಲಿಷ್ಟವಾಗಿದ್ದರು ಇಲ್ಲಿಯವರೆಗೆ ಈ ಆರೋಪಿಗಳನ್ನು ಸರ್ಕಾರ ಯಾಕೆ ಬಂಧನ ಮಾಡಿಲ್ಲ. ಕೊಲೆಯಾದ ವ್ಯಕ್ತಿಯ ಕುಟುಂಬಕ್ಕೆ ನ್ಯಾಯ ಸಿಗಬೇಕು. ಕೂಡಲೇ ಸಂಬಂಧಿಸಿದ ಇಲಾಖೆ ಈಗಲಾದರು ಕಾರ್ಯಪ್ರವೃತ್ತರಾಗಬೇಕು ಆರೋಪಿಗಳನ್ನು ಬಂಧಿಸಬೇಕು ಎಂದರು.

ಪ್ರತಿಭಟನೆಯಲ್ಲಿ ರವಿ ತಳಕೇರಿ, ರವಿ ಅಲಹಳ್ಳಿ, ರವಿ ಹೊಳಿ, ಮುತ್ತು ಸುಲ್ಪಿ, ಸಾಗರ ಹೊಸಮನಿ, ಸುಭದ್ರಾ ಮೇಲಿನಮನಿ, ಚಂದ್ರಕಾಂತ ಸಿಂಗೆ, ಶ್ರೀಕಾಂತ ಸೋಮಜ್ಯಾಳ, ಲಕ್ಷ್ಮಣ ಬನ್ನೆಟ್ಟಿ, ಗುರು ಬಿದರಿ ಸೇರಿದಂತೆ ಬನ್ನೆಟ್ಟಿ ಗ್ರಾಮಸ್ಥರು, ಮಹಿಳೆಯರು ಧರಣಿಯಲ್ಲಿ ಪಾಲ್ಗೊಂಡಿದ್ದರು.



# ಕ್ರೈಸ್ತ ಬಿಷಪ್‌ಗಳ ದೀಕ್ಷಾ ಕಾರ್ಯಕ್ರಮ

**ಗೋಕಾಕ:** ಪ್ರೊಟೆಸ್ಟಂಟನ ಕ್ರೇಸ್ತರ ಮಹಾಸಭಾ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಹೊಸ ಜಿಲ್ಲಾ ಬಿಷಪ್ಗಳನ್ನು ಹಾಗೂ ಆಯಾ ತಾಲ್ಲೂಕುಗಳಿಗೆ ಸಹಾಯಕ ಬಿಷಪ್‌ಗಳನ್ನು ನೇಮಿಸಿರುವುದನ್ನು ಪ್ರಕಟಿಸಿ ಹೊಸದಾಗಿ ನೇಮಕಗೊಂಡ ಬಿಷಪ್ಗಳ ಪವಿತ್ರ ದೀಕ್ಷೆ ಮತ್ತು ಸನ್ಮಾನ ಕಾರ್ಯಕ್ರಮವು ಬೆಂಗಳೂರಿನ ಹಡಸನ್ ಮೆಮೋರಿಯಲ್ ಕಮ್ಯುನಿಟಿ ಹಾಲ್ನಲ್ಲಿ ಮೆಟ್ರೋ ಪ್ರೊಟೆಸ್ಟಂಟ ಅರ್ಚ್‌ಬಿಷಪ್ ಡಾ: ಅಮೋಘ ಸಿಂಗ್ ಅವರ ಪ್ರಧಾನ ಸಮ್ಮುಖದಲ್ಲಿ ನೆರವೇರಿಸಲಾಯಿತು.

ಬೆಳಗಾವಿ ಜಿಲ್ಲಾ ಬಿಷಪ್ ಮತ್ತು ಸಹಾಯಕ ಬಿಷಪ್ಗಳ ನೇಮಕಾತಿಯು ಜರುಗಿದ್ದು. ಬೆಳಗಾವಿ ಜಿಲ್ಲಾ ಬಿಷಪ್ ಆಗಿ ರೇವು ಶಂಕರ್ ಎನ್ ಗುಡ್ಡಾಲ್ಕರ್ ಅವರನ್ನು ನೇಮಕ ಮಾಡಲಾಯಿತು. ಜೊತೆಗೆ ರೇವು ನಟಾನಲ್ಲ, ರೇವ್ ಮಂಜು, ರೇವ್ ಭೀಮು ಮಾಳಗಿ, ಬಿಸಿ ಸೈಮನ್, ರೇವ್ ಪ್ರಾಂಕ್ಲೀನ್ ನವಗ್ರಹ, ರೇವ್ ಸಿದ್ದು ಅನಕಲ್, ರೇವ ಸುಂದರ್, ಕೆಂಪಣ್ಣ ,ಜಗದೀಶ್ ಮಂಡಿ ಇವರನ್ನು ತಾಲೂಕುಗಳಿಂದ ನೇಮಿಸಲಾಯಿತು.

# ಮನೆ-ಮನೆ ಸಮೀಕ್ಷೆ ಕಾರ್ಯಕ್ಕೆ ಚಾಲನೆ

**ವಿಜಯಪುರ:** ಹಿಂದುಳಿದ ವರ್ಗಗಳ ಆಯೋಗದಿಂದ ಕೈಗೊಂಡ ಮನೆ-ಮನೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯವನ್ನು ಜಿಲ್ಲೆಯಲ್ಲಿ ಇಂದಿನಿಂದ ಆರಂಭಿಸಲಾಗಿದ್ದು, ಸಮೀಕ್ಷಾ ಕಾರ್ಯಕ್ಕೆ ಜಿಲ್ಲಾಧಿಕಾರಿ ಡಾ.ಆನಂದ ಕೆ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಚಾಲನೆ ನೀಡಿದರು.

ಸೋಮವಾರ ನಗರದ ಕೀರ್ತಿನಗರದಲ್ಲಿ ಸಮೀಕ್ಷೆ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಜಿಲ್ಲಾಧಿಕಾರಿಗಳು, ಕರ್ನಾಟಕ ಹಿಂದುಳಿದ ವರ್ಗಗಳ ಆಯೋಗದಿಂದ ಸೆ.22 ರಿಂದ ಅ.7ರವರೆಗೆ ಜಿಲ್ಲೆಯಲ್ಲಿ ಸಮೀಕ್ಷೆ ಕಾರ್ಯ ಕೈಗೊಳ್ಳಲಿದ್ದು, ಸಮೀಕ್ಷಾದಾರರು ತಮ್ಮ ಮನೆಗೆ ಭೇಟಿ ನೀಡಿ ಸುಮಾರು 60 ಪ್ರಶ್ನೆಗಳುಳ್ಳ ಮಾಹಿತಿಯನ್ನು ದಾಖಲಿಸಲಿದ್ದಾರೆ. ಈ ಸಂದರ್ಭದಲ್ಲಿ ಕುಟುಂಬದ ಮುಖ್ಯಸ್ಥರು- ಸದಸ್ಯರ ಪಡಿತರ ಚೀಟಿ, ಆಧಾರ ಕಾರ್ಡ ಸಂಖ್ಯೆ, ವಿಕಲಚೇತನರಾಗಿದ್ದಲ್ಲಿ ಅಂಗವಿಕಲರ ಪ್ರಮಾಣ ಪತ್ರ, ಮತದಾರರ ಗುರುತಿನ ಚೀಟಿ ಸೇರಿದಂತೆ ಅಗತ್ಯ ದಾಖಲೆಗಳನ್ನು ಸಿದ್ದವಿಟ್ಟುಕೊಂಡು, ಸಮೀಕ್ಷಾದಾರಿಗೆ ಕುಟುಂಬದ ಪ್ರತಿ ಸದಸ್ಯರ ವಿದ್ಯಾರ್ಹತೆ, ಕೌಶಲ್ಯ ತರಬೇತಿ ಅಗತ್ಯತೆ, ಆದಾಯ, ಸ್ಥಿರ ಮತ್ತು ಚರಾಸ್ತಿ ವಿವರ, ಧರ್ಮ, ಜಾತಿ, ಉಪಜಾತಿ ಹಾಗೂ ಕುಲಕಸಬು ಸೇರಿದಂತೆ ಎಲ್ಲ ಪ್ರಶ್ನೆಗಳಿಗೆ ಕುಟುಂಬದ ಸಮಗ್ರ ಮಾಹಿತಿ ನೀಡುವ ಮೂಲಕ ಸಮೀಕ್ಷಾ ಕಾರ್ಯ ಯಶಸ್ವಿಗೊಳಿಸುವಂತೆ ಅವರು ಕರೆ ನೀಡಿದರು.

ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಪುಂಡಲೀಕ ಮಾನವರ, ಸಮೀಕ್ಷಾದಾರರು, ಅಧಿಕಾರಿಗಳು ಉಪಸ್ಥಿತರಿದ್ದರು.

# ಚೆಸ್ ತರಬೇತಿ ಶಿಬಿರ: ನೋಂದಣಿಗೆ ಸೂಚನೆ

**ಕೊಪ್ಪಳ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲೆಯಲ್ಲಿ ನೂತನವಾಗಿ ರಚನೆಯಾಗಿರುವ ಕೊಪ್ಪಳ ಜಿಲ್ಲಾ ಚೆಸ್ ಅಮೆಚೂರ್ ಅಸೋಸಿಯೇಷನ್(ರಿ) ಇವರ ಸಂಯುಕ್ತಾಶ್ರಯದಲ್ಲಿ ಪ್ರಥಮ ಬಾರಿಗೆ ಕೊಪ್ಪಳ ಜಿಲ್ಲೆಯಲ್ಲಿ ಚೆಸ್ ತರಬೇತಿ ಶಿಬಿರ ಹಮ್ಮಿಕೊಳ್ಳಲಾಗಿದೆ. ತರಬೇತಿ ಶಿಬಿರವು ಸೆಪ್ಟೆಂಬರ್ 22 ರಿಂದ ಜಿಲ್ಲಾ ಕ್ರೀಡಾಂಗಣ, ಕೊಪ್ಪಳದಲ್ಲಿ ಪ್ರಾರಂಭವಾಗಿದ್ದು, 5 ವರ್ಷ ಮೇಲ್ಪಟ್ಟ ಎಲ್ಲಾ ವಯೋಮಿತಿಯವರು ಶಿಬಿರದಲ್ಲಿ ಪಾಲ್ಗೊಳ್ಳಬಹುದು. ತರಬೇತಿ ಶಿಬಿರವು ಕೋರ್ಸ ಅವಧಿಗಳ ಪ್ರಕಾರ ಇರುತ್ತದೆ. ಆಸಕ್ತ ಶಿಬಿರಾರ್ಥಿಗಳು ನಿಗದಿತ ಶುಲ್ಕವನ್ನು ಭರಿಸಿ ಭಾಗವಹಿಸಬಹುದು. ತರಬೇತಿ ಶಿಬಿರಕ್ಕೆ ನೋಂದಣಿಯಾಗುವ ಮೊದಲ 10 ಶಿಬಿರಾರ್ಥಿಗಳಿಗೆ ಶೇ.20 ರಷ್ಟು ರಿಯಾಯಿತಿ ಇರುತ್ತದೆ. ತರಬೇತಿಯು ಪ್ರತಿ ದಿನ ಸಂಜೆ 5.30 ರಿಂದ 6.30 ಗಂಟೆಯವರೆಗೆ ಜರುಗುತ್ತದೆ. ಚೆಸ್ ತರಬೇತಿ ಶಿಬಿರದಲ್ಲಿ ಭಾಗವಹಿಸಲು ಆಸಕ್ತಿಯುಳ್ಳ ಕ್ರೀಡಾಪಟುಗಳು ನೋಂದಣಿ ಮಾಡಿಸುವುದು ಕಡ್ಡಾಯವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ.ಸಂ: 7975130354, 6360384374 ಅಥವಾ ಜಿಲ್ಲಾ ಕ್ರೀಡಾಂಗಣ, ಕೊಪ್ಪಳದಲ್ಲಿ ತರಬೇತಿ ಅವಧಿಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಡಳಿತದಿಂದ ಹೆಲ್ಪಲೈನ್ ಆರಂಭ

**ಕೊಪ್ಪಳ:** ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7 ರವರೆಗೆ ಜಿಲ್ಲೆಯಲ್ಲಿ ನಡೆಯಲಿರುವ ನಾಗರಿಕ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷೆ ಕಾರ್ಯದ ಬಗ್ಗೆ ಸಾರ್ವಜನಿಕರಿಂದ ಪ್ರತಿನಿತ್ಯ ಬರುವ ಮಾಹಿತಿ, ದೂರು, ಆಕ್ಷೇಪಣೆ, ಸಲಹೆ ಮುಂತದಾವುಗಳನ್ನು ಸ್ವೀಕರಿಸಲು ಜಿಲ್ಲಾಡಳಿತದಿಂದ ಜಿಲ್ಲಾ ಮಟ್ಟದಲ್ಲಿ ಹೆಲ್ಪ್‌ಲೈನ್ ಆರಂಭಿಸಲಾಗಿದೆ. ಹೆಲ್ಪ್‌ಲೈನ್ ಸಂಖ್ಯೆ: 08539-221606 ಗೆ ಕರೆ ಮಾಡಿ ಸಾರ್ವಜನಿಕರು ಮಾಹಿತಿ, ದೂರು, ಆಕ್ಷೇಪಣೆಗಳನ್ನು ಸಲ್ಲಿಸಬಹುದು ಎಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ನೂತನ ಜಿಎಸ್‌ಟಿ ಜಾರಿಗೆ ಪಟಾಕಿ ಸಿಡಿಸಿದ ಕಾರ್ಯಕರ್ತರು

**ಬೆಳಗಾವಿ:** ಇಂದಿನಿಂದ ಜಾರಿಯಾದ ನೂತನ ಜಿ ಎಸ್ ಟಿ ಕಾಯ್ದೆಯನ್ನು ಭಾಜಪಾ ಬೆಳಗಾವಿ ಉತ್ತರ ಮಂಡಲದ ವತಿಯಿಂದ ನಗರದ ಹುತಾತ್ಮ ವೃತ್ತದಲ್ಲಿ ಪಟಾಕಿ ಸಿಡಿಸಿ, ಸಾರ್ವಜನಿಕರಿಗೆ ಸಿಹಿ ಹಂಚಿ ಸ್ವಾಗತಿಸಲಾಯಿತು.

ರೈತರ, ಬಡವರ, ಮಧ್ಯಮ ವರ್ಗದ ಜನರ ಹೊಸ ಆಶಾಕಿರಣವಾಗಿ ಬಂದಿರುವ ನೂತನ ಜಿ ಎಸ್ ಟಿ ಕಾಯ್ದೆ ಈ ಎಲ್ಲರ ಮೇಲಿನ ಆರ್ಥಿಕ ಹೊರೆಯನ್ನು ತಗ್ಗಿಸಲಿದೆ. ಈ ಸಂಭ್ರಮಾಚರಣೆಯಲ್ಲಿ ಬೆಳಗಾವಿ ಉತ್ತರ ಮಂಡಲದ ಅಧ್ಯಕ್ಷರಾದ ವಿಜಯ ಕೊಡಗನೂರ, ಮಹಾನಗರ ಜಿಲ್ಲೆಯ ಉಪಾಧ್ಯಕ್ಷರಾದ ಮಹಾಂತೇಶ ವಕ್ಕುಂದ, ವಿನೋದ ಲಂಗೋಟಿ ಸೇರಿದಂತೆ ಭಾಜಪಾದ ಪ್ರಮುಖ ಕಾರ್ಯಕರ್ತರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮವನ್ನ ಯಶಸ್ವಿಗೊಳಿಸಿದರು.

# ಸರಕಾರಿ ನೌಕರರ ಸೊಸೈಟಿಗೆ 50.58 ಲಕ್ಷ ಲಾಭ



**ಮೋಳೆ:** ಸರಕಾರಿ ನೌಕರರಿಗೆ ಕಡಿಮೆ ಬಡ್ಡಿ ದರದಲ್ಲಿ ಕಳೆದ 22 ವರ್ಷಗಳಿಂದ ನಿರಂತರವಾಗಿ ಕರ್ನಾಟಕ ಸರಕಾರಿ ನೌಕರರ ಮಲ್ಟಿಪರಪಜ್ ಕೋ ಆಪ್ ಸೊಸೈಟಿ ವತಿಯಿಂದ ಸಾಲದ ಮೂಲಕ ಆರ್ಥಿಕ ಭದ್ರತೆ ಒದಗಿಸುತ್ತಿದವೆ ಎಂದು ಸೊಸೈಟಿ ಅಧ್ಯಕ್ಷ ಅಭಿಯಂತರ ಮಲ್ಲಿಕಾರ್ಜುನ ಮಗದುಮ ಹೇಳಿದರು.

ಅವರು 22 ನೇ ಸರ್ವ ವಾರ್ಷಿಕ ಸಾಧಾರಣ ಸಭೆಯಲ್ಲಿ ಮಾತನಾಡುತ್ತಿದ್ದರು. ಪ್ರಸಕ್ತ ಸಾಲಿನಲ್ಲಿ ನಮ್ಮ ಸೊಸೈಟಿ 50.58 ಲಕ್ಷ ರೂ.ಲಾಬವಾಗಿದ್ದು, ಸದಸ್ಯರಿಗೆ ಶೇ.15 ರಷ್ಟು ಲಾಭಾಂಶ ವಿತರಿಸಲು ನಿರ್ಧರಿಸಿದೆ ಎಂದರು.

ನಮ್ಮ ಸೊಸೈಟಿ ಮಾರ್ಚ 31 ರಂದು 42 ಕೋಟಿಗಿಂತಲೂ ಹೆಚ್ಚು ದುಡಿಯುವ ಬಂಡವಾಳ ಹೊಂದಿದೆ. ಸೊಸೈಟಿ ತನ್ನ ಸದಸ್ಯರಿಗೆ ವಿವಿಧ ಯೋಜನೆಯಡಿ 24 ಕೋಟಿ 39. ಲಕ್ಷ ರೂ.ಗಳಷ್ಟು ಸಾಲ ನೀಡಿದೆ ಎಂದ ಅವರು ಸದಸ್ಯರಿಂದ 34.28 ಕೋಟಿ ರೂ. ಠೇವಣಿ ಸಂಗ್ರಹಿಸಲಾಗಿದೆ ಎಂದರು.

ಸರಕಾರಿ ನೌಕರರಿಗೆ ನಮ್ಮ ಸೊಸೈಟಿ ರಾಷ್ಟ್ರೀಕೃತ ಬ್ಯಾಂಕುಗಳಿಗಿಂತ ಸ್ಪರ್ಧಾತ್ಮಕ ಅಂದರೆ ಅತೀ ಕಡಿಮೆ ಬಡ್ಡಿ ದರದಲ್ಲಿ ಸಾಲ ವಿತರಿಸುತ್ತಿದ್ದು, ಇದರ ಲಾಭ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದ ಅವರು ಪ್ರತಿ ವರ್ಷವೂ ಸರಕಾರಿ ನೌಕರರ ಪ್ರತಿಭಾವಂತ ಮಕ್ಕಳಿಗೆ ಪುರಸ್ಕಾರ ಕೂಡ ಅನೇಕ ವರ್ಷಗಳಿಂದ ಕೊಡಲಾಗುತ್ತಿದೆ ಎಂದರು.

ಸೊಸೈಟಿ ಸಂಸ್ಥಾಪಕ ಸದಸ್ಯ ಮತ್ತು ಜಿ.ಪಂ ಅಧಿಕಾರಿ ವೀರಣ್ಣ ವಾಲಿ ಮಾತನಾಡಿ, ಅತ್ಯಂತ ಸಣ್ಣ ಪ್ರಮಾಣದಲ್ಲಿ 2003 ರಲ್ಲಿ ಪ್ರಾರಂಭಗೊಂಡಿದ್ದ ಈ ಸೊಸೈಟಿ ಇಂದು 42 ಕೋಟಿ ದುಡಿಯುವ ಬಂಡವಾಳದೊಂದಿಗೆ ಮುನ್ನಡೆಯುತ್ತಿದೆ, ಸರಕಾರಿ ನೌಕರರಿಗೆ ಶೇ.10 ಕ್ಕಿಂತ ಕಡಿಮೆ ಬಡ್ಡಿ ದರದಲ್ಲಿ ಸಂಘದ ಮೂಲಕ ಕೊಡುತ್ತಿರುವುದು ನಮ್ಮ ಸೊಸೈಟಿಯ ಹಿರಿಮೆಯಾಗಿದೆ ಎಂದರು.

ಸೊಸೈಟಿ ಮೂಲಕ ಬಂಗಾರದ ಖರೀದಿಗೆ ಮತ್ತು ಬಂಗಾರ ಅಡುವು ಇಟ್ಟುಕೊಂಡು ಸಾಲ ಮತ್ತು ಗೃಹ ಸಾಲ ಕೊಡುವ ವ್ಯವಸ್ಥೆ ಮಾಡಿಕೊಳ್ಳಿ ಎಂದು ಸಲಹೆ ನೀಡಿದ ಅವರು ಸದಸ್ಯರು ಪಡೆದುಕೊಂಡ ಸಾಲವನ್ನು ಸಮಯಕ್ಕೆ ಸರಿಯಾಗಿ ಬಡ್ಡಿ ಸಹಿತ ಹಿಂದಿರುಗಿಸಿ ಎಂದರು.

ಹಿರಿಯ ಸದಸ್ಯ ಶಿವಾನಂದ ದಿವಾನಮಳ ಮಾತನಾಡಿ, ಅನೇಕ ಹಿರಿಯ ನೌಕರರು ಈ ಸಂಸ್ಥೆಯನ್ನು ಹುಟ್ಟು ಹಾಕಿದ್ದಾರೆ. ಪ್ರಾರಂಭದಲ್ಲಿ ಈ ಸೊಸೈಟಿಯನ್ನು ಒಂದು ಹಂತಕ್ಕೆ ತರಬೇಕಾದರೆ ಸಾಕಷ್ಟು ಕಷ್ಟ ಪಟ್ಟಿದ್ದಾರೆ ಆ ಹಿರಿಯ ಸಂಸ್ಥಾಪಕರ ಸಲಹೆ ಸೂಚನೆಗಳನ್ನು ಅಳವಡಿಸಿಕೊಳ್ಳಿ ಎಂದ ಅವರು ಸದಸ್ಯರಿಗೆ ಅಂಚೆ ಕಛೇರಿ ಮೂಲಕ ಆರೋಗ್ಯ ವಿಮೆ ಮಾಡಿಸುವ ನಿಟ್ಟಿನಲ್ಲಿ ಯೋಚನೆ ಮಾಡಿ ಎಂದರು.

ಮತ್ತೋರ್ವ ಹಿರಿಯ ಸದಸ್ಯ ಅರುಣಕುಮಾರ ಯಲಗುದ್ರಿ ಮಾತನಾಡಿ, ಚಿಕ್ಕೋಡಿ ಅಥವಾ ಕಾಗವಾಡದಲ್ಲಿ ಶಾಖೆ ಪ್ರಾರಂಭಿಸಬೇಕು ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿ ಮತ್ತು ಅಧ್ಯಕ್ಷ ಮಲ್ಲಿಕಾರ್ಜುನ ಮಗದುಮ್ ನೇತೃತ್ವದಲ್ಲಿ ಸಂಘ ಮುನ್ನಡೆಯಲಿ ಎಂದು ಹಾರೈಸಿದರು.

ಸಭೆಯಲ್ಲಿ ಹಿರಿಯ ಸದಸ್ಯ ಶ್ರೀಕಾಂತ ಮಾಕಾಣಿ ಮಾತನಾಡಿದರು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಚಿದಾನಂದ ಬಡವಗೋಳ ಅಥಾವೆ ಪತ್ರಿಕೆ ಓದಿದರು. ನಿರ್ದೇಶಕ ಮಂಡಳಿಯ ಪ್ರವೀಣ ಹುಣಸಿಕಟ್ಟಿ, ಗುರುನಾಥ ಸ್ವಾಮಿ, ಸುಮೀತಕುಮಾರ ಮರನೂರ, ವಿಜಯ ಢವಳೆ, ಚಂದ್ರಕಾಂತ ಕಾಂಬಳೆ, ಅಪ್ಪಾಸಾಬ ಹಿಪ್ಪರಗಿ, ರವಿ ಅಂಗಡಿ, ಬೀರಪ್ಪ ಕಡಗಂಚಿ, ರಮೇಶ ಚೌಗಲಾ, ಜಾವೇದ ಪಟೇಲ್, ಶಿವಗೌಡ ಪಾಟೀಲ, ಸುಮಿತ್ರಾ ಮಗೆನ್ನವರ, ರೇಣುಕಾ ಗಾಣಗಿ, ಕಾನೂನು ಸಲಹೆಗಾರ ಕೆ.ಎ.ವಣಜೋಳ ಉಪಸ್ಥಿತರಿದ್ದರು. ಸಭೆಯಲ್ಲಿ ಅನೇಕ ಸದಸ್ಯರು ಮಾತನಾಡಿ ಸಲಹೆ ನೀಡಿದರು.

# ಹಿಂದು ಧರ್ಮವನ್ನು ಕುಗ್ಗಿಸಲು ಜಾತಿ ಜನಗಣತಿ ಅಸ್ತ್ರ

**ರಾಮದುರ್ಗ:** ಜಾತಿ ಜನಗಣತಿ ವಿಷಯದಲ್ಲಿ ಜನತೆಯಲ್ಲಿ ಜಾತಿ-ಧರ್ಮದ ವಿಷ ಬೀಜ ಬಿತ್ತಲು, ಹಿಂದು ಧರ್ಮ ಕುಗ್ಗಿಸಲು ಸಂಚು ರೂಪಸಿ, ರಾಜ್ಯ ಸರಕಾರ ಜಾತಿ ಜನಗಣತಿ ಮಾಡುತ್ತಿದೆ ಎಂದು ಬಿಜೆಪಿ ಮಂಡಲ ಅಧ್ಯಕ್ಷ ಡಾ. ಕೆ.ವ್ಹಿ. ಪಾಟೀಲ ಆರೋಪಿಸಿದರು.

ಪಟ್ಟಣದ ಪ್ರೆಸ್‌ಕ್ಲಬ್‌ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ರಾಜ್ಯದ ಜನತೆ ಜಾತಿ ಜನಗಣತಿಯ ಧರ್ಮದ ಕಾಲಂನಲ್ಲಿ ಹಿಂದು ಎಂದು ಬರೆಯಿಸಿ, ಜಾತಿ ಕಾಲಂನಲ್ಲಿ ತಮ್ಮ ತಮ್ಮ ಜಾತಿ ಹಾಗೂ ಉಪಜಾತಿಗಳನ್ನು ಬರೆಯಿಸಬೇಕು. ಹಿಂದು ಧರ್ಮಕ್ಕೆ ಅನ್ಯಾಯವಾಗದಂತೆ ರಾಜ್ಯ ಸರಕಾರ ಪ್ರಾರಂಭಿಸಿರುವ ಜಾತಿ ಜನಗಣತಿ ಕಾರ್ಯಾಚರಣೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಬೇಕು ಎಂದು ಆಗ್ರಹಿಸಿದರು. ಕೇಂದ್ರ ಸರಕಾರ ದೇಶದ ಜನತೆಗೆ ಜಿಎಸ್‌ಟಿ ಹೊರೆಯನ್ನು ಇಳಿಕೆ ಮಾಡಿರುವುದು ಐತಿಹಾಸಿಕ ನಿರ್ಣಯವಾಗಿದ್ದು, ಬಿಜೆಪಿ ಪಕ್ಷದ ನೇತೃತ್ವದಲ್ಲಿ ಇಂದು ರಾಜ್ಯಾದ್ಯಂತ ಸಂಭ್ರಮಾಚರಣೆ ಮಾಡಲಾಗುತ್ತಿದೆ ಎಂದರು.

ಬಿಜೆಪಿ ಮಂಡಲ ಮಾಧ್ಯಮ ಸಂಚಾಲಕ ಮಲ್ಲಿಕಾರ್ಜುನ ಭಾವಿಕಟ್ಟಿ ಮಾತನಾಡಿ, ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಜಿಎಸ್‌ಟಿ ಪ್ರಾರಂಭಿಸಿದಾಗ ವಿರೋಧಿಗಳು ಜನತೆಗೆ ಅಚ್ಛೆ ದೀನ್ ನೀಡುವ ಬದಲು ತೆರಿಗೆ ಹೊರೆ ಹಾಕುತ್ತಿದ್ದಾರೆ ಎಂದು ಆರೋಪ ಮಾಡಿದ್ದರು. ಕೇಂದ್ರ ಸರಕಾರ ಇಂದಿನಿಂದ ಅಗತ್ಯ ವಸ್ತುಗಳ ಮೇಲಿನ ಜಿಎಸ್‌ಟಿ ತೆಗೆದು ಹಾಕಿ ಜನತೆಗೆ ಸಿಹಿ ಸುದ್ದಿ ನೀಡಿದೆ. ನಾಲ್ಕು ಹಂತದ ಜಿಎಸ್‌ಟಿಯನ್ನು ತೆಗೆದು ಹಾಕಿ ಕೇವಲ ಎರಡು ಹಂತದ ಜಿಎಸ್‌ಟಿಯನ್ನು ವಿಧಿಸುವ ವಿಧಾನವನ್ನು ಇಂದಿನಿಂದಲೇ ಪ್ರಾರಂಭಿಸಿದೆ. ಇದರಿಂದ ಬಡವರು, ಜನಸಾಮಾನ್ಯರು ಖುಷಿಯಿಂದ ನೆಮ್ಮದಿಯ ಜೀವನ ಸಾಗಿಸುವಂತಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಡಾ.ಬಸವರಾಜ ಮಾದನ್ನವರ, ಬಿಜೆಪಿ ರೈತ ಮೋರ್ಚಾ ಮುಖಂಡ ಸಿ.ಎಸ್. ಹಿರೇಮಠ ಸೇರಿದಂತೆ ಇತರರಿದ್ದರು.




## ಉಚಿತ ಚಾಲನಾ ತರಬೇತಿ

**ಹುಬ್ಬಳ್ಳಿ:** ಎಸ್‌ಸಿಪಿ/ಟಿಎಸ್‌ಪಿ ಯೋಜನೆ ಯಡಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಅರ್ಹ ಫಲಾನುಭವಿಗಳಿಗೆ ಉಚಿತ 30 ದಿನಗಳ ಭಾರಿ ಮತ್ತು ಲಘು ವಾಹನ ಚಾಲನಾ ತರಬೇತಿಯನ್ನು ಗೋಕುಲ ರಸ್ತೆಯ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರ ಮತ್ತು ಶಿಗ್ಗಾಂವಿಯ ತರಬೇತಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ.

ವಸತಿ ಸಹಿತ ತರಬೇತಿ ನೀಡಲಾಗುತ್ತದೆ. ಅರ್ಹ ಫಲಾನುಭವಿಗಳು ಹೆಚ್ಚಿನ ಮಾಹಿತಿಗೆ ಪ್ರಾದೇಶಿಕ ತರಬೇತಿ ಕೇಂದ್ರದ ದೂರವಾಣಿ ಸಂಖ್ಯೆ 9449925367, 9663653500, 9449971416, 7996865758 ಸಂಪರ್ಕಿಸುವಂತೆ ಪ್ರಾದೇಶಿಕ ತರಬೇತಿ ಕೇಂದ್ರದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಗೊಳ್ಳಿ ರಾಯಣ್ಣ ಸಹಕಾರಿ ಸಂಘದ 26ನೇ ವಾರ್ಷಿಕ ಸಭೆ



**ಬಸವನಬಾಗೇವಾಡಿ:** ಪಟ್ಟಣದಲ್ಲಿ ಫೆ.1,2000 ರಲ್ಲಿ 101 ಸದಸ್ಯರೊಂದಿಗೆ ಒಂದು ಲಕ್ಷ ಒಂದು ಸಾವಿರ ಶೇರು ಬಂಡವಾಳದೊಂದಿಗೆ ಆರಂಭವಾದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪತ್ತಿನ ಸಹಕಾರಿ ಸಂಘವು ಎಲ್ಲರ ಸಹಕಾರದೊಂದಿಗೆ ಸನ್ 2024-25 ನೇ ಸಾಲಿನ ವರ್ಷಾಂತ್ಯಕ್ಕೆ ಸಂಘವು 903 ಅ ವರ್ಗದ ಸದಸ್ಯರನ್ನು 639 ಬ ವರ್ಗದ ಸದಸ್ಯರನ್ನು ಹೊಂದಿ ಒಟ್ಟು 1542 ಸದಸ್ಯರನ್ನು ಹೊಂದಿದೆ. ಇದೀಗ 10.95 ಕೋಟಿ ದುಡಿಯುವ ಬಂಡವಾಳ,75.57 ಲಕ್ಷ ಶೇರು ಬಂಡವಾಳ ಹೊಂದಿದೆ. 2024-25 ನೇ ಸಾಲಿನಲ್ಲಿ 4.20 ಲಕ್ಷ ಲಾಭಾಂಶ ಗಳಿಸಿದೆ ಎಂದು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಹೊನ್ನಪ್ಪ ಗುಂಡಳ್ಳಿ ಹೇಳಿದರು.

ಪಟ್ಟಣದ ಬಸವೇಶ್ವರ ಯಾತ್ರಿ ನಿವಾಸದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪತ್ತಿನ ಸಹಕಾರಿ ಸಂಘದ 26 ನೇ ವಾರ್ಷಿಕ ಸರ್ವಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರಿ ಸಂಘದ ಬೆಳವಣಿಗೆಗೆ ಸಂಘದ ಸದಸ್ಯರ ಸಹಾಯ ,ಸಹಕಾರ, ಆಡಳಿತ ಮಂಡಳಿಯ ಸದಸ್ಯರ ನಿಸ್ವಾರ್ಥ ಸೇವೆ ಕಾರಣವಾಗಿದೆ. ಇದರೊಂದಿಗೆ ಸಂಘದ ಸಿಬ್ಬಂದಿಗಳ, ಪಿಗ್ಮಿ ಸಂಗ್ರಹಕಾರರ ಪ್ರಾಮಾಣಿಕ ಪ್ರಯತ್ನವನ್ನು ಮರೆಯುವಂತಿಲ್ಲ. ಸಂಘದ ಸಾಧನೆಗೆ ತಾವು ಸಂಘದ ಮೇಲಿಟ್ಟಿರುವ ವಿಶ್ವಾಸ, ಸಹಕಾರ ಪ್ರಮುಖ ಕಾರಣ. ಪ್ರತಿ ವರ್ಷವು ವಾರ್ಷಿಕ ಸರ್ವಸದಸ್ಯರ ಸಭೆಯಲ್ಲಿ ಹಾಲುಮತ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳನ್ನು,ನಿವೃತ ನೌಕರ ಬಾಂಧವರನ್ನು ಸನ್ಮಾನಿಸಲಾಗುತ್ತಾ ಬರಲಾಗುತ್ತಿದೆ.

ಮುಂದಿನ ದಿನಗಳಲ್ಲಿಯೂ ಸಂಘದ ಅಭಿವೃದ್ಧಿಗೆ ಎಲ್ಲರ ಸಹಾಯ-ಸಹಕಾರ ನಿರಂತರವಾಗಿ ಇರಬೇಕೆಂದರು.

ಸಂಘದ ಉಪಾಧ್ಯಕ್ಷ ಸಂಗಮೇಶ ಓಲೇಕಾರ(ಜಾಯವಾಡಗಿ) ಮಾತನಾಡಿ, ಸಂಘದ ಶೇರುದಾರರೇ ಸಂಘಕ್ಕೆ ಜೀವಾಳವಾಗಿದ್ದಾರೆ. ಕಳೆದ 25 ವರ್ಷಗಳಿಂದ ಸಂಘದ ಹಿಂದಿನ ಆಡಳಿತ ಮಂಡಳಿಯ ನಿರ್ದೇಶಕರು ಸಾಕಷ್ಟು ಶ್ರಮದ ಫಲವಾಗಿ ಇಂದು ಸಂಘವು ಅಭಿವೃದ್ಧಿ ಪಥದತ್ತ ಸಾಗಿದೆ. ಬಾಡಿಗೆ ಕಟ್ಟಡದಲ್ಲಿ ಆರಂಭವಾದ ಸಂಘವು ಇಂದು ರೂ.1 ಕೋಟಿ ವೆಚ್ಚದ ಸ್ವಂತ ಕಟ್ಟಡವನ್ನು ಹೊಂದಿದೆ. ಸಂಘವು ಮೂರು ಕಟ್ಟಡಗಳಿಗೆ ಬಾಡಿಗೆ ಸಹ ನೀಡುವ ಮೂಲಕ ಪ್ರತಿತಿಂಗಳು 82 ಸಾವಿರ ರೂ. ಬಾಡಿಗೆ ಹಣ ಪಡೆಯುತ್ತಿದೆ. ಮುಂಬರುವ ದಿನಗಳಲ್ಲಿಯೂ ಸಂಘದ ಅಭಿವೃದ್ಧಿ ನೂತನ ಆಡಳಿತ ಮಂಡಳಿಯು ಶ್ರಮಿಸಲಿದೆ ಎಂದರು.

ಸಂಘದ ಸಂಸ್ಥಾಪಕ ಅಧ್ಯಕ್ಷ ಡಿ.ಬಿ.ಹಿರೇಕುರಬರ ಮಾತನಾಡಿ, ಸಂಘವು ಸಾಕಷ್ಟು ಅಭಿವೃದ್ಧಿಯಾಗುತ್ತಿರುವದು ಹೆಮ್ಮೆಯ ಸಂಗತಿ. ಸಂಘದ ಸಂಸ್ಥಾಪಕ ಸದಸ್ಯರನ್ನು ಗೌರವದಿಂದ ಕಾಣುವಂತಾಗಬೇಕು.

ಸಂಘವು ವ್ಯವಹಾರವನ್ನು ಇನ್ನಷ್ಟು ವಿಸ್ತರಿಸಿ ಬ್ಯಾಂಕಿನ ರೀತಿಯಲ್ಲಿ ಕಾರ್ಯನಿರ್ವಹಿಸುವಂತಾಗಬೇಕು. ಆಗ ಮಾತ್ರ ಇನ್ನಷ್ಟು ಅಭಿವೃದ್ಧಿ ಹೊಂದಲು ಸಾಧ್ಯ. ಸಂಘವು ಸಾಮಾಜಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುವಂತಾಗಬೇಕು.

ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸುವ ಜೊತೆಗೆ ಹಾಲುಮತ ಸಮಾಜದಲ್ಲಿರುವ ಬಡ ವಿದ್ಯಾರ್ಥಿಗಳನ್ನು ಗುರುತಿಸಿ ಅವರ ಶಿಕ್ಷಣಕ್ಕೆ ಆರ್ಥಿಕ ನೆರವು ನೀಡುವಂತಾಗಬೇಕು. ಈಗಿರುವ ಸೊಸಾಯಿಟಿ ಬದಲಾಗಿ ಬ್ಯಾಂಕಾಗಿ ಪರಿವರ್ತನೆಯಾಗುವಂತಾದರೆ ಹೆಚ್ಚು ಅಭಿವೃದ್ಧಿ ಸಾಧಿಸಲು ಸಾಧ್ಯ ಎಂದರು.

ಕೇಂದ್ರ ಕಚೇರಿ ಸಲಹಾ ಸಮಿತಿ ಅಧ್ಯಕ್ಷ ಲಕ್ಷ್ಮಣ ಕಂದಗಲ್ಲ, ಉಪಾಧ್ಯಕ್ಷ ಅರವಿಂದ ಹೆರಕಲ್ಲ ಮಾತನಾಡಿದರು. ಸಂಘದ ಮುಖ್ಯಕಾರ್ಯನಿರ್ವಾಹಣಾಧಿಕಾರಿ ಮಲ್ಲು ಶೇಬಗೊಂಡ ಅವರು ಸನ್ 2024-25 ನೇ ಸಾಲಿನ ವಾರ್ಷಿಕ ವರದಿ ವಾಚಿಸಿದರು. ಸಭೆಯಲ್ಲಿ ಸಂಘದ ನಿರ್ದೇಶಕರಾದ ಅರವಿಂದ ಡೋಣೂರ, ಸಿದ್ದಪ್ಪ ಹೊಕ್ರಾಣಿ, ರಾಯನಗೌಡ ಗೌಡರ, ಸೋಮಪ್ಪ ಹೆಗಡ್ಯಾಳ, ಸಂಗಪ್ಪ ವಾಡೇದ, ಜಗದೇವಿ ಗುಂಡಳ್ಳಿ, ಬೇಬಿರಾಜೇಶ್ವರಿ ಗೌಡರ, ಸಿದ್ರಾಮಪ್ಪ ಹೊರ್ತಿ, ನಿಡಗುಂದಿ ಶಾಖೆಯ ಸಲಹಾ ಸಮಿತಿ ಅಧ್ಯಕ್ಷ ಮುದ್ದಪ್ಪ ಯಳ್ಳಿಗುತ್ತಿ, ಉಪಾಧ್ಯಕ್ಷ ಹಣಮಂತ ಸುಣಗದ, ವ್ಯವಸ್ಥಾಪಕರಾದ ಎಸ್.ಎಸ್.ಮಾಕೊಂಡ, ಮಲ್ಲಿಕಾರ್ಜುನ ಕೆಂಗುತ್ತಿ, ಸಿಬ್ಬಂದಿಗಳಾದ ಎಸ್.ಎಚ್.ಮಾದಿನಾಳ, ಎ.ಪಿ.ಹೆರಕಲ್, ಕೆ.ಬಿ.ಹೆಗ್ಗೂರ, ಇತರರು ಇದ್ದರು. ಮಲ್ಲು ಶೇಬಗೊಂಡ ನಿರೂಪಿಸಿದರು.

ಇದೇ ಸಂದರ್ಭದಲ್ಲಿ ಹಾಲುಮತ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳನ್ನು, ನಿವೃತ್ತ ನೌಕರ ಬಾಂಧವರನ್ನು, ನಿವೃತ್ತ ಸೈನಿಕರನ್ನು ಸನ್ಮಾನಿಸಲಾಯಿತು.

# ಅರೆ ಕಾಲಿಕ ಸ್ವಯಂ ಸೇವಕರುಗಳ ಆಯ್ಕೆಗೆ ಅರ್ಜಿ ಆಹ್ವಾನ

**ಗದಗ:** ರಾಜ್ಯಾದ್ಯಂತ ಎಲ್ಲ ಜಿಲ್ಲೆ ಹಾಗೂ ತಾಲೂಕುಗಳಲ್ಲಿನ ಕಾನೂನು ಸೇವಾ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸಲು ಅರೆ ಕಾಲಿಕ ಸ್ವಯಂ ಸೇವಕರುಗಳನ್ನು ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದ್ದು ಅರ್ಜಿ ಸಲ್ಲಿಕೆಗೆ ಅಕ್ಟೋಬರ್ 20 ಕೊನೆಯ ದಿನವಾಗಿದೆ ಎಂದು ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾಯಮೂರ್ತಿ ಎಚ್.ಶಶಿಧರ್ ಶೆಟ್ಟಿ ಹೇಳಿದರು.

ಅವರು ಮಂಗಳವಾರ ಬೆಂಗಳೂರಿನಿಂದ ಎಲ್ಲ ಜಿಲ್ಲಾ ಕೇಂದ್ರಗಳ ಕಾನೂನು ಸೇವಾ ಪ್ರಾಧಿಕಾರದ ಮೂಲಕ ಪತ್ರಕರ್ತರೊಂದಿಗೆ ವಿಡಿಯೋ ಕಾನ್ಫರನ್ಸ್‌ನಲ್ಲಿ ಜರುಗಿದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.ಸ್ವಪ್ರೇರಿತ ಕಾನೂನು ಸಹಾಯಕರು ಯಾವುದೇ ಶುಲ್ಕ, ಸಂಭಾವನೆ ಅಥವಾ ಸಂಬಳವನ್ನು ನಿರೀಕ್ಷಿಸದೆ ತಮ್ಮ ಸುತ್ತಮುತ್ತಲಿನ ಪ್ರದೇಶದಲ್ಲಿರುವ ಶೋಷಿತ ಹಾಗೂ ತುಳಿತಕ್ಕೊಳಗಾದ ಜನರ ಸೇವೆಗಳನ್ನು ಮಾಡಲು ಅರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸಲು ಇಚ್ಚಿಸುವ ಕಾನೂನು ವಿದ್ಯಾರ್ಥಿಗಳು, ವೈದ್ಯಕೀಯ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುವ ವ್ಯಕ್ತಿಗಳು, ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳು, ಎಮ್.ಎಸ್. ಡಬ್ಲೂ ವಿದ್ಯಾರ್ಥಿಗಳು ಮತ್ತು ಶಿಕ್ಷಕರು, ಕಾನೂನು ವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ನಿವೃತ್ತ ಸರ್ಕಾರಿ ನೌಕರರು, ಮಾಜಿ ಸೈನಿಕರು ಹಾಗೂ ಅವರ ಕುಟುಂಬದ ಸದಸ್ಯರು, ವಿವಿಧ ಸಂಘಟನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾಮಾಜಿಕ ಸೇವಾ ಮನೋಭಾವ ಹೊಂದಿರುವ ಪುರುಷ ಮತ್ತು ಮಹಿಳೆಯರು, ಮಂಗಳಮುಖಿಯರು, ಸನ್ನಡತೆ ಹೊಂದಿದ ಕಾರಾಗೃಹ ಬಂದಿಗಳು ಮತ್ತು ಸ್ವ-ಸಹಾಯ ಸಂಘಗಳ ಸದಸ್ಯರು, ಸಾಮಾಜಿಕ ಕಾರ್ಯಕರ್ತರು, ಪತ್ರಕರ್ತರು ಸೇವೆ ಸಲ್ಲಿಸಲು ಆಸಕ್ತಿ ಇರುವವರು ಅರ್ಜಿ ಸಲ್ಲಿಸಬಹುದು.

ಗದಗ ತಾಲೂಕಿನಲ್ಲಿ ಸೇವೆ ಸಲ್ಲಿಸಲು ಆಸಕ್ತರಿರುವ ಅಭ?ಯರ್ಥಿಗಳು ಗದಗ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಗದಗ ಕಚೇರಿಗೆ ಹಾಗೂ ಆಯಾ ತಾಲೂಕಿನ ಅಭ?ಯರ್ಥಿಗಳು ಮೇಲ್ಕಂಡ ತಾಲೂಕಿನ ನ್ಯಾಯಾಲಯದ ಆವರಣದಲ್ಲಿರುವ ತಾಲೂಕಾ ಕಾನೂನು ಸೇವಾ ಸಮಿತಿಗಳಲ್ಲಿರುವ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿತ ಅವಧಿಯೊಳಗೆ ಖುದ್ದಾಗಿ ಸಲ್ಲಿಸಬೇಕು. ಸಂದರ್ಶನದ ದಿನಾಂಕ ಹಾಗೂ ಸಮಯವನ್ನು ನಂತರ ತಿಳಿಸಲಾಗುವುದು ಎಂದರು.

ಆಯ್ಕೆಯಾದ ಅಭ್ಯರ್ಥಿಗಳಿಗೆ ಕಾನೂನು ಸೇವಾ ಪ್ರಾಧಿಕಾರದಿಂದ ಐಡಿ ಗುರುತಿನ ಚೀಟಿ ನೀಡುವುದರೊಂದಿಗೆ ಒಂದು ವರ್ಷದವರೆಗೆ ನೇಮಕ ಮಾಡಿಕೊಳ್ಳಲಾಗುವುದು. ಅವರು ತಮ್ಮ ವ್ಯಾಪ್ತಿಯಲ್ಲಿ ಇರುವ ವಿವಿಧ ರೀತಿಯ ಪ್ರಕರಣ ಸೇರಿದಂತೆ ಕಾನೂನು ಸೇವಾ ಪ್ರಾಧಿಕಾರ ವಹಿಸುವ ಕಾರ್ಯವನ್ನು ನಿರ್ವಹಿಸಬೇಕು. ಅವರ ಕಾರ್ಯ ತೃಪ್ತಿಕರವಾಗಿದ್ದಲ್ಲಿ ಮುಂದುವರೆಸಲಾಗುವುದು ನ್ಯಾಯಮೂರ್ತಿ ಎಚ್.ಶಶಿಧರ್ ಶೆಟ್ಟಿ ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡ್ರ, ಅವರು ಮಾತನಾಡಿ ಸ್ವಯಂ ಸೇವಕರ ಹುದ್ದೆಗಾಗಿ ಅರ್ಜಿ ಸಲ್ಲಿಸಲು ವಿವಿಧ ಕ್ಷೇತ್ರಗಳ ಆಸಕ್ತ ಅಭ್ಯರ್ಥಿಗಳು ನಿಗದಿತ ಸಮಯದೊಳಗೆ ಅರ್ಜಿ ಸಲ್ಲಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳು ವಹಿಸಿದ ಜವಾಬ್ದಾರಿ ಸಮರ್ಪಕವಾಗಿ ನಿರ್ವಹಿಸುವ ಮೂಲಕ ಜನಸಾಮಾನ್ಯರಿಗೆ ನೆರವಾಗಬೇಕು ಎಂದರು.

## ನೇರ ಸಾಲ ಯೋಜನೆ: ಅರ್ಜಿ ಆಹ್ವಾನ

**ಕೊಪ್ಪಳ:** ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ವತಿಯಿಂದ 2025–26ನೇ ಸಾಲಿಗೆ ವಿಪ್ರ ಸ್ವ ಉದ್ಯಮ ನೇರ ಸಾಲ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಲ್ಲಿ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಸ್ವಯಂ ಉದ್ಯೋಗ ಕೈಗೊಳ್ಳಲು ಮಂಡಳಿಯ ವತಿಯಿಂದ ನೇರವಾಗಿ ಸಾಲ– ಸಹಾಯಧನ ಮಂಜೂರು ಮಾಡಲಾಗುವುದು. ಹಲವು ವೃತ್ತಿಗಳಾದ ಹಸು ಸಾಕಾಣಿಕೆ, ಗುಡಿಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ, ಟ್ಯಾಕ್ಸಿ ಇತ್ಯಾದಿ ವ್ಯಾಪಾರ ವಹಿವಾಟುಗಳನ್ನು ಕೈಗೊಳ್ಳಲು ಕನಿಷ್ಠ ರೂ.1 ಲಕ್ಷ ಹಾಗೂ ಗರಿಷ್ಠ ರೂ.2 ಲಕ್ಷಗಳ ಆರ್ಥಿಕ ನೆರವು ಒದಗಿಸಲಾಗುವುದು. ಅರ್ಜಿ ಸಲ್ಲಿಸುವ ಫಲಾನುಭವಿಗಳು ಬ್ರಾಹ್ಮಣ ಸಮುದಾಯದ ಸಾಮಾನ್ಯ ವರ್ಗಕ್ಕೆ ಸೇರಿದವರಾಗಿದ್ದು, ಚಾಲ್ತಿಯಲ್ಲಿರುವ ಆರ್ಥಿಕವಾಗಿ ಹಿಂದುಳಿದ ಪ್ರಮಾಣಪತ್ರ (ಇಡಬ್ಲ್ಯೂಎಸ್ ಪ್ರಮಾಣ ಪತ್ರ) ಹೊಂದಿರಬೇಕು. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. 18 ರಿಂದ 65 ವರ್ಷದ ಒಳಗಿನವರಾಗಿರಬೇಕು. ಒಂದು ಕುಟುಂಬದಿಂದ ಒಬ್ಬರು ಮಾತ್ರ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಮಹಿಳೆಯರಿಗೆ ಶೇ.33, ವಿಶೇಷ ಚೇತನರಿಗೆ ಶೇ.5 ಮೀಸಲಾತಿಯನ್ನು ನೀಡಲಾಗುವುದು. ಅರ್ಜಿದಾರರ ಆಧಾರ್‌ಗೆ ಮೊಬೈಲ್ ಸಂಖ್ಯೆ ಲಿಂಕ್ ಆಗಿರಬೇಕು ಮತ್ತು ಬ್ಯಾಂಕ್ ಖಾತೆ ಸೀಡ್ ಆಗಿರಬೇಕು. ಅರ್ಜಿಯನ್ನು ksbdb.karnataka.gov.in ವೆಬ್‌ಸೈಟ್‌ನಲ್ಲಿ ಅಕ್ಟೋಬರ್ 31 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 8762249230 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಗವಿಶಂಕರ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂಡಿಯಾ ಸ್ಕಿಲ್ಸ್ ಸ್ಪರ್ಧೆ: ನೋಂದಣಿಗೆ ಸೂಚನೆ

**ಕೊಪ್ಪಳ:** ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ(ಕೆ.ಎಸ್.ಡಿ.ಸಿ) ವತಿಯಿಂದ ಕರ್ನಾಟಕ ರಾಜ್ಯ ಕೌಶಲ್ಯ ಒಲಿಂಪಿಕ್ಸ್–2025 ನ್ನು ಪ್ರಾರಂಭಿಸಲಾಗಿದ್ದು, ಆಸಕ್ತರು ನೋಂದಣಿ ಮಾಡಿಕೊಳ್ಳಬಹುದು. ಈ ಸ್ಪರ್ಧೆಯ ವಿಜೇತರಿಗೆ ಸುಧಾರಿತ ತರಬೇತಿ ನೀಡಲಾಗುತ್ತದೆ. ಅವರು ಮುಂದಿನ ವರ್ಲ್ಡ್ ಸ್ಕಿಲ್ಸ್–2026 ಶಾಂಘೈ, ಚೀನಾದಲ್ಲಿ ನಡೆಯಲಿರುವ ಸ್ಪರ್ಧೆಯಲ್ಲಿ ಭಾರತದಿಂದ ಪ್ರತಿನಿಧಿಸುವ ಅವಕಾಶ ಪಡೆಯಲಿದ್ದಾರೆ. ಆದ್ದರಿಂದ ಜಿಲ್ಲೆಯ ಎಲ್ಲಾ ಆಸಕ್ತ ಯುವಕ–ಯುವತಿಯರು ಮತ್ತು ವಿದ್ಯಾರ್ಥಿಗಳು ತಮ್ಮ ಕೌಶಲ್ಯ ಪ್ರದರ್ಶಿಸಲು ಈ ಅವಕಾಶವನ್ನು ಬಳಸಿಕೊಳ್ಳಬೇಕು. ನೋಂದಣಿ ಪ್ರಕ್ರಿಯೆಯು ಸೆಪ್ಟೆಂಬರ್ 30 ರಂದು ಮುಕ್ತಾಯಗೊಳ್ಳಲಿದ್ದು, ಆಸಕ್ತರು www.skillindiadigital.gov.in/home ವೆಬ್‌ಪೋರ್ಟಲ್‌ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಕೊಳ್ಳುವುದರ ಮೂಲಕ ಸ್ಪರ್ಧೆಯಲ್ಲಿ ಭಾಗವಹಿಸಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಿಳಾ ತರಬೇತುದಾರರಿಂದ ಅರ್ಜಿ ಆಹ್ವಾನ

**ಕೊಪ್ಪಳ:** 2025–26ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರಿಗೆ ಕರಾಟೆ ಸ್ವಯಂ ರಕ್ಷಣಾ ತರಬೇತಿಯನ್ನು ನೀಡಲು ಅರ್ಹ ನುರಿತ ಮಹಿಳಾ ತರಬೇತಿದಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕಾಲೇಜುಗಳಲ್ಲಿ 6,7,8,9 ಮತ್ತು 11ನೇ ತರಗತಿಯವರೆಗಿನ ವಿದ್ಯಾರ್ಥಿನಿಯರಿಗೆ 06 ತಿಂಗಳಿಗೆ 48 ಬೋಧನಾ ಅವಧಿಗಳಲ್ಲಿ ಕರಾಟೆ–ಸ್ವಯಂ ರಕ್ಷಣಾ ತರಬೇತಿಯನ್ನು ನೀಡಲು ಅರ್ಹ ನುರಿತ ಮಹಿಳಾ ತರಬೇತಿದಾರರು ಅರ್ಜಿ ಸಲ್ಲಿಸಬಹುದು. ಆಸ್ತಕ ತರಬೇತಿದಾರರು ಸೆಪ್ಟೆಂಬರ್ 26 ರೊಳಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳ ಕಾರ್ಯಾಲಯ, ಮೌಲಾನಾ ಆಜಾದ್ ಭವನ, ಹೊಸಪೇಟ ರಸ್ತೆ, ಕೊಪ್ಪಳ ಕಚೇರಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08539–225070 ಗೆ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬ್ಯಾಂಕ್ ದರೋಡೆ ತಪ್ಪಿಸಲು ಮುನ್ನೆಚ್ಚರಿಕಾ ಕ್ರಮ ಅಳವಡಿಸಿಕೊಳ್ಳಿ

**ಕಾರವಾರ:** ಇತ್ತೀಚಿನ ದಿನದಲ್ಲಿ ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಬ್ಯಾಂಕ್ ದರೋಡೆ ಪ್ರಕರಣಗಳು ನಡೆದಿದ್ದು, ಜಿಲ್ಲೆಯಲ್ಲಿ ಇಂತಹ ಪ್ರಕರಣಗಳನ್ನು ತಡೆಯುವ ನಿಟ್ಟಿನಲ್ಲಿ ಎಲ್ಲಾ ಬ್ಯಾಂಕ್‌ಗಳಲ್ಲಿ ಗರಿಷ್ಠ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಮತ್ತು ಸುರಕ್ಷತಾ ಸಾಧನಗಳನ್ನು ಅಳವಡಿಸಿಕೊಳ್ಳುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್. ಎಲ್ಲಾ ಬ್ಯಾಂಕ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅವರು ಸೋಮವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಲೀಡ್ ಬ್ಯಾಂಕ್ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು.

ಜಿಲ್ಲೆಯ ಎಲ್ಲಾ ಬ್ಯಾಂಕ್‌ಗಳಲ್ಲಿ ಈಗಾಗಲೇ ಅಳವಡಿಸಿಕೊಂಡಿರುವ ಸುರಕ್ಷತಾ ಸಾಧನಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಆಂತರಿಕ ಸುರಕ್ಷತಾ ಪರಿಶೀಲನೆ ಕೈಗೊಂಡು ಈ ಸಂದರ್ಭದಲ್ಲಿ ಕಂಡುಬರುವ ಲೋಪಗಳನ್ನು ಸರಿಪಡಿಸಿಕೊಳ್ಳಬೇಕು. ಬ್ಯಾಂಕ್ ಗಳಲ್ಲಿ ಉತ್ತಮ ಗುಣಮಟ್ಟದ ಅತ್ಯಾಧುನಿಕ ಎಫ್.ಆರ್.ಎಸ್ ( ಫೇಸ್ ರೆಕಗ್ನೇಷನ್ ಸಿಸ್ಟಂ) ಕ್ಯಾಮೆರಾಗಳನ್ನು



ಅಳವಡಿಸಕೊಳ್ಳುವಂತೆ ಮತ್ತು ಬ್ಯಾಂಕ್ ನ ಹೊರಭಾಗದಲ್ಲಿ ಎ.ಎನ್.ಪಿ.ಆರ್ (ಆಟೋಮೇಟಿಕ್ ನಂಬರ್ ಪ್ಲೇಟ್ ರೆಕಗ್ನೇಷನ್ ) ಕ್ಯಾಮೆರಾಗಳನ್ನು ಅಳವಡಿಸಿಕೊಳ್ಳುವಂತೆ ತಿಳಿಸಿದ ಅವರು ಎಲ್ಲಾ ಕೆಮರಾಗಳನ್ನು ಸೂಕ್ತ ಜಾಗದಲ್ಲಿ ಅಳವಡಿಸುವಂತೆ ಹಾಗೂ ಆಗಾಗ್ಗೆ ಅವುಗಳ ಕಾರ್ಯ ವೈಖರಿಯನ್ನು ಪರಿಶೀಲಿಸುವಂತೆ ತಿಳಿಸಿದರು.

ಬ್ಯಾಂಕ್‌ಗಳಲ್ಲಿನ ಅಲಾರಂ ವ್ಯವಸ್ಥೆಯನ್ನು ತುರ್ತು ಸಮಯದಲ್ಲಿ ಸಮೀಪದ ಪೊಲೀಸ್ ಠಾಣೆಗೆ ಅಥವಾ ಪೊಲೀಸ್ ಕಂಟ್ರೋಲ್ ರೂಂ ಗೆ ಎಚ್ಚರಿಕೆಯನ್ನು ರವಾನಿಸುವ ರೀತಿಯಲ್ಲಿ ಮಾರ್ಪಡಿಸಿಕೊಳ್ಳಿ, ಎಲ್ಲಾ ಬ್ಯಾಂಕ್ ಗಳಿಗೆ ಸಶಸ್ತ್ರಧಾರಿ ಕಾವಲುಗಾರರನ್ನು ನೇಮಕ ಮಾಡಿ, ಕಾವಲುಗಾರರಿಗೆ ಶಸ್ತ್ರಾಸ್ತ್ರಗಳನ್ನು ಹೊಂದಲು ಪೊಲೀಸ್ ಇಲಾಖೆಯಿಂದ ಸೂಕ್ತ ಅನುಮತಿಯನ್ನು ನೀಡಲಾಗುವುದು. ದೂರ ಪ್ರದೇಶದಲ್ಲಿರುವ ಮತ್ತು ಕಾವಲುಗಾರರಿಲ್ಲದ ಎಟಿಎಂ ಗಳನ್ನು ರಾತ್ರಿಯ ವೇಳೆ ಮುಚ್ಚುವುದು ಉತ್ತಮ, ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಪ್ರದೇಶದಲ್ಲಿನ ಎಟಿಎಂಗಳ ಬಗ್ಗೆ ಪೊಲೀಸ್ ಇಲಾಖೆಗೆ ಮಾಹಿತಿ ನೀಡಿದಲ್ಲಿ ಇ–ಬೀಟ್ ವ್ಯವಸ್ಥೆಯ ಮೂಲಕ ನಿರಂತರವಾಗಿ ಪರಿಶೀಲನೆ ನಡೆಸಲಾಗುವುದು ಎಂದರು.

ಬ್ಯಾಂಕ್‌ಗಳ ಹಿಂಭಾಗದಲ್ಲಿ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ರಾತ್ರಿಯ ವೇಳೆ ಸೂಕ್ತ ಬೆಳಕಿನ ವ್ಯವಸ್ಥೆ ಮಾಡಿಕೊಳ್ಳುವಂತೆ ತಿಳಿಸಿದ ಅವರು ಬ್ಯಾಂಕ್‌ಗಳಲ್ಲಿನ ಸುರಕ್ಷತೆ ಬಗ್ಗೆ ಆಗಾಗ್ಗೆ ಅಣುಕು ಪರೀಕ್ಷೆಗಳನ್ನು ಮಾಡಿ ಹೆಚ್ಚು ಸುರಕ್ಷಿತವಾಗಿರುವ ಬಗ್ಗೆ ಖಚಿತಪಡಿಸಿಕೊಳ್ಳಿ ಎಂದರು. ಜಿಲ್ಲೆಯ ಮುಂಡಗೋಡ ಮತ್ತಿತರ ಪ್ರದೇಶದಲ್ಲಿ ಮೀಟರ್ ಬಡ್ಡಿಯ ಹಾವಳಿ ಇದ್ದು, ಇಲ್ಲಿನ ಬಡವರು, ಬೀದಿ ಬದಿ ವ್ಯಾಪಾರಿಗಳು ಹಾಗೂ ಅಮಾಯಕರಿಂದ ಖಾಲಿ ಚೆಕ್ ಗಳನ್ನು ಪಡೆದು ಅವರನ್ನು ವಂಚಿಸುತ್ತಿರುವುದು ಕಂಡು ಬರುತ್ತಿದೆ, ಈ ಪ್ರದೇಶದಲ್ಲಿನ ಸಾರ್ವಜನಿಕರಿಗೆ ಬ್ಯಾಂಕ್ ಗಳಿಂದ ದೊರೆಯುವ ಸಾಲ ಸೌಲಭ್ಯದ ಬಗ್ಗೆ ಸಾಕ್ಷರತಾ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಹಾಗೂ ಖಾಲಿ ಚೆಕ್ ನೀಡಿದರೆ ಆಗುವ ಪರಿಣಾಮಗಳ ಕುರಿತು ಅರಿವು ಮೂಡಿಸುವುದರ ಜೊತೆಗೆ ಅವರಿಗೆ ವಿವಿಧ ಯೋಜನೆಗಳಲ್ಲಿ ಸಾಲ ವಿತರಣೆಗೆ ಕ್ರಮ ಕೈಗೊಳ್ಳುವಂತೆ ಎಲ್ಲಾ ಬ್ಯಾಂಕ್ ಅಧಿಕಾರಿಗಳಿಗೆ ಎಸ್ಪಿ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಕೃಷ್ಣಮೂರ್ತಿ, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಜಿಲ್ಲೆಯ ಎಲ್ಲಾ ಬ್ಯಾಂಕ್‌ಗಳ ಅಧಿಕಾರಿಗಳು ಇದ್ದರು.

## ಜಿಎಸ್‌ಟಿ ಕಡಿತ ಬಿಜೆಪಿಯಿಂದ ಸಂಭ್ರಮಾಚರಣೆ



**ಜಮಖಂಡಿ:** ಕೇಂದ್ರ ಸರ್ಕಾರ ದಸರಾ ಹಬ್ಬಕ್ಕೆ ಭರ್ಜರಿ ಕೊಡುಗೆ ನೀಡಿದೆ. ನಿತ್ಯ ಬಳಕೆಯ ವಸ್ತುಗಳ ಸಹಿತ ಔಷಧಿಗಳು ಸೇರಿದಂತೆ 375 ವಸ್ತುಗಳು ಅಗ್ಗದ ದರದಲ್ಲಿ ಜನಸಾಮಾನ್ಯರಿಗೆ ದೊರಕುವಂತೆ ಮಾಡಿರುವ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಕ್ರಮವನ್ನು ಸ್ವಾಗತಿಸಿವೆ ಎಂದು ಶಾಸಕ ಜಗದೀಶ ಗುಡಗುಂಟಿ ಹೇಳಿದರು.

ನಗರದ ಹನುಮಾನ ಚೌಕದಲ್ಲಿ ಸೋಮವಾರ ನಡೆದ ಸಂಭ್ರಮಾಚರಣೆ ಮೆರವಣಿಗೆಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಜನಪರ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಭಾರತದೇಶ ಅಭಿವೃದ್ಧಿ ಪಥದಲ್ಲಿ ಸಾಗುತ್ತಿದೆ. 140 ಕೋಟಿ ಜನರಿಗೆ ಒಳ್ಳೆಯದಾಗಲಿ ಎಂಬ ಉದ್ದೇಶದಿಂದ ಒಂದು ದೇಶ ಒಂದು ತೆರಿಗೆ ಯೋಜನೆ ಯನ್ನು ಜಾರಿಗೆ ತರಲಾಗಿದೆ. ಶೇ.24 ರಷ್ಟಿದ್ದ ತೆರಿಗೆಯನ್ನು ಶೇ.18ಕ್ಕೆ ಇಳಿಸಲಾಗಿದೆ. ಶೇ.18 ರಷ್ಟಿದ್ದ ತೆರಿಗೆಯನ್ನು ಶೇ.5ಕ್ಕೆ ಇಳಿಸಲಾಗಿದೆ. ಶೇ.5ರಷ್ಟಿದ್ದ ತೆರಿಗೆಯನ್ನು ತೆಗೆದು ಹಾಕುವ ಮೂಲಕ ದೇಶದ ಜನರಿಗೆ ಅನುಕೂಲ ಕಲ್ಪಿಸಿದ್ದಾರೆ. ಇದರಿಂದ ಉತ್ಪಾದಕರು, ವ್ಯಾಪಾರಸ್ಥರು ಹಾಗೂ ಗ್ರಾಹಕರಿಗೆ ಹೆಚ್ಚಿನ ಲಾಭವಾಗಲಿದೆ ಎಂದರು. ಮಾಜಿ ಶಾಸಕ ಶ್ರೀಕಾಂತ ಕುಲಕರ್ಣಿ ಮಾತನಾಡಿ, ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ಎಲ್ಲ ದೇಶವಾಸಿಗಳಿಗೆ ಒಂದೇ ರೀತಿ ತೆರಿಗೆಯನ್ನು ಜಾರಿಗೊಳಿಸಿರುವ ಕೇಂದ್ರ ಸರ್ಕಾರ ದೇಶವನ್ನು ವಿಶ್ವಗುರು ಮಾಡಲು ಪ್ರಧಾನಿ ಮೋದಿ ಕೆಲಸ ಮಾಡುತ್ತಿದ್ದಾರೆ. ಹೊರೆಯಾಗಿದ್ದ ಜಿಎಸ್ಟಿಯನ್ನು ಕಡಿತಗೊಳಿಸುವ ಮೂಲಕ ದೇಶದ ಜನರಿಗೆ ದಸರಾ ಹಬ್ಬದ ಕೊಡುಗೆ ನೀಡಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ವಿಧಾನ ಪರಿಷತ ಮಾಜಿಸದಸ್ಯ ಜಿ.ಎಸ್.ನ್ಯಾಮಗೌಡ, ರಾಜ್ಯ ಮಹಿಳಾ ಮೋರ್ಚಾ ಉಪಾಧ್ಯಕ್ಷೆ ಡಾ.ವಿಜಯಲಕ್ಷ್ಮೀ ತುಂಗಳ, ಸಿ.ಟಿ.ಉಪಾಧ್ಯೆ, ಶ್ರೀಧರ ಕಂಬಿ, ಅಜಯ ಕಡಪಟ್ಟಿ, ಮಲ್ಲು ದಾನಗೌಡ, ಸುರೇಶಗೌಡ ಪಾಟೀಲ, ಈಶ್ವರ ಆದೆಪ್ಪನವರ, ಶಂಕರ ಕಾಳೆ, ಗಣೇಶ ಸಿರಗಣ್ಣವರ, ಸಂಗು ದಳವಾಯಿ, ಗುರುಪಾದಪ್ಪ ಮೆಂಡಿಗೇರಿ, ಯಮನೂರು ಮೂಲಂಗಿ, ಪ್ರಶಾಂತ ಶಂಕ್ರಪ್ಪಗೋಳ, ರಾಜೇಸಾಬ ಕಡಕೋಳ, ಪ್ರಶಾಂತ ಗಾಯಕವಾಡ, ಪ್ರಕಾಶ ಅರಕೇರಿ, ಹನುಮಂತ ಲಿಗಾಡಿ, ಪ್ರದೀಪ ನಂದೆಪ್ಪನವರ, ಸುಜೀತಗೌಡ ಪಾಟೀಲ, ವಿಶ್ವಾಸ ಪಾಟಿಲ, ಎಂ.ಬಿ.ನ್ಯಾಮಗೌಡ, ಸಿದ್ದು ನ್ಯಾಮಗೌಡ, ನಂದು ಅರಕೇರಿ, ಶಕೀಲ ರಾಯಭಾಗ ಸಹಿತ ಹಲವರು ಇದ್ದರು.


## ಲಾಭದತ್ತ ಕೊಂಡೊಯ್ಯುವಲ್ಲಿ ಶೇರುದಾರರ ಪಾತ್ರ ಹಿರಿದು

**ರಬಕವಿ–ಬನಹಟ್ಟಿ:** ಹೊಸೂರಿನು ಪಿಕೆಪಿಎಸ್ ಸಂಘವು 14 ವರ್ಷಗಳಿಂದ ಈ ಭಾಗದ ರೈತರ ಹಾಗು ನೇಕಾರ ಸಮುದಾಯಕ್ಕೆ ಶ್ರಮಿಸುವಲ್ಲಿ ಯಶಸ್ವಿ ಕಂಡಿದ್ದು, ಪ್ರಸಕ್ತ ವರ್ಷ ಉತ್ತಮ ಲಾಭದತ್ತ ಕೊಂಡೊಯ್ಯುವಲ್ಲಿ ಶೇರುದಾರರ ಪಾತ್ರ ಹಿರಿದಾಗಿದೆ ಶಾಸಕ ಸಿದ್ದು ಸವದಿ ಹೇಳಿದರು.

ಹೊಸೂರಿನ ಸಂಘದ ಕಾರ್ಯಾಲಯದಲ್ಲಿ ನಡೆದ ವಾರ್ಷಿಕ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಶೇರುದಾರರ ಬಡ್ಡಿಯ ಹಣದಿಂದಲೇ ಸಂಘವು ಅಭಿವೃದ್ಧಿಗೆ ಕಾರಣವಾಗುತ್ತದೆ. ರೈತರಿಗೆ ಶೂನ್ಯ ಬಡ್ಡಿ ದರದಲ್ಲಿನ ಸಾಲ ಸೌಲಭ್ಯದಿಂದ ಸರ್ಕಾರ ಕೊಡ ಮಾಡುವ ಬಡ್ಡಿಯ ವ್ಯವಸ್ಥೆ ಸಮರ್ಪಕವಾಗಿ ದೊರೆತಲ್ಲಿ ಉತ್ತಮ ಲಾಭಗಳಿಕೆಗೆ ಸಂಘವು ಯಶಸ್ವಿಯಾಗುವದೆಂದರು.

ಸಂಘದ ಅಧ್ಯಕ್ಷ ಚಿನ್ನಪ್ಪ ಅಥಣಿ ಮಾತನಾಡಿ, ಕಟ್ಟಕಡೆಯ ಜನರ ಅಭಿವೃದ್ಧಿಗೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘವು ಮಹತ್ತರ ಪಾತ್ರ ವಹಿಸಿದ್ದು, ಪ್ರಸಕ್ತ ವರ್ಷ 20.8 ಲಕ್ಷ ರೂ.ಗಳಷ್ಟು ಲಾಭದೊಂದಿಗೆ ಮುನ್ನಡೆಯುತ್ತಿರುವ ಸಂಘವು ಶೇ.10 ರಷ್ಟು ಲಾಭಾಂಶವನ್ನು ನೀಡಲಾಗುವದೆಂದು ಘೋಷಿಸಿದರು.

ಹಣಮಂತ ಅಂಬಲಜೇರಿ, ಈಶ್ವರ ಸೋನಾರ, ಯಲ್ಲಪ್ಪ ಜಕನೂರ, ಶ್ರೀಶೈಲ ಮೇಟಿ, ಕೃಷ್ಣಪ್ಪ ನಾಯಕ, ಶ್ರೀಮತಿ ಮಹೇಶ್ವರಿ ಸುಭಾಸ ಚೋಳಿ, ಶ್ರೀಮತಿ ಲಕ್ಕವ್ವಾ ರಾ. ಬಿಸನಾಳ, ಕಲ್ಲೋಳ್ಳಿ ಗಾಡಿವಡ್ಡರ, ಕ್ಷೇತ್ರ ಸಿಬ್ಬಂದಿ(ಬಿಡಿಸಿಸಿ ಬ್ಯಾಂಕ್), ಸಂಜು ಅಥಣಿ, ಶಂಕರೆಪ್ಪ ಭಜುರಕ, ಮಲ್ಲಪ್ಪ, ಮಹಾದೇವ ಚೋಳಿ, ಸದಾಶಿವ ಅಮ್ಮಲಜೇರಿ,



## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ: ಆಕ್ಷೇಪಣೆಗೆ ಅವಕಾಶ

**ಹಾವೇರಿ:** ಸಿ.ಪಿ.ಎಚ್.ಸಿ.–ಯು.ಎಚ್‌ಸಿ ಕಾರ್ಯಕ್ರಮ ದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾ ಆರೋಗ್ಯ ಮತ್ತು ಕ್ಷೇಮ ಕೇಂದ್ರ ಸಂಯೋಜಕರ ಹುದ್ದೆಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಿww. haveri.nic.in ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ದಿನಾಂಕ 29–09–2025ರೊಳಗಾಗಿ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿದೆ ಎಚಿದು ಜಿಲ್ಲಾ ಸರ್ವೆಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಗೆ ಚಾಲನೆ

**ಬಸವನಬಾಗೇವಾಡಿ:** ರಾಜ್ಯದಲ್ಲಿ ಸೆ.22 ರಿಂದ ಅ.7 ರವರೆಗೆ ಕರ್ನಾಟಕ ರಾಜ್ಯ ಹಿಂದುಳಿದ ಆಯೋಗದಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಕೈಗೊಂಡಿದ್ದು. ಈ ಸಮೀಕ್ಷೆ ಕಾರ್ಯದಲ್ಲಿ ಪ್ರತಿಯೊಬ್ಬರೂ ಭಾಗವಹಿಸುವ ಮೂಲಕ ಸಮೀಕ್ಷಾ ಕಾರ್ಯವನ್ನು ಯಶಸ್ವಿಗೊಳಿಸಬೇಕೆಂದು ಸಕ್ಕರೆ,ಜವಳಿ ಮತ್ತು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದರು.

ಪಟ್ಟಣದ ವಿದ್ಯಾನಗರದಲ್ಲಿರುವ ಎಪಿಎಂಸಿ ಮಾಜಿ ಅಧ್ಯಕ್ಷ ಶೇಖರ ಗೊಳಸಂಗಿ ಅವರ ನಿವಾಸದ ಮುಂಭಾಗ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಸೋಮವಾರ ಹಮ್ಮಿಕೊಂಡಿದ್ದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ–2025 ಅಂಗವಾಗಿ ಸಮೀಕ್ಷೆ ಮಾಡುವ ಶಿಕ್ಷಕರಿಗೆ ಕಿಟ್ ಅನ್ನು ವಿತರಿಸಿ ಮಾತನಾಡಿದ ಅವರು, ಸೆ.22 ರಿಂದ ಅ.7 ರವರೆಗೆ ನಡೆಯಲಿರುವ ಈ ಸಮೀಕ್ಷೆಯಲ್ಲಿ ಯಾರೂ ಹೊರಗುಳಿಯದಂತೆ ಸಮೀಕ್ಷೆದಾರರು ಗಮನಹ ಹರಿಸಬೇಕು. ರಾಜ್ಯದ 7 ಕೋಟಿ ಜನರ ಸಾಮಾಜಿಕ, ಶೈಕ್ಷಣಿಕ ಪರಿಸ್ಥಿತಿ



ತಿಳಿದುಕೊಳ್ಳು ಉದ್ದೇಶದಿಂದ ಈ ಸಮೀಕ್ಷೆ ನಡೆಯುತ್ತಿದೆ. ಸಮೀಕ್ಷಾದಾರರು ಪ್ರತಿ ಸದಸ್ಯರ ವಿದ್ಯಾರ್ಹತೆ,ಕೌಶಲ್ಯ ತರಬೇತಿಯ ಅಗತ್ಯತೆ, ಆದಾಯ, ಕುಟುಂಬದ ಸ್ಥಿರ ಮತ್ತು ಚರಾಸ್ತಿ ವಿವರಗಳು ಧರ್ಮ, ಜಾತಿ, ಉಪಜಾತಿ ಹಾಗೂ ಕುಲಕಸುಬು ಮತ್ತಿತರ ಮಾಹಿತಿಗಳನ್ನು ಸಂಗ್ರಹಿಸಿ ಸಮೀಕ್ಷಾ ಆ?ಯಪ್ ನಲ್ಲಿ ಸಂಗ್ರಹಿಸಬೇಕು. ಸಮೀಕ್ಷಾದಾರರೊಂದಿಗೆ ಜನರು ಸಹಾಯ–ಸಹಕಾರ ನೀಡುವ ಮೂಲಕ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಯಶಸ್ವಿಗೊಳಿಸಬೇಕೆಂದರು.

ಈ ಸಂದರ್ಭದಲ್ಲಿ ಗ್ರೇಡ್–2 ತಹಸೀಲ್ದಾರ ಎಸ್.ಎಚ್.ಅರಕೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಕಲ್ಯಾಣಾಧಿಕಾರಿ ಶಾಂತಾಬಾಯಿ ನಿಂಬಾಳ, ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ, ಎಪಿಎಂಸಿ ಮಾಜಿ ಅಧ್ಯಕ್ಷ ಶೇಖರ ಗೊಳಸಂಗಿ, ಟಿಎಪಿಎಂಸ್ ಬ್ಯಾಂಕಿನ ಅಧ್ಯಕ್ಷ ಚಂದ್ರಶೇಖರಗೌಡ ಪಾಟೀಲ, ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ಬಿಎಓ ವಸಂತ ರಾಠೋಡ, ಕ್ಷೇತ್ರಸಮನ್ವಾಧಿಕಾರಿ ಸುನೀಲ ನಾಯಕ, ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರವಿ ರಾಠೋಡ, ಹಿಂದುಳಿದ ವರ್ಗಗಳ ಇಲಾಖೆಯ ವಿಸ್ತೀರ್ಣಾಧಿಕಾರಿ ಸಿ.ಜಿ.ಬಿರಾದಾರ, ಸಿಬ್ಬಂದಿಗಳು ಇತರರು ಇದ್ದರು.

# ಸರ್ವೆ ನಂ.65ಕ್ಕೆ ಗ್ರಾಮಸ್ಥರಿಂದ ತಕರಾರು ಅರ್ಜಿ

**ಬಸವನಬಾಗೇವಾಡಿ:** ತಾಲೂಕಿನ ನಾಗರಾಳಹುಲಿ ಗ್ರಾಮದಲ್ಲಿರುವ ಜಮೀನು ಸರ್ವೆ ನಂ.65 ಕ್ಕೆ ಗ್ರಾಮಸ್ಥರು ಸೋಮವಾರ ತಹಸೀಲ್ದಾರರಿಗೆ ತಕರಾರು ಅರ್ಜಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಪ್ರಕಾಶ ಜಂಬಲದಿನ್ನಿ, ಸಿದ್ದಪ್ಪ ಸಾಸನೂರ, ಶಂಕ್ರೆಪ್ಪ ಹುಲಿಬೆಂಚಿ, ಬಸಣ್ಣ ಬ್ಯಾಳಿ ಮಾತನಾಡಿ, ಗ್ರಾಮದ ಸರ್ವೆ ನಂ.65 ರಲ್ಲಿ ನಾಲ್ಕು ಎಕರೆ 7 ಗುಂಟೆ ಸರ್ಕಾರಿ ಜಮೀನು ಇದೆ. ಈ ಜಮೀನಿನಲ್ಲಿ ಈಗಾಗಲೇ ಒಂದು ಸರ್ಕಾರಿ ಬಾವಿ ಇದೆ.ನಾಗರಾಳಹುಲಿ ಗ್ರಾಮದಿಂದ ವಡವಡಗಿ ಗ್ರಾಮಕ್ಕೆ ಹೋಗುವ ಸರ್ಕಾರಿ ರಸ್ತೆ ಸಹ ಇದೆ. ಅಲ್ಲದೇ ಈ ಜಮೀನಿನಲ್ಲಿ ಒಂದು ಧೋಬಿಘಾಟ ಹಾಗೂ ಗ್ರಾಮದೇವತೆಯ ಗಂಗಸ್ಥಳದ ಪಾದಗಟ್ಟಿ ಸಹ ಇದೆ. ಇದನ್ನು ಹೊರತು ಪಡಿಸಿದಂತೆ ಉಳಿದ ಅಂದಾಜು ಎರಡು ಎಕರೆ ಕ್ಷೇತ್ರದಲ್ಲಿ ಗ್ರಾಮದಲ್ಲಿ ಸರ್ವ ಸಮಾಜದ ಜನರು ಯಾರೇ ಮೃತರಾದರೆ ಮೃತ ಶರೀರದ ದಹನ ಕ್ರಿಯೆಯನ್ನು ಮಾಡಲಾಗುತ್ತದೆ.

ಈ ವಿಷಯ ಗ್ರಾಮದ ಎಲ್ಲ ಜನರಿಗೂ ಗೊತ್ತಿದ್ದರೂ ಸಹ ಇನ್ನುಳಿದ ಸಮಾಜಕ್ಕೆ



ಮೋಸ ಮಾಡಬೇಕೆಂಬ ಉದ್ದೇಶದಿಂದ ಮುಸ್ಲಿಂ ಸಮಾಜದವರು ಈ ಜಮೀನು ಸ್ಮಶಾನಕ್ಕೆ ಬೇಕು ಎಂದು ಬೇಡಿಕೆ ಇಟ್ಟಿದ್ದಾರೆ. ಅಲ್ಲದೇ ಈ ಜಮೀನಿನ ಶೀಟ್ ಮಾಡಲು ಅರ್ಜಿ ಸಲ್ಲಿಸಿದ್ದಾರೆ ಎಂದು ತಿಳಿದು ಬಂದಿದೆ. ಯಾವುದೇ ಕಾರಣಕ್ಕೂ ಅಧಿಕಾರಿಗಳು ಶೀಟ್ ಮಾಡಬಾರದೆಂದು ಎಲ್ಲ ಗ್ರಾಮಸ್ಥರ ತಕರಾರು ಇದೆ ಎಂದರು.

ಗ್ರಾಮದ ಸರ್ವೆ ನಂ.4 ರಲ್ಲಿ ವಿಶೇಷವಾಗಿ ಮುಸ್ಲಿಂ ಸಮಾಜ ಬಾಂಧವರಿಗೆ ಈಗಾಗಲೇ ಸ್ಮಶಾನ ಜಮೀನು ಇದೆ. ಮುಸ್ಲಿಂ ಸಮಾಜ ಬಾಂಧವರಿಗೆ ಸ್ಮಶಾನ ಜಮೀನು ಇದ್ದರೂ ಸರ್ವೆ ನಂ.65 ರಲ್ಲಿ ಮತ್ತೆ ಬೇಡಿಕೆ ಇಟ್ಟಿದ್ದಾರೆ. ಅಧಿಕಾರಿಗಳು ಯಾವುದೇ ಕಾರಣಕ್ಕೂ ಸರ್ವೆ ನಂ.65 ರಲ್ಲಿ ಯಾವುದೇ ಬದಲಾವಣೆ ಮಾಡಬಾರದು ಎಂದು ಸಮಸ್ತ ಗ್ರಾಮಸ್ಥರ ಅಭಿಪ್ರಾಯವಾಗಿದೆ ಎಂದರು.

ಮನವಿ ಪತ್ರವನ್ನು ಗ್ರೇಡ್–2 ತಹಸೀಲ್ದಾರ ಎಸ್.ಎಚ್.ಅರಕೇರಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಹಣಮಂತ ಮಾರ್ಸನಳ್ಳಿ, ಗುರಣ್ಣ ಜಮ್ಮಲದಿನ್ನಿ, ಬಸಪ್ಪ ಬ್ಯಾಳಿ, ಕಾಳಪ್ಪ ಮಾದರ, ಚಂದ್ರಶೇಖರ ಜಮ್ಮಲದಿನ್ನಿ, ಶಂಕ್ರೆಪ್ಪ ಹುಲಬೆಂಚಿ, ಪರಶುರಾಮ ಮಾದರ, ಬಸಪ್ಪ ಕಾಮನಕೇರಿ, ರಮೇಶ ಜಡದಾರಿ, ಸಿದ್ದು ತಳೇವಾಡ, ನಿಂಗಪ್ಪ ಜಮ್ಮಲದಿನ್ನಿ, ಗುರಪ್ಪ ಜಮ್ಮಲದಿನ್ನಿ, ಪಿ.ಎಸ್. ಹುಣಶ್ಯಾಳ, ದ್ಯಾಮಣ್ಣ ಜಮ್ಮಲದಿನ್ನಿ, ಬನ್ನೆಪ್ಪ ಹುಲಬೆಂಚಿ ಸೇರಿದಂತೆ ಇತರರು ಇದ್ದರು.

# ವೀರ್ ಪರಿವಾರ್ ಸಹಾಯತಾ ಯೋಜನೆ

**ಬೆಳಗಾವಿ:** ಮಾಜಿ ಸೈನಿಕರಿಗೆ ಹಾಗೂ ಅವರ ಅವಲಂಬಿತರಿಗೆ ಉಚಿತ ಮತ್ತು ಸಮರ್ಥ ಕಾನೂನು ಸೇವೆಯನ್ನು ಒದಗಿಸಲು ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದಡಿ "ವೀರ್ ಪರಿವಾರ್ ಸಹಾಯತಾ ಯೋಜನೆ 2025" ಎಂಬ ಹೊಸ ಯೋಜನೆಯನ್ನು ಪ್ರಾರಂಭಿಸಲಾಗಿರುತ್ತದೆ.

ಸದರಿ ಯೋಜನೆಯನ್ವಯ ಮಾಜಿ ಸೈನಿಕರಿಗೆ ಹಾಗೂ ಅವರ ಅವಲಂಬಿತರಿಗೆ ಕಾನೂನು ಸಹಾಯ ನೀಡಲು ಬೆಳಗಾವಿ ನ್ಯಾಯಾಲಯದಿಂದ ಒಬ್ಬ ಸರ್ಕಾರಿ ವಕೀಲರು ನೇಮಿಸಲ್ಪಟ್ಟಿದ್ದು, ಸರ್ಕಾರಿ ವಕೀಲರು ನಮ್ಮ ಕಾರ್ಯಾಲಯದಲ್ಲಿ ಸದ್ಯಕ್ಕೆ ವಾರದಲ್ಲಿ ಒಂದು ದಿನ ಅಂದರೆ ಪ್ರತಿ ಗುರುವಾರ ದಿನ ಮುಂಜಾನೆ 11 ಗಂಟೆಯಿಂದ ಸಾಯಂಕಾಲ 05 ಗಂಟೆಯವರೆಗೆ ಲಭ್ಯವಿರುತ್ತಾರೆ.

ಬೆಳಗಾವಿ ಜಿಲ್ಲೆಯ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರು ಆಸ್ತಿ ಸಮಸ್ಸೆ, ಪಾರಿವಾರಿಕ ಸಮಸ್ಸೆ ಮತ್ತು ಇನ್ನುಳಿದ ಯಾವುದೇ ರೀತಿಯ ಸಮಸ್ಸೆಗಳಿಗೆ ಕಾನೂನು ನೆರವಿನ ಅವಶ್ಯಕತೆ ಇದ್ದಲ್ಲಿ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಬೆಳಗಾವಿ ಕಾರ್ಯಾಯಕ್ಕೆ ಬಂದು ಸರ್ಕಾರಿ ವಕೀಲರನ್ನು ಬೇಟಿ ನೀಡಿ ಉಚಿತವಾಗಿ ಮತ್ತು ಸಮರ್ಥ ಕಾನೂನು ನೆರವಿನಿಂದ ತಮ್ಮ ಸಮಸ್ಸೆಗಳಿಗೆ ಪರಿಹಾರವನ್ನು ಪಡೆಯಬಹುದಾಗಿದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶೈಕ್ಷಣಿಕ ಸಮೀಕ್ಷೆ ಸ್ಥಳಕ್ಕೆ ಜಿಲ್ಲಾಧಿಕಾರಿ ಭೇಟಿ

**ಹಾವೇರಿ:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ನಿರ್ದೇಶನದಂತೆ ಸೋಮವಾರ ನಗರದ ಮಂಜುನಾಥ ಕಾಲೋನಿಯ ಬ್ಲಾಕ್ ಸಿ ನಿವಾಸಿಗಳ ಮನೆಗೆ ಶಿಕ್ಷಕರು ಭೇಟಿ ನೀಡಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಆರಂಭಿಸಿದರು.

ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ್ ದಾನಮ್ಮನವರ ಭೇಟಿ ನೀಡಿ ಸಮೀಕ್ಷೆಯನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ನೋಡಲ್ ಅಧಿಕಾರಿಗಳಾದ ಸೈಯ್ಯದಾ ಆಫ್ರಿನ್‌ಬಾನು ಎಸ್ ಬಳ್ಳಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸುಬ್ರಾ ನಾಯ್ಕ, ಕ್ಷೇತ್ರ ಶಿಕ್ಷಣಾಧಿಕಾರಿ ಎಂ ಹೆಚ್ ಪಾಟೀಲ್ ಹಾಗೂ ಇತರರು ಉಪಸ್ಥಿತರಿದ್ದರು.

# ಮಹಿಳೆಯರು ನೆಮ್ಮದಿಯಿಂದ ಇದ್ದರೇ ಜಗತ್ತು ಸದೃಢ

**ಜಮಖಂಡಿ:** ಮಹಿಳೆಯರು ನೆಮ್ಮದಿಯಿಂದ ಇದ್ದರೇ ಮಾತ್ರ ಜಗತ್ತು ಸದೃಢವಾಗಿ ಬೆಳೆಯಲಿದೆ. ತಾಯಿ ಎಂಬುವದು ಅತ್ಯಂತ ದೊಡ್ಡ ಶಕ್ತಿಯಾಗಿ ಗುರುತಿಸಿಕೊಂಡಿದ್ದಾಳೆ ಎಂದು ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶ, ತಾಲೂಕ ಕಾನೂನು ಸೇವಾ ಸಮೀತಿ ಅಧ್ಯಕ್ಷ ರಾಜಶೇಖರ ಹರಸೂರ ಹೇಳಿದರು.

ನಗರದ ಸರಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಸಭಾಭವನದಲ್ಲಿ ಸೋಮವಾರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ತಾಲೂಕ ಕಾನೂನು ಸೇವಾ ಸಮೀತಿ, ನ್ಯಾಯವಾದಿಗಳ ಸಂಘ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಶಿಶು ಅಭಿವೃದ್ಧಿ ಇಲಾಖೆ, ಜಿಲ್ಲಾ ಪಂಚಾಯತ ಇಲಾಖೆ ಮತ್ತು ಜಿಲ್ಲಾಡಳಿತ ಹಮ್ಮಿಕೊಂಡಿದ್ದ ತಾಲೂಕಮಟ್ಟದ ಪೋಷಣ ಅಭಿಯಾನ ಮತ್ತು ವಿಶ್ವ ಪೌಷ್ಠಿಕಾಂಶ ದಿನಾಚರಣೆ ಹಾಗೂ ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ತಾಯಿಯನ್ನು ಭೂಮಿ, ಪ್ರಕೃತಿಗೆ ಹೋಲಿಕೆ ಮಾಡ ಲಾಗಿದೆ. ಮಹಿಳೆಯರನ್ನು



ಗೌರವಿಸುವ ಸ್ಥಳದಲ್ಲಿ ದೇವರು ನೆಲೆಸಿರುತ್ತಾರೆ. ಇಂದಿನ ದಿನಮಾನದಲ್ಲಿ ತಂದೆ–ತಾಯಿ ಮೇಲೆ ಮಕ್ಕಳ ಪ್ರೀತಿ ಕಡಿಮೆಯಾಗುತ್ತಿದೆ. ಕಾನೂನಿನಲ್ಲಿ ಮಹಿಳೆಯರಿಗೆ ಉಚಿತ ಕಾನೂನು ಅರಿವು ಜೊತೆಗೆ ನೆರವು ನೀಡಲಾಗುತ್ತಿದೆ. ಪುರಷ ಪ್ರಧಾನ ವ್ಯವಸ್ಥೆಯಲ್ಲಿ ನೊಂದ ಮಹಿಳೆಯರು ಬಹಿರಂಗವಾಗಿ ನೋವು ತೊಡಿಕೊಳ್ಳುತ್ತಿಲ್ಲ. ನೊಂದ ಮಹಿಳೆಯರ ರಕ್ಷಣೆಗಾಗಿ ದೇಶದಲ್ಲಿ ಕಾನೂನು ಸೇವಾ ಸಮೀತಿ ರಚನೆಗೊಂಡಿದೆ. ಕುಟುಂಬದಲ್ಲಿ ಹೆಣ್ಣು–ಗಂಡು ಮಕ್ಕಳ ಬಗ್ಗೆ ಭೇದಭಾವ ಬಿಡಬೇಕು. ಇಂದಿನ ಜಗತ್ತಿನಲ್ಲಿ ಗಂಡು–ಹೆಣ್ಣು ಸಮಾನಂತರ ರೇಖೆಯಲ್ಲಿ ತೊಡಗಿಕೊಂಡಿದ್ದಾರೆ ಎಂದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪಿ.ಆನಂದ ಮಾತನಾಡಿ, ಪ್ರಸಕ್ತ ವರ್ಷದಲ್ಲಿ ಆರೋಗ್ಯ ಇಲಾಖೆ ಪ್ರಮುಖ 5 ಅಂಶಗಳನ್ನು ಒಳಗೊಂಡಿರುವ ಕಾರ್ಯಕ್ರಮ ರೂಪಿಸಿದೆ. ಗೊಜ್ಜು ನಿವಾರಣೆ, ಸಕ್ಕರೆ, ಉಪ್ಪು, ಅಡುಗೆಎಣ್ಣೆ ಬಳಕೆ ಜಾಗೃತಿ, ತಾಯಿ ಹೆಸರಲ್ಲಿ ಸಸಿ ನೆಡುವ ಕಾರ್ಯಕ್ರಮ, ಚಿಕ್ಕಮಕ್ಕಳ ಆರೋಗ್ಯ ಆರೈಕೆ, ಮಕ್ಕಳಿಗೆ ಉತ್ತಮ ಶಿಕ್ಷಣ ಹೀಗೆ ಐದು ವಿಷಯಗಳ ಕುರಿತು ವರ್ಷವಿಡಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವದು ಎಂದರು.

ತಾಲೂಕಾ ಆರೋಗ್ಯ ಇಲಾಖೆಯ ಡಾ.ಮುಕುಂದ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಪ್ರಧಾನ ಸಿವಿಲ್ ನ್ಯಾಯಾಧೀಶ ಅರ್ಶದ ಅನಸಾರಿ, ನ್ಯಾಯವಾದಿಗಳ ಸಂಘದ ಅಧ್ಯಕ್ಷ ಡಿ.ಎಂ. ಜತ್ತಿ, ಸರಕಾರಿ ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ಡಾ.ವಿ.ಸಿ.ಮುದಿಗೌಡರ, ನ್ಯಾಯವಾದಿ ಎಸ್.ಎಲ್.ಸವದಿ ಇದ್ದರು.

ಇದೇ ಸಂದರ್ಭದಲ್ಲಿ ಗರ್ಭಿಣಿಯರಿಗೆ ಶ್ರೀಮಂತ ಮತ್ತು ಉಡಿತುಂಬುವ ಕಾರ್ಯಕ್ರಮ ನೆರವೇರಿಸಲಾಯಿತು. ಚಿಕ್ಕಮಕ್ಕಳ ಹುಟ್ಟುಹಬ್ಬ ಆಚರಿಸಲಾಯಿತು. ಛದ್ಮವೇಷ ಧರಿಸಿದ ಚಿಕ್ಕಮಕ್ಕಳು ವೇಷಭೂಷನ ಗಮನ ಸೆಳೆಯಿತು. ಶೀಮಂತ ಕಾರ್ಯಕ್ರಮದಲ್ಲಿ ಶೋಭಾನ ಪದಗಳನ್ನು ಹಾಡುವ ಮೂಲಕ ಶೀಮಂತ ಕಾರ್ಯಕ್ರಮಕ್ಕೆ ಹೆಚ್ಚಿನ ಮೆರಗು ತಂದರು.

**ಸಮೀಕ್ಷೆ ಕಾರ್ಯ ಪರಿಶೀಲನೆ: ಸಾರ್ವಜನಿಕರು ಕೈ ಜೋಡಿಸಿ ಸಮೀಕ್ಷೆಯನ್ನು ಯಶಸ್ವಿಗೊಳಿಸಿ: ಜಿಲ್ಲಾಧಿಕಾರಿ ದಿವ್ಯ ಪ್ರಭು**

# ಜಿಲ್ಲೆಯಲ್ಲಿ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಗೆ ಚಾಲನೆ

**ಧಾರವಾಡ:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಇಂದಿನಿಂದ ರಾಜ್ಯಾದ್ಯಂತ ಆರಂಭಿಸಿರುವ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಧಾರವಾಡ ಜಿಲ್ಲೆಯಲ್ಲಿ ಚಾಲನೆ ನೀಡಲಾಗಿದೆ. ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು, ಅವಳಿ ನಗರದ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ, ಸಮೀಕ್ಷಾ ಕಾರ್ಯವನ್ನು ಪರಿಶೀಲಿಸಿದರು.

ಅವರು ಸೋಮವಾರ ಮಧ್ಯಾಹ್ನ ಧಾರವಾಡ ನಗರದ ಪೆಂಡಾರಗಲ್ಲಿ, ತಡಕೋಡ ಓಣಿ ಪ್ರದೇಶಗಳಲ್ಲಿ ಸಂಚರಿಸಿ, ಸಮೀಕ್ಷಕರು ಮಾಡುತ್ತಿರುವ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಪರಿಶೀಲಿಸಿ, ಸಮೀಕ್ಷೆದಾರರಿಂದ ಮಾಹಿತಿ ಪಡೆದು, ಮಾರ್ಗದರ್ಶನ ಮಾಡಿದರು.

ಪೆಂಡಾರಗಲ್ಲಿಯ ರೇಣುಕಾ ಬೋಮ್ಮಣ್ಣವರ ಮನೆಯ ಕುಟುಂಬ ಸಮೀಕ್ಷೆಯಲ್ಲಿ ಭಾಗವಹಿಸಿದ್ದ ಜಿಲ್ಲಾಧಿಕಾರಿಗಳು, ಕುಟುಂಬದ ಮುಖ್ಯಸ್ಥೆ ರೇಣುಕಾ ಅವರಿಂದ ಸಮೀಕ್ಷಾ ಪ್ರಶ್ನಾವಳಿ ಕುರಿತು ಮಾಹಿತಿ ಪಡೆದು, ಸಮೀಕ್ಷೆಯ ಉಪಯುಕ್ತತೆಯನ್ನು ವಿವರಿಸಿದರು. ಮಗಳು ಸೌಭಾಗ್ಯ ಇದ್ದರು.

ಸಮೀಕ್ಷಾ ಪ್ರದೇಶಗಳ ಭೇಟಿ ಸಮಯದಲ್ಲಿ ಅಧಿಕಾರಿಗಳನ್ನು ಉದ್ದೇಶಿಸಿ, ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಸಮೀಕ್ಷಕರಿಗೆ ತರಬೇತಿ ನೀಡಲಾಗಿದೆ. ಸಮೀಕ್ಷೆ ನಿಯೋಜನೆ ಆಗಿರುವ ಸಿಬ್ಬಂದಿಗಳು ತಮಗೆ ಹಂಚಿಕೆ ಆಗಿರುವ ಮನೆ, ಕುಟುಂಬಗಳ ಮಾಹಿತಿಯನ್ನು ನಿಯಮಾನುಸಾರ ಭರ್ತಿ ಮಾಡಬೇಕು. ತಾಂತ್ರಿಕ ಸಮಸ್ಯೆಗಳು ಉಂಟಾದಲ್ಲಿ ಜಿಲ್ಲಾ ತಾಂತ್ರಿಕ ಸಮಾಲೋಚಕರಿಗೆ ಅಥವಾ ಸಹಾಯವಾಣಿಗೆ ಕರೆ ಮಾಡಿ, ಪರಿಹರಿಸಿಕೊಳ್ಳಬೇಕು ಎಂದು ತಿಳಿಸಿದರು.




ಸಮೀಕ್ಷಕರು ತಮಗೆ ಗುರುತಿಸಿರುವ ಎಲ್ಲ ಮನೆ ಹಾಗೂ ಕುಟುಂಬಗಳ ಸಮೀಕ್ಷೆಯನ್ನು ಅಕ್ಟೋಬರ್ 7 ರೊಳಗೆ ಪೂರ್ಣಗೊಳಿಸಬೇಕು. ಪ್ರತಿದಿನ ಸಂಜೆ ಅಂದಿನ ಸಮೀಕ್ಷೆ ಕಾರ್ಯದ ಪ್ರಗತಿಯನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಲ್ಲಿಸಬೇಕು ಎಂದು ಹೇಳಿದರು. ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯನ್ನು ಧಾರವಾಡ ಜಿಲ್ಲೆಯಲ್ಲಿ ಪ್ರಾರಂಭವಾಗಿದೆ. ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7 ರವರೆಗೆ ಒಟ್ಟು 16 ದಿನಗಳ ಕಾಲ ಸಮೀಕ್ಷೆ ಮಾಡಲು ನಿರ್ದೇಶನ ನೀಡಲಾಗಿದೆ ಎಂದು ಅವರು ತಿಳಿಸಿದರು. ಧಾರವಾಡ ಜಿಲ್ಲೆಯಲ್ಲಿ ಸುಮಾರು 5 ಲಕ್ಷ 46 ಸಾವಿರ ಕುಟುಂಬಗಳನ್ನು ಗುರುತಿಸಲಾಗಿದೆ. ಇದನ್ನು ಹೆಸ್ಕಾಂ ಇಲಾಖೆ ಮುಖಾಂತರ ಪ್ರತಿಯೊಂದು ಮನೆಗೂ ಪ್ರತ್ಯೇಕವಾಗಿ ಐಡಿ ಕೊಡುವ ಮುಖಾಂತರ ಅದನ್ನು ಗುರುತಿಸಿ, 150 ರಿಂದ 200 ಮನೆಗಳನ್ನು ಒಂದು ಗುಂಪಾಗಿ ವಿಂಗಡಿಸಲಾಗಿದೆ ಎಂದರು. ಜಿಲ್ಲೆಯಲ್ಲಿ 4,880 ಸಮೀಕ್ಷಕರು ಮತ್ತು ಮೇಲ್ವಿಚಾರಣೆ ಮಾಡುವುದಕ್ಕೆ ಮೇಲ್ವಿಚಾರಕರನ್ನು ನೇಮಕ ಮಾಡಲಾಗಿದೆ. ಪ್ರತಿ ಹಂತದಲ್ಲೂ ರಾಜ್ಯ, ಜಿಲ್ಲಾ, ಒಂದೊಂದು ಬ್ಲಾಕ್ ಮಟ್ಟದಲ್ಲಿ ತರಬೇತಿಯನ್ನು ನೀಡಲು ಮಾಸ್ಟರ್ ಟ್ರೈನರ್‌ಗಳನ್ನು ಆಯ್ಕೆ ಮಾಡಿ ತರಬೇತಿ ನೀಡಲಾಗಿದೆ. ಸಂಬಂಧಪಟ್ಟ ಶಾಸಕರ ಗಮನಕ್ಕೆ ತೆಗೆದುಕೊಂಡು ಬಂದು, ಇಂದು ಚಾಲನೆ ನೀಡಿದೆ. ಎಲ್ಲಾ ಸಾರ್ವಜನಿಕರು ಕೈ ಜೋಡಿಸಿ ಸಮೀಕ್ಷೆಯನ್ನು ಯಶಸ್ವಿ ಮಾಡಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಜಿಲ್ಲಾ ಅಧಿಕಾರಿ ಭಾನುಮತಿ, ಕ್ಷೇತ್ರ ಶಿಕ್ಷಣಾಧಿಕಾರಿ ಅಶೋಕ ಸಿಂದಗಿ, ತಾಲೂಕು ವಿಸ್ತರಣಾ ಅಧಿಕಾರಿ ಸಂಜೀವ ಕೆಸರಿ, ಬ್ಲಾಕ್ ಮೇಲ್ವಿಚಾರಕರು, ನಿಲಯಪಾಲಕರು ಸಮೀಕ್ಷಕರು ಉಪಸ್ಥಿತರಿದ್ದರು.

# ವಿದ್ಯಾರ್ಥಿನಿಯರ ಪಾಲಕರ ಸಭೆ

**ಹಾವೇರಿ:** ಹಾವೇರಿ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ 2025 26 ನೇ ಸಾಲಿಗೆ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಪಾಲಕರ ಹಾಗೂ ಪೋಷಕರ ಸಭೆ ಹಾವೇರಿ ನಗರದ ಡಾ. ಬಿಆರ್ ಅಂಬೇಡ್ಕರ್ ಭವನದಲ್ಲಿ ಇತ್ತೀಚೆಗೆ ಜರುಗಿತು. ಉಪನ್ಯಾಸಕ ಡಾ ದಯಾನಂದ್ ಸುತ್ತಕೋಟಿ ಹಾಗೂ ಮುಖ್ಯೋಪಾಧ್ಯಾಯ ಹೊನ್ನಪ್ಪ ತಳವಾರ್ ಅವರು ಮಾತನಾಡಿ, ಮಕ್ಕಳಿಗೆ ತಂದೆ ತಾಯಿಗಳು ಸೂಕ್ತ ಬುದ್ಧಿ ಮಾತನ್ನು ಹೇಳುವುದರ ಮೂಲಕ ಅವರು ಶಿಕ್ಷಣದ ಕಡೆಗೆ ಹೆಚ್ಚಿನ ಒಲವನ್ನು ತೋರುವಂತೆ ಮಾಡಬೇಕೆಂದರು. ವಿದ್ಯಾರ್ಥಿ ನಿಲಯಗಳ ನಿಲಯ ಪಾಲಕರ ಜೊತೆಗೆ ಸಮನ್ವಯತೆಯಿಂದ ಸ್ಪಂದಿಸಬೇಕು ಎಂದರು. ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಆಂಜನೇಯ ಹುಲ್ಲಾಳ ಮಾತನಾಡಿ, ತಾಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ನಾಲ್ಕು ವಿದ್ಯಾರ್ಥಿ ನಿಲಯಗಳಲ್ಲಿ ಪ್ರಸ್ತುತ ವರ್ಷ 877 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಈ ಎಲ್ಲಾ ಮಕ್ಕಳನ್ನು ಸುರಕ್ಷಿತವಾಗಿ ರಕ್ಷಿಸುವುದು ನಮ್ಮ ಆದ್ಯ ಕರ್ತವ್ಯವಾಗಿದೆ ಎಂದರು.

ವಿದ್ಯಾರ್ಥಿ ನಿಲಯಗಳಲ್ಲಿರುವ ಮಕ್ಕಳ ಪಾಲಕರು ಹಾಗೂ ಪೋಷಕರು ಇಲಾಖೆಯ ಜೊತೆ ಕೈಜೋಡಿಸುವುದರ ಮೂಲಕ ಅವರ ರಕ್ಷಣೆ ಹಾಗೂ ಅವರ ಶೈಕ್ಷಣಿಕ ಪ್ರಗತಿಗೆ ಕಾರಣೀಭೂತರಾಗಬೇಕು. ಯಾವುದೇ ಮಕ್ಕಳನ್ನು ಬಾಲ್ಯ ವಿವಾಹ ಮಾಡದೆ ಹಾಗೂ ಬಾಲಕಾರ್ಮಿಕರನ್ನಾಗಿ ಮಾಡದೆ ಅವರಿಗೆ ಉತ್ತಮ ವಿದ್ಯಾಭ್ಯಾಸ ಕೊಡಿಸುವ ಜೊತೆಗೆ ಒಳ್ಳೆಯ ಸಂಸ್ಕಾರಗಳನ್ನು ನೀಡುವುದರ ಮೂಲಕ ಉತ್ತಮ ಪ್ರಜೆಗಳನ್ನಾಗಿ ಮಾಡಬೇಕು ಎಂದರು. ವಸತಿ ನಿಲಯಗಳ ನಿಲಯ ಪಾಲಕರುಗಳಾದ ಭಾಗ್ಯಜ್ಯೋತಿ ಹುಲ್ಲಾಳ, ಅಕ್ಕಮಹಾದೇವಿ ದೊಡ್ಡ ಗೌಡರ, ಗಂಗಮ್ಮ ಕಾರಿಕಂಟಿ ಮತ್ತು ನಂದಕ್ಕ ಹೂಗಾರ ಹಾಗೂ ಇಲಾಖೆಯ ಸಿಬ್ಬಂದಿಗಳು ಭಾಗವಹಿಸಿದ್ದರು.

# ಸಾಲವನ್ನು ಸಕಾಲದಲ್ಲಿ ತೀರಿಸಿ ಸಂಘದ ಏಳ್ಗೆಗೆ ಸಹಕರಿಸಿ



**ಮುದ್ದೇಬಿಹಾಳ:** ಪರಸ್ಪರ ಸಹಕಾರ ಹಾಗೂ ಹಣಕಾಸಿನ ಅವಶ್ಯಕತೆ ಈಡೇರಿಸುವ ಮತ್ತು ವಿವಿಧ ರೀತಿಯ ಸಾಲ ಸೌಲಭ್ಯಗಳ ಮೂಲಕ ನಮ್ಮ ಸಂಘದ ಸದಸ್ಯರು ಸ್ವಾವಲಂಬಿ ಜೀವನ ನಡೆಸಲು ಪ್ರೇರಣೆ ನೀಡುವುದೆ ಸಂಘದ ಮುಖ್ಯ ಉದ್ದೇಶವಾಗಿದೆ ಎಂದು ಹಿರೇಮುರಾಳದ ಶ್ರೀ ಚಂದ್ರಾಮೇಶ್ವರ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಆದೇಶ ನಾಗರತ್ತಿ ಹೇಳಿದರು.

ತಾಲ್ಲೂಕಿನ ಹಿರೇಮುರಾಳ ಗ್ರಾಮದ ನೀಲಕಂಠೇಶ್ವರ ಸಭಾ ಭವನದಲ್ಲಿ ಸಂಘದ 14 ನೇ ವಾರ್ಷಿಕ ಸರ್ವ ಸಾಧಾರಣ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. 2012 ರಲ್ಲಿ 730 ಶೇರುದಾರರೂಂದಿಗೆ 11 ಲಕ್ಷ ದುಡಿಯುವ ಬಂಡವಾಳದೂಂದಿಗೆ ಆರಂಭಗೂಂಡ ಸಂಘ ಇದೀಗ 1039 ಶೇರುದಾರರನ್ನು ಹೊಂದಿ ನಾಲ್ಕು ಕೋಟಿ ದುಡಿಯುವ ಬಂಡವಾಳ ಹೊಂದಿದೆ ಪ್ರಸ್ತುತ ವರ್ಷ 1 ಲಕ್ಷ _70 ಸಾವಿರ ನಿವ್ವಳ ಲಾಭವನ್ನು ಹೊಂದಿದೆ ಎಂದರು.

ಜೆಡಿಎಸ್ ಪಕ್ಷದ ಹಿರಿಯ ಮುಖಂಡ, ರೈತ ನಾಯಕ ಬಿ .ಬಿ ಪಾಟೀಲ ಹಾಗೂ ಶಿಕ್ಷಕ ಎಂ ಬಿ ಗುಡಗುಂಟಿ ಮಾತನಾಡಿ ಸೌಹಾರ್ದ ಪತ್ತಿನ ಸಂಘ ನಡೆದು ಬಂದ ದಾರಿ ಸಹಕಾರಿ ಪತ್ತಿನ ಸಂಘದಿಂದ ರೈತರಿಗೆ ಸಂಘದ ಸದಸ್ಯರಿಗೆ ಆಗಿರುವ ನೆರವಿನ ಬಗ್ಗೆ ವಿವರಿಸಿ ಪಡೆದುಕೊಂಡ ಸಾಲವನ್ನು ಸಕಾಲದಲ್ಲಿ ತೀರಿಸಿ ಸಂಘದ ಏಳ್ಗೆಗೆ ಸಹಕರಿಸಬೇಕೆಂದರು. ಈ ಸಂದರ್ಭದಲ್ಲಿ ಸಭೆಯಲ್ಲಿ ಸಂಘದ ಉಪಾಧ್ಯಕ್ಷ ಶಾಂತಗೌಡ ಪಾಟೀಲ್, ನಿರ್ದೇಶಕರಾದ ಸಾಬಣ್ಣ ಕಟ್ಟಿಮನಿ,ನಿಂಗಣ್ಣ ಜಾಲವಾದಗಿ,ಮಾರುತಿ ಪವಾರ,ಮಹಿಬೂಬ ಮುಲ್ಲಾ, ನೀಲಕಂಠಪ್ಪ ಕೋಳೂರ, ಶ್ರೀಮತಿ ಶಾರಾದ ಪ್ಯಾಟಿ,ಲಕ್ಷ್ಮೀ ಚಲವಾದಿ ಶಾಂತಮ್ಮ ಭೋವಿ ಹಾಗೂ ಗಣ್ಯರಾದ ಸುನಿಲ್ ಕುಮಾರ್ ಜಾಗಿರದಾರ ಸೇರಿದಂತೆ ಸಂಘದ ಸಿಬ್ಬಂದಿಗಳು ಸದಸ್ಯರು ಭಾಗವಹಿಸಿದ್ದರು.

# ಬಾಲ್ಯವಿವಾಹದಿಂದ ಮಕ್ಕಳ ಬೆಳವಣಿಗೆಗೆ ಅಪಾಯ

**ಕೊಪ್ಪಳ:** ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ಮದುವೆ ಮಾಡುವುದರಿಂದ ಅವರ ದೈಹಿಕ, ಮಾನಸಿಕ ಬೆಳವಣಿಗೆ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ. ಆದ್ದರಿಂದ ಬಾಲ್ಯ ವಿವಾಹ ಮಾಡಬಾರದು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ದರಗದ ಅವರು ಹೇಳಿದರು.

ಸೋಮವಾರದಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಇರಕಲ್ಲಗಡಾ ಗ್ರಾಮ ಪಂಚಾಯತ್ ಇವರುಗಳ ಸಂಯುಕ್ತ ಆಶ್ರಯದಲ್ಲಿ ಇರಕಲ್ಲಗಡಾ ಗ್ರಾಮದಲ್ಲಿ ಜಾಥಾ ಮತ್ತು ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ, ಇರಕಲ್ಲಗಡಾದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ವಿವಾಹವನ್ನು ಮಾಡುವುದರಿಂದ ಮಕ್ಕಳು ದೈಹಿಕ, ಮಾನಸಿಕ, ಶಾರೀರಿಕ ಬೆಳವಣಿಗೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರುವುದು. ಅಲ್ಲದೇ ಹುಟ್ಟುವ ಮಗುವು ವಿಕಲಚೇತನ ಅಪೌಷ್ಠಿಕ ಅಥವಾ ಶಿಶು ಮರಣ ಸಾಧ್ಯತೆ ಅಧಿಕವಾಗಿರುತ್ತದೆ. ತಾಯಿ ಅಥವಾ ಮಗು ಇಬ್ಬರೂ ಸಾವನ್ನಪ್ಪಬಹುದು. ಈ ಎಲ್ಲಾ ಅಂಶಗಳನ್ನು ಗಮನಿಸಿ ಸರ್ಕಾರವು ಬಾಲ್ಯವಿವಾಹ ನಿಷೇಧ ಕಾಯ್ದೆ –2006 ರನ್ನು ಜಾರಿಗೆ ತಂದಿದೆ. ರಾಜ್ಯದಲ್ಲಿ ಬಾಲ್ಯವಿವಾಹ ಪ್ರಮಾಣಗಳು ಅಧಿಕವಾಗಿರುವುದನ್ನು ಗಮನಿಸಿ ಕರ್ನಾಟಕ ಸರ್ಕಾರವು ಮತ್ತಷ್ಟು ಪರಿಣಾಮಕಾರಿಯಾಗಿ ಈ ಕಾಯ್ದೆಯನ್ನು ಅನುಷ್ಠಾನಗೊಳಿಸಲು–2016ರಲ್ಲಿ ತಿದ್ದುಪಡಿಯನ್ನು ತಂದಿದೆ. ಅದರನ್ವಯ ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ಮದುವೆಯನ್ನು ಮಾಡಿದವರಿಗೆ, ಭಾಗವಹಿಸಿದವರಿಗೆ



ಮತ್ತು ಪ್ರೋತ್ಸಾಹಿಸಿದವರಿಗೆ ಕನಿಷ್ಠ ಒಂದು ವರ್ಷದಿಂದ ಎರಡು ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ಒಂದು ಲಕ್ಷ ರೂಪಾಯಿ ದಂಡವನ್ನು ವಿಧಿಸಬಹುದಾಗಿದೆ ಎಂದರು.

ದಿನಾಂಕ:03.03.2018ರಿಂದ ಎಲ್ಲಾ ಬಾಲ್ಯ ವಿವಾಹಗಳು ಅಸಿಂಧು ವಿವಾಹಗಳಾಗಿರುತ್ತವೆ. ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದನ್ವಯ ಅಪ್ರಾಪ್ತ ವಯಸ್ಸಿನ ಪತ್ನಿಯೊಂದಿಗಿನ ಲೈಂಗಿಕ ಸಂಪರ್ಕವೂ ಸಹ ಲೈಂಗಿಕ ಅಪರಾಧಗಳೆಂದು ಪರಿಗಣಿಸಲಾಗುತ್ತದೆ. ಜಿಲ್ಲೆಯಲ್ಲಿ ಈ ರೀತಿಯ ಹಲವಾರು ಪ್ರಕರಣಗಳು ದಾಖಲಾಗಿರುವುದನ್ನು ಗಮನಿಸಲಾಗಿದೆ. ಈ ಎಲ್ಲಾ ಸಾಮಾಜಿಕ ಪಿಡುಗುಗಳಿಂದ ಮಕ್ಕಳನ್ನು ರಕ್ಷಿಸಲು ಹಾಗೂ ಮಕ್ಕಳಿಗೆ ಸುರಕ್ಷಿತವಾದ ವಾತಾವರಣವನ್ನು ಕಲ್ಪಿಸಲು ಈ ಕಾಯ್ದೆಯ ಕುರಿತು ಮತ್ತಷ್ಟು ವ್ಯಾಪಕವಾದ ಜಾಗೃತಿಯನ್ನು ಮೂಡಿಸುವ ಅಗತ್ಯವಿದ್ದು, ಬಾಲ್ಯವಿವಾಹ ಪದ್ಧತಿಯನ್ನು ಸಂಪೂರ್ಣ ತೊಲಗಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ ಅವರು, ಜಿಲ್ಲೆಯಲ್ಲಿ ಅಪ್ರಾಪ್ತ ವಯಸ್ಸಿನ ಮಕ್ಕಳು ಗರ್ಭಿಣಿಯರಾಗಿರುವ ಪ್ರಕರಣಗಳು ವರದಿಯಾಗಿವೆ. ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ–2012 ತಿದ್ದುಪಡಿ 2019 ರನ್ವಯ ಮಕ್ಕಳ ಮೇಲಿನ ಲೈಂಗಿಕ ಹಲ್ಲೆ, ದೌರ್ಜನ್ಯಗಳಿಗೆ ಕನಿಷ್ಠ 20 ವರ್ಷಗಳಿಂದ ಜೀವಾವಧಿ ಜೈಲು ಶಿಕ್ಷೆಯನ್ನು ವಿಧಿಸಬಹುದಾಗಿದೆ. ಈ ರೀತಿಯಲ್ಲಿ ಶಿಕ್ಷೆ ವಿಧಿಸಿದ ಪ್ರಕರಣಗಳು ಸಹ ಜಿಲ್ಲೆಯಲ್ಲಿ ವರದಿಯಾಗಿವೆ. ಆದ್ದರಿಂದ ಅಪ್ರಾಪ್ತ ವಯಸ್ಸಿನಲ್ಲಿ ಮದುವೆಯನ್ನು ಮಾಡಬೇಡಿ ಎಂದು ತಿಳಿಸುತ್ತಾ, ಮಕ್ಕಳಿಗೆ ಈ ಕಾಯ್ದೆಗಳ ಕುರಿತು ವ್ಯಾಪಕವಾದ ಜಾಗೃತಿಯನ್ನು ಮೂಡಿಸಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶಿವಮ್ಮ ಶೇಖರಪ್ಪ ನಾಯಕ್, ಗ್ರಾಮ ಪಂಚಾಯತ್ ಸದಸ್ಯರಾದ ರಾಮಣ್ಣ ಗೋಸಲ್‌ದಡ್ಡಿ, ಮರಿಯಪ್ಪ ಪಿಣ್ಣಿ, ವೀರಭದ್ರಯ್ಯ ಕಲ್ಮಠ, ವೀರಬಸಪ್ಪ ಪಟ್ಟಣ ಶೆಟ್ಟರ್, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯರಾದ ಎಚ್.ಎಮ್. ಗುಡಿಹಿಂದಿನ, ಸರಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಡಾ.ನಾಗಭೂಷಣ ಲತಾ, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಲಕ್ಷ್ಮೀ, ಪ್ರಭಾರಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪೂರ್ಣೇಂದ್ರಯ್ಯ ಸ್ವಾಮಿ ಬೋಸೂರುಮಠ ಸೇರಿದಂತೆ, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಪ್ರಾಥಮಿಕ ಆರೋಗ್ಯ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು. ಶರಣಪ್ಪ ಸಿಂಗನಾಳ ಸ್ವಾಗತಿಸಿ, ನಿರೂಪಿಸಿದರು.

# ಅರ್ಜಿ ಆಹ್ವಾನ

**ಹಾವೇರಿ:** ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವತಿಯಿಂದ ವಿವಿಧ ಯೋಜನೆಗಳಡಿ ನೇರಸಾಲ ಹಾಗೂ ಸಹಾಯಧನ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಹಸು ಸಾಕಾಣಿಕೆ, ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ, ಟ್ಯಾಕ್ಸಿ ಇತ್ಯಾದಿ ವ್ಯಾಪಾರ ವಹಿವಾಟುಗಳನ್ನು ಕೈಗೊಳ್ಳಲು ಕನಿಷ್ಠ ರೂ. 1 ಲಕ್ಷ ಹಾಗೂ ಗರಿಷ್ಠ ರೂ. 2 ಲಕ್ಷಗಳ ಆರ್ಥಿಕ ನೆರವು ಒದಗಿಸಲಾಗುವುದು. ಆಸಕ್ತ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿ ಸಲ್ಲಿಸಿ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ 8762249230(ಬೆಳಿಗ್ಗೆ:10.00 ರಿಂದ ಸಂಜೆ:5.30ರವರೆಗೆ ಸಂಪರ್ಕಿಸಬಹುದಾಗಿದೆ). ವೆಬ್ ಸೈಟ್ ಇಭಜಭ. ಇಚಿಡಿಟಿಚಿಣಚಿಞಚಿ.ರಠತ.ಟಿ ನಲ್ಲಿ ಅರ್ಜಿಸಲ್ಲಿಸಬಹುದಾಗಿದೆ. (https://www.instagram.com/md.ksbdb2021/ https://www.facebook.com/profile.php?id=61575786901624 https://x.com/Ksbdb2021) ನೋಡಬಹುದು. ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ತಿಳಿಸಿದ್ದಾರೆ.

# ಸಮೀಕ್ಷೆದಾರರಿಗೆ 2ನೇ ಹಂತದ ತರಬೇತಿ

**ಹಾವೇರಿ:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ನಿರ್ದೇಶನದಂತೆ ಸಾಮಾಜಿಕ, ಶೈಕ್ಷಣಿಕ, ಮತ್ತು ಆರ್ಥಿಕ ಪರಿಸ್ಥಿತಿಯನ್ನು ಅಧ್ಯಯನ ಮಾಡಲು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ (ಜಾತಿ ಗಣತಿ)2025ರ ಕುರಿತು ಎರಡನೇ ತರಬೇತಿಯನ್ನು ಹಾವೇರಿ ನಗರದ ಶ್ರೀ ಹುಕ್ಕೇರಿ ಮಠ ಪ್ರೌಢಶಾಲೆ 471 ಗಣತಿದಾರರಿಗೆ ಹಾಗೂ ಗುತ್ತಲ ಆರ್.ಕೆ. ಆಂಗ್ಲ ಮಾಧ್ಯಮ ಶಾಲೆಯಲ್ಲಿ 271 ಗಣತಿದಾರರಿಗೆ ನೀಡಲಾಯಿತು.

ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಚ್. ಪಾಟೀಲ ಅವರು ಮಾತನಾಡಿ, ಈ ಸಮೀಕ್ಷೆಯ ಮುಖ್ಯ ಉದ್ದೇಶ ಹಿಂದುಳಿದ ವರ್ಗಗಳ ಬಡತನ, ನಿರುದ್ಯೋಗ, ಅನಕ್ಷರತೆಯಂತಹ ಸಮಸ್ಯೆಗಳನ್ನು ಗುರುತಿಸಿ, ವಿಶೇಷ ಯೋಜನೆಗಳನ್ನು ರೂಪಿಸುವುದಾಗಿದೆ. ಆದ್ದರಿಂದ ಎಲ್ಲಾ ಗಣತಿದಾರರು ಈ ದಿನದ ತರಬೇತಿಯಲ್ಲಿ ಸರಿಯಾದ ಮಾಹಿತಿಯನ್ನ ಪಡೆದು ಯಾವುದೇ ಸಮಸ್ಯೆಗಳಿದ್ದರೆ ಸಂಪನ್ಮೂಲ ವ್ಯಕ್ತಿಗಳಿಂದ ತಿಳಿದುಕೊಂಡು ಸೆ.22 ಅ.7ರವರೆಗೆ ರವರೆಗೆ ನಡೆಯುವ ಸಮೀಕ್ಷೆಯಲ್ಲಿ ನಿಖರವಾದ ಅಂಕಿ ಅಂಶಗಳನ್ನು ದಾಖಲಿಸಬೇಕು ಎಂದು ತರಬೇತುದಾರರಿಗೆ ಕರೆ ನೀಡಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿ ಡಾ. ಸುಬ್ರನಾಯಕ್ ಅವರು ಮಾತನಾಡಿ, ರಾಜ್ಯದಲ್ಲಿಯೇ ನಿಖರವಾದ ಮಾಹಿತಿ ಸಲ್ಲಿಸಿದ ಕೀರ್ತಿ ನಮ್ಮದಾಗಿಸಿಕೊಳ್ಳೋಣ ಹಾಗೂ ತಮಗೆ ಗಣತಿ ಸಮಯದಲ್ಲಿ ಏನಾದರೂ ಸಮಸ್ಯೆಗಳ ಉದ್ಭವಿಸಿದರೆ ಸಂಬಂಧಿಸಿದ ಸಂಪನ್ಮೂಲ ವ್ಯಕ್ತಿಗಳಿಂದ ಮಾಹಿತಿ ಪಡೆದುಕೊಂಡು ನಿಖರವಾದ ಮಾಹಿತಿಯನ್ನು ದಾಖಲಿಸಬೇಕು ಎಂದರು.

ತಹಶೀಲ್ದಾರ ಶರಣಮ್ಮ ಕಾರಿ ಮಾತನಾಡಿ, ಸಮೀಕ್ಷೆ ಯಾವುದೇ ಲೋಪ ದೋಷವಿಲ್ಲದೆ ನಡೆಯಲಿ ಎಂದು ಶುಭ ಹಾರೈಸಿದರು.

# ಸಾಧಕರಿಗೆ ಗೌರವ ನಮನ: ಸತ್ಕಾರ ಸಮಾರಂಭ



**ಜಮಖಂಡಿ:** ತಾಲೂಕಿನ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಸಾಧಕರಿಗೆ ಗೌರವ ನಮನ" ಹಾಗೂ "ಓಝೋನ್ ದಿನ"ದ ಅಂಗವಾಗಿ ವಿಶೇಷ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಆಯೋಜಿಸಿದರು.

ಸಮಾಜದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿರುವ ಸಾಧಕರನ್ನು ಗೌರವಿಸುವ ಉದ್ದೇಶವನ್ನು ಹೊಂದಿತ್ತು. ಹಿರಿಯ ಸಮಾಜಸೇವಕ ಶ್ರೀಯುತ ರಂಜಿತಮಲ ಗಾಂಧಿ ಅವರನ್ನು "ವಿಶೇಷ ಸಾಧಕ"ರಾಗಿ ಗುರುತಿಸಿ ಸನ್ಮಾನಿಸಿದರು ಅವರು ಗೋ ಸೇವೆ, ವಿದ್ಯಾರ್ಥಿಗಳಿಗೆ ಫೀ ವಿತರಣೆ ಸೇವೆ, ಧಾರ್ಮಿಕ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಸಲ್ಲಿಸಿರುವ ಅಮೂಲ್ಯ ಸೇವೆಗಳನ್ನು ಕಾಲೇಜು ಪರವಾಗಿ ಪ್ರಶಂಸಿದರು

ಈ ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರ, ಬಿರಾದರ್ , ಉಪನ್ಯಾಸಕ ಗವಿಮಠ, ರಾಮದುರ್ಗ್, ಸಜ್ಜನ, ಕಾರ್ಯಕ್ರಮದ ನಿರೂಪಣೆಯನು ರಾಜು ಗೋವಲಿ ನಡೆಸಿದ್ದರು, ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಿ ಸಾಧಕರಿಗೆ ಗೌರವ ಸಲ್ಲಿಸಿದರು.

# ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

**ಕೊಪ್ಪಳ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2025–26 ನೇ ಸಾಲಿಗೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗಾಗಿ ವೃತ್ತಿಪರ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ನೀಡಲಾಗುತ್ತಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳು ಅಲ್ಪಸಂಖ್ಯಾತರ ನಿರ್ದೇಶನಾಲಯದ ಜಾಲತಾಣ https://dom.karnataka.gov.in ದಲ್ಲಿ ಲಭ್ಯವಿರುವ ಅರ್ಜಿ ನಮೂನೆಯನ್ನು ಪಡೆದು ಮಾರ್ಗಸೂಚಿಗಳನ್ವಯ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಅಕ್ಟೋಬರ್ 3 ಕೊನೆಯ ದಿನವಾಗಿದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕರ್ನಾಟಕ ರಾಜ್ಯಕ್ಕೆ ಸೇರಿದವರಾಗಿರಬೇಕು. ವಿದ್ಯಾರ್ಥಿಗಳು ಅಲ್ಪಸಂಖ್ಯಾತ ಸಮುದಾಯ ಮುಸ್ಲಿಂ, ಕ್ರಿಶ್ಚಿಯನ್, ಸಿಖ್, ಜೈನ್, ಬೌದ್ಧ ಮತ್ತು ಪಾರ್ಸಿ ಜನಾಂಗಕ್ಕೆ ಸೇರಿದವರಾಗಿರಬೇಕು. ವಿದ್ಯಾರ್ಥಿಯ ಗರಿಷ್ಠ ವಯೋಮಿತಿ ಕನಿಷ್ಠ 18 ಹಾಗೂ ಗರಿಷ್ಟ 35 ವರ್ಷ ನಿಗದಿಪಡಿಸಲಾಗಿದೆ (ಅರ್ಜಿ ಸಲ್ಲಿಸುವ ಅಂತಿಮ ದಿನಾಂಕದೊಳಗೆ). ಕೇಂದ್ರ ಮತ್ತು ರಾಜ್ಯ ಸರ್ಕಾರದ ನೌಕರಿಯಲ್ಲಿರುವ ಅಭ್ಯರ್ಥಿಗಳು ಅರ್ಹರಿರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಕೊಪ್ಪಳ ಜಿಲ್ಲಾ ಅಲ್ಪಸಂಖ್ಯಾತರ ಕಛೇರಿ ಹಾಗೂ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಕೊಪ್ಪಳ: 8088894549, ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಗಂಗಾವತಿ: 9986244408, ಕುಷ್ಟಗಿ: 8880482486, ಯಲಬುರ್ಗಾ: 8095191406 ಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿ ರವಿ ಪೂಜಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಪ್ಪಳ ಪ್ರಾದೇಶಿಕ ಕೇಂದ್ರ: ಅರ್ಜಿ ಆಹ್ವಾನ

**ಕೊಪ್ಪಳ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕೊಪ್ಪಳ ಪ್ರಾದೇಶಿಕ ಕೇಂದ್ರದಲ್ಲಿ 2025–26ನೇ ಶೈಕ್ಷಣಿಕ ಸಾಲಿನ ಜುಲೈ ಆವೃತ್ತಿಯ ಪ್ರಥಮ ಸ್ನಾತಕ ಮತ್ತು ಸ್ನಾತಕೋತ್ತರ ಶಿಕ್ಷಣ ಕ್ರಮಗಳಿಗೆ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸಾಂಪ್ರದಾಯಿಕವಾಗಿ ಕಾಲೇಜಿಗೆ ತೆರಳದೇ ಮನೆಯಲ್ಲೇ ಕುಳಿತುಕೊಂಡು, ಯಾವುದೇ ಸರ್ಕಾರಿ ಅರೆಸರ್ಕಾರಿ ಇಲಾಖೆಗಳಲ್ಲಿ ಕಾರ್ಯವನ್ನು ನಿರ್ವಹಿಸುತ್ತಾ ದೂರಶಿಕ್ಷಣದ ವ್ಯವಸ್ಥೆಯಡಿ ಶಿಕ್ಷಣ ಪಡೆಯಲು ಈ ಭಾಗದ ಆಸಕ್ತ ವಿದ್ಯಾರ್ಥಿ ಮತ್ತು ಪೋಷಕರಿಗೆ ಅನುಕೂಲವಾಗುವ ದೃಷ್ಟಿಯಿಂದ ಕರ್ನಾಟಕ ರಾಜ್ಯಮುಕ್ತ ವಿಶ್ವವಿದ್ಯಾನಿಲಯವು ತನ್ನದೇ ಆದ ಪ್ರಾದೇಶಿಕ ಕೇಂದ್ರವನ್ನು ನೂತನವಾಗಿ ಕೊಪ್ಪಳದಲ್ಲಿ ಪ್ರಾರಂಭಿಸಿರುತ್ತದೆ.

ಕಛೇರಿಯು ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಕಾರ್ಯಾಲಯದ ಕಟ್ಟಡದ ಮೊದಲನೇ ಮಹಡಿ, ಗೋವನಕೊಪ್ಪ ಆಸ್ಪತ್ರೆ ಎದುರಿಗೆ, ಹೊಸಪೇಟೆ ರಸ್ತೆ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಕರ್ನಾಟಕ ರಾಜ್ಯದಲ್ಲಿ ದೂರಶಿಕ್ಷಣದ ಮೂಲಕ ಶಿಕ್ಷಣವನ್ನು ನೀಡುತ್ತಿರುವ ಏಕೈಕ ವಿಶ್ವವಿದ್ಯಾನಿಲಯವಾಗಿದೆ. ಈಗಾಗಲೇ 2024–25ನೇ ಶೈಕ್ಷಣಿಕ ಸಾಲಿನ ಜನವರಿ ಆವೃತ್ತಿಯ ಪ್ರವೇಶಾತಿಯು ಪ್ರಾರಂಭವಾಗಿರುತ್ತದೆ. ಪ್ರಥಮ ಬಿ.ಎ/ಬಿ.ಕಾಂ/ಬಿ.ಎಸ್ಸಿ, ಬಿ.ಲಿಬ್ ಮತ್ತು ಐ.ಎಸ್‌ಸಿ, ಬಿ.ಸಿ.ಎ, ಬಿ.ಬಿ.ಎ ಮತ್ತು ಬಿ.ಎಸ್. ಡಬ್ಲ್ಯೂ ಹಾಗೂ ವಿವಿಧ ಎಂ.ಎ(ಕನ್ನಡ, ಇಂಗ್ಲೀಷ್, ಹಿಂದಿ, ಸಂಸ್ಕೃತ, ತೆಲುಗು, ಉರ್ದು, ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಸಾರ್ವಜನಿಕ ಆಡಳಿತ, ಸಮಾಜಶಾಸ್ತ್ರ, ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ಹಾಗೂ ಶಿಕ್ಷಣಶಾಸ್ತ್ರ), ಎಂ.ಎ– ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ, ಎಂ.ಕಾಂ, ವಿವಿಧ ಎಂ.ಎಸ್‌ಸಿ(ರಸಾಯನಶಾಸ್ತ್ರ, ಜೀವಶಾಸ್ತ್ರ, ಮಾನವಶಾಸ್ತ್ರ, ಸಸ್ಯಶಾಸ್ತ್ರ, ಜೈವಿಕ ತಂತ್ರಜ್ಞಾನ, ಪರಿಸರ ವಿಜ್ಞಾನ, ವೈದ್ಯಕೀಯ ಪೋಷಣೆ ಮತ್ತು ಆಹಾರ ಪದ್ಧತಿ, ಆಹಾರ ಮತ್ತು ಪೋಷಣೆ, ಜೀವರಸಾಯನ ಶಾಸ್ತ್ರ, ಭೂಗೋಳಶಾಸ್ತ್ರ, ಮಾಹಿತಿ ತಂತ್ರಜ್ಞಾನ, ಸೂಕ್ಷ್ಮ ಜೀವವಿಜ್ಞಾನ, ಗಣಿತಶಾಸ್ತ್ರ, ಭೌತಶಾಸ್ತ್ರ, ಪದವಿ ಶಿಕ್ಷಣ ಕ್ರಮಗಳಿಗೆ ವಿಶ್ವವಿದ್ಯಾನಿಲಯದ ನಿಯಮಗಳಿಗೆ ಅನುಗುಣವಾಗಿ ಸ್ಥಳದಲ್ಲಿಯೇ ದಾಖಲಾತಿಗಳನ್ನು ನೀಡಿ ಪ್ರವೇಶಾತಿ ಪಡೆದು ಶಿಕ್ಷಣವನ್ನು ಪಡೆಯಲು ಅವಕಾಶವಿರುತ್ತದೆ.

ಅರ್ಜಿ ಸಲ್ಲಿಸಲು ಅಕ್ಟೋಬರ್ 15 ಕೊನೆಯ ದಿನವಾಗಿದೆ. ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಿ ಕೊಪ್ಪಳ ಪ್ರಾದೇಶಿಕ ಕೇಂದ್ರ ಕಛೇರಿಗೆ ಭೇಟಿ ನೀಡಿ, ನಿಗದಿತ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸಿ, ಅಗತ್ಯ ದಾಖಲಾತಿಗಳ ನಕಲು ಪ್ರತಿಗಳನ್ನು ಪ್ರಾದೇಶಿಕ ಕೇಂದ್ರ ಕಛೇರಿಯಲ್ಲಿ ಸಲ್ಲಿಸಿ ಪ್ರವೇಶಾತಿಯನ್ನು ಪಡೆದುಕೊಳ್ಳಬಹುದು.


ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8904405994 ಅಥವಾ 8748845520, 8748845520, 7795066485, 8904405994, 9071179986, 7483607715 ಗೆ ಹಾಗೂ ವಿವಿಯ ಅಂತರ್ಜಾಲ ವಿಳಾಸ: www.ksoumysuru.ac.in ಕ್ಕೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಪ್ರಾದೇಶಿಕ ನಿರ್ದೇಶಕರಾದ ಸಂದೇಶ್ ಕೆ.ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪ ಸಂಖ್ಯಾತರ ಪತ್ತಿನ ಸಹಕಾರಿ ಸಂಘದ ನೂತನ ಕಟ್ಟಡ ಉದ್ಘಾಟನೆ

**ಇಂಡಿ:** ಸಹಕಾರಿ ಬ್ಯಾಂಕುಗಳು ಅರ್ಥಿಕವಾಗಿ ಬಲಾಢ್ಯಗೊಳ್ಳಬೇಕಾದರೆ ದುಡಿಯುವ ಬಂಡವಾಳ ನಿರಂತರ ದುಡಿಮೆಯಲ್ಲಿರಬೇಕು, ಇದರಿಂದ ದುಡಿಯುವ ಕೈಗಳಿಗೆ ಕೆಲಸ ಹೊಟ್ಟೆಗೆ ಅನ್ನ ಸಿಗುತ್ತದೆ ಎಂದು ಶಾಸಕ ಯಶವಂತರಾಯಗೌಡ ಪಾಟೀಲರು ಹೇಳಿದರು.

ಪಟ್ಟಣದಲ್ಲಿ ನೂತನವಾಗಿ ಕಟ್ಟಿದ ಬಾಗವಾನ ಅಲ್ಪ ಸಂಖ್ಯಾತರ ಪತ್ತಿನ ಸಹಕಾರಿ ಸಂಘದ ನೂತನ ಕಟ್ಟಡದ ಉದ್ಘಾಟನೆ ಮತ್ತು 2024–25 ನೇ ಸಾಲಿನ 28 ನೇ ವಾರ್ಷಿಕ ಸರ್ವ ಸಾಧಾರಣ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಸರಕಾರಿ ಸ್ವಾಮ್ಯದ ಬ್ಯಾಂಕ ಗಳಿಗಿಂತಲೂ ಸಹಕಾರಿ ಕೋ ಆಪ್ ಬ್ಯಾಂಕುಗಳು ಸೇರಿದಂತೆ ಸತ್ತಾರ ಬಾಗವಾನರ ಸಹಕಾರಿ ಬ್ಯಾಂಕು ಬಡಜನರಿಗೆ, ಜನ ಸಾಮಾನ್ಯರಿಗೆ ಸಹಕಾರಿ ಯಾಗಿವೆ. ಗ್ರಾಹಕರಿಗೆ ಉತ್ತಮ ಸೇವೆ ಒದಗಿಸುವ ಮೂಲಕ ಬಾಗವಾನ ಬ್ಯಾಂಕು ಈ ಭಾಗದಲ್ಲಿ ಜನಪ್ರಿಯತೆ ಹೆಚ್ಚಿಸಿಕೊಂಡಿದೆ ಎಂದರು.



ಸತ್ತಾರ ಬಾಗವಾನರವರು ಹೆಚ್ಚು ಕಲಿತಿಲ್ಲವಾದರೂ ಸಹಕಾರಿರಂಗದಲ್ಲಿ ಅತೀ ಯಶಸ್ವಿಯಾಗಿದ್ದಾರೆ. ಕರ್ನಾಟಕ ಮತ್ತು ಮಹಾರಾಷ್ಟ್ರಗಳಲ್ಲಿ ಸಹಕಾರಿ ಸಂಘಗಳು ಅತಿ ಯಶಸ್ವಿಯಾಗಿದ್ದು ಸರಳ ವಿಧಾನ ಮೂಲಕ ಸಾಲ ಕೊಡುವ ವ್ಯವಸ್ಥ ಸಹಕಾರಿ ಬ್ಯಾಂಕಿನಲ್ಲಿದೆ ಎಂದರು.

ಸಹಕಾರಿ ರತ್ನ ಪುರಸ್ಕೃತರು ಅಧ್ಯಕ್ಷರು ಶಾಂತೇಶ್ವರ ಬ್ಯಾಂಕಿನ ಶ್ರೀಮಂತ ಇಂಡಿ ಮಾತನಾಡಿ ಬಾಗವಾನ ಬ್ಯಾಂಕು ಗ್ರಾಹಕರೊಂದಿಗೆ ಪರಸ್ಪರ ಪ್ರೀತಿ ವಿಶ್ವಾಸದೊಂದಿಗೆ ವ್ಯವಹರಿಸಿ ಅರ್ಥ ವ್ಯವಸ್ಥೆ ಬೆಳೆಸಿಕೊಂಡ ಬಾಗವಾನ ಬ್ಯಾಂಕು 28 ವರ್ಷ ಗಳನ್ನು ಪೂರೈಸಲು ಸಾಧ್ಯವಾಗಿದೆ. ಹಣ ನಿರಂತರ ಚಲಾವಣೆಯಲ್ಲಿದ್ದರೆ ಬ್ಯಾಂಕು ಅರ್ಥಿಕವಾಗಿ ಬಲಗೊಳ್ಳಬಹುದು ಆಡಳಿತ ಮಂಡಳಿಯ ಕಠಿಣ ಪರಿಶ್ರಮ ಗ್ರಾಹಕರೊಂದಿಗಿರುವ ಅನ್ಯುನತೆಯೇ ಶ್ರೇಯೋಭಿವೃದ್ಧಿ ಕಂಡಿದೆ. ಬಾಗವಾನ ಬ್ಯಾಂಕು ಇನ್ನೂ ಹೆಚ್ಚು ಸಹಕಾರಿಯಾಗಿ ಬೆಳೆಯಲಿ ಎಂದು ಹಾರೈಸಿದರು.

ಉಪಾಧ್ಯಕ್ಷರು ಭೀಮಾಶಂಕರ ಕಾರಖಾನೆಯ ಎಮ್.ಆರ್.ಪಾಟೀಲ ಬ್ಯಾಂಕು ನಡೆದು ಬಂದ ದಾರಿ ಮತ್ತು ಸಂಘದ ಗಳಿಸಿದ ಲಾಭಾಂಶದ ಬಗ್ಗೆ ತಿಳಿಸಿದರು.

ಉಪಾಧ್ಯಕ್ಷರು ಅಂಜುಮನ್ ಎ ಇಸ್ಲಾಂ ವಿಜಯಪುರದ ಸೈಯದ್ ಜೈನುಲಾಜಿದಿನ್ ಪೀರಜಾದೆ, ಬಾಗವಾನ ಅಲ್ಪ ಸಂಖ್ಯಾತರ ಬ್ಯಾಂಕಿನ ಅಧ್ಯಕ್ಷ ಸತ್ತಾರ ಬಾಗವಾನ,ಅಬ್ದುಲ್ ರಹಮಾನ ಅಂತುಲೆ, ಇಲಿಯಾಸ ಬೋರಾಮಣಿ,ಶಿವಲಿಂಗಪ್ಪ ಓಂಕಾರಿ ಮಾತನಾಡಿದರು.

ವೇದಿಕೆಯ ಮೇಲೆ ಪೂಜ್ಯ ಅಭಿನವ ಪುಂಡಲಿಂಗ ಶ್ರೀಗಳು ಗೋಳಸಾರ, ಪುರಸಭೆ ಅಧ್ಯಕ್ಷ ಲಿಂಬಾಜಿ ರಾಠೋಡ, ಕಲ್ಲನಗೌಡ ಪಾಟೀಲ, ಪ್ರಶಾಂತ ಕಾಳೆ, ಜಟ್ಟೆಪ್ಪ ರವಳಿ, ಜಂಟಿ ನಿರ್ದೇಶಕರು ಸಹಕಾರಿ ಸಂಘದ ಎಸ್.ಎಸ್. ಬರ್ಮಾ, ಸಹಾಯಕ ನಿರ್ದೇಶಕ ನಾಗೇಂದ್ರ ಕಟ್ಟಿಮನಿ, ನಿರೀಕ್ಷಕರು ವಿಜಯಕುಮಾರ ನಾಯಕ, ಈರಣ್ಣ ತೆಲ್ಲೂರ, ಅಯೂಬ ಬಾಗವಾನ, ಬ್ಯಾಂಕಿನ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ನಿರ್ಮಲಾ ಕೊಂಕಣಗಾಂವ, ಜಾವೇದ ಮೋಮಿನ, ರಾಜು ಪತಂಗೆ, ಡಾ॥ ರಾಜೇಶ ಕೋಳೆಕರ ಮತ್ತಿತರಿದ್ದರು.

### ಬಸರಕೋಡ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ 50ನೇ ವಾರ್ಷಿಕ ಮಹಾಸಭೆ

# ಸಾಲ ಸೌಲಭ್ಯಗಳನ್ನು ರೈತರು ಸದುಪಯೋಗ ಪಡಿಸಿಕೊಳ್ಳಿ



**ಮುದ್ದೇಬಿಹಾಳ:** ಸಹಕಾರಿ ಸಂಘದಿಂದ ನೀಡುವಂತಹ ಸಾಲ ಸೌಲಭ್ಯಗಳನ್ನು ಸಂಘದ ಪ್ರತಿ ಸದಸ್ಯರು ರೈತರು ಸದುಪಯೋಗ ಪಡಿಸಿಕೊಳ್ಳಬೇಕೆಂದು ಮಾಜಿ ಜಿಲ್ಲಾ ಸದಸ್ಯ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಹೇಮರೆಡ್ಡಿ ಮೇಟಿ ಹೇಳಿದರು.

ತಾಲ್ಲೂಕಿನ ಬಸರಕೋಡ ಗ್ರಾಮದ ಶ್ರೀ ಪವಾಡ ಬಸವೇಶ್ವರ ದೇವಾಲಯದ ಸಭಾ ಭವನದಲ್ಲಿ ಬಸರಕೋಡ ವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ 50 ನೇ ವಾರ್ಷಿಕ ಮಹಾಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು ಸಂಘ ಆರಂಭವಾಗಿ45 ವರ್ಷಗಳು ಯಾವುದೇ ವಾರ್ಷಿಕ ಸಭೆಗಳು ಚರ್ಚೆಗಳು ನಡೆದಿರಲಿಲ್ಲ ನಾವು ಸಂಘದ ಅಧ್ಯಕ್ಷರಾದ 5 ವರ್ಷದಲ್ಲಿ ಸಂಘದ ಏಳ್ಗೆಗೆ ಮತ್ತು ಸಂಘದ ರೈತರಿಗೆ ಸಿಗುವ ಸೌಲಭ್ಯಗಳನ್ನು ಒದಗಿಸುವ ಕೆಲಸವನ್ನು ಮಾಡುತ್ತಿದ್ದೇನೆ ರೈತರಿಗೆ ಕೃಷಿ ಸಾಲ ಪೈಪಲೈನ್ ಸಾಲ ಸೇರಿದಂತೆ ಕೃಷಿ ಚಟುವಟಿಕೆಗೆ ಗೊಬ್ಬರ ಕೇಂದ್ರ ತರೆದು ರಸಗೊಬ್ಬರ ಕೀಟನಾಶಕಗಳ ಕೊರತೆ ಆಗದಂತೆ ಮಾಡಿದ್ದೇನೆ ಬರುವ ಅವಧಿಯಲ್ಲಿ ಸದಸ್ಯರು ಅವಕಾಶ ನೀಡಿದರೆ ಸಂಘದಿಂದ ಶುದ್ಧ ಗಾಣದ ಎಣ್ಣೆ ಘಟಕ ಶುದ್ಧ ಕುಡಿಯುವ ನೀರಿನ ಘಟಕ ಸೇರಿದಂತೆ ಅನೇಕ ಯೋಜನೆಗಳ ಕನಸಿದೆ ಎಂದ ಅವರು ಸಂಘ ಪ್ರಸ್ತಕ ವರ್ಷ 9 ಲಕ್ಷ 73 ಸಾವಿರ ನಿವ್ವಳ ಲಾಭಗಳಿಸಿದೆ ಎಂದರು.

ಸಭೆಯಲ್ಲಿ ಕೆ ವೈ ಬಿರಾದಾರ, ಲಕ್ಕಪ್ಪ ಸೋಮನಾಳ ವೈ ವೈ ಮುತ್ತತ್ತಿ, ಮಹಾವೀರ ಸಗರಿ, ಗೊಮ್ಮಟೇಶ್ವರ ಸಗರಿ ಮಾತನಾಡಿ ಸಂಘದ ಸದಸ್ಯರು ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ವ್ಯವಹರಿಸುವ ಬದಲು ಸಂಘದಲ್ಲಿ ವ್ಯವಹರಿಸಿದರೆ ಸಂಘ ಅಭಿವೃದ್ಧಿಯಾಗುತ್ತದೆ ಎಂದರು.

ವೃತ್ತಿಪರ ನಿರ್ದೇಶಕ ಡಿ.ಬಿ ಬೇಲಾಳ ವಾರ್ಷಿಕ ವರದಿ ವಾಚಿಸಿದರು, ಮಹಾದೇವಯ್ಯಾ ಶಾಸ್ತ್ರೀಗಳು ಆಶೀರ್ವಚನ ಮಾಡಿದರು. ಸಾನಿಧ್ಯವನ್ನು ಶ್ರೀಕಾಂತ ಒಡೆಯರ್ ಅರವಿಂದ ಒಡೆಯರ ವಹಿಸಿದ್ದರು ಸಭೆಯಲ್ಲಿ ಸಂಘದ ಉಪಾಧ್ಯಕ್ಷ ಬಾಬು ಸೂಳೆಬಾವಿ ನಿರ್ದೇಶಕರುಗಳಾದ ಸಿಂಧುಬಲ್ಲಾಳ ನಾಡಗೌಡ, ಸುನಿಲ್ ಸೂಳೆಭಾವಿ,ಸೋಮಪ್ಪ ಮೇಟಿ,ಬಸವರಾಜ ಪಾಟೀಲ್, ಲಕ್ಕಪ್ಪ ಸೋಮನಾಳ, ಶಾಂತಪ್ಪ ಸಂಕನಾಳ, ಮಡಿವಾಳಪ್ಪ ತಳವಾರ,ಶ್ರೀಮತಿ ಪಾರ್ವತಿ ಸಾಲಿಮಠ, ಸಿದ್ದಮ್ಮ ಬಿರಾದಾರ, ಯಲ್ಲಪ್ಪ ಚಲವಾದಿ, ಕ್ಷೇತ್ರಾಧಿಕಾರಿ ರವಿ ಗುರಿಕಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಸನಗೌಡ ಕೊಣ್ಣೂರ ಯುವ ಮುಖಂಡ ಶ್ರೀಶೈಲ ಮೇಟಿ ಸೇರಿದಂತೆ ಗಣ್ಯರು ಸದಸ್ಯರು ಭಾಗವಹಿಸಿದ್ದರು .ಎಲ್ ಆರ್ ಸೋಮನಾಳ ಸ್ವಾಗತಿಸಿದರು, ಪವಾಡೆಪ್ಪ ತಾರನಾಳ ನಿರೂಪಿಸಿದರು ಮಂಜುನಾಥ ದೂಡಮನಿ ವಂದಿಸಿದರು.

# ವಿವಿಧ ದೇವಸ್ಥಾನಗಳಲ್ಲಿ ಘಟಸ್ಥಾಪನೆ ಕಾರ್ಯಕ್ರಮ



**ಯರಗಟ್ಟಿ:** ನಾಡ ಹಬ್ಬ ದಸರಾ, ನವರಾತ್ರಿ ಉತ್ಸವ ನಿಮಿತ್ಯ ಪಟ್ಟಣದ ಗ್ರಾಮದೇವಿಯರ, ಕಾಳಿಕಾದೇವಿ, ವೀರಭದ್ರೇಶ್ವರ, ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ಹಾಗೂ ರಾಜರಾಜೇಶ್ವರಿ ಆಶ್ರಮದಲ್ಲಿ ಭಾನುವಾರ ಧಾರ್ಮಿಕ ಪರಂಪರೆಯಂತೆ ಘಟಸ್ಥಾಪನೆ ಕಾರ್ಯಕ್ರಮ ನಡೆಯಿತು.

ದೇವಸ್ಥಾನದಲ್ಲಿ ಬೆಳಗ್ಗೆಯಿಂದ ಸಂಜೆಯ ವರೆಗೂ ದೇವಿಗೆ ಕಾಕಡಾರತಿ, ಕ್ಷೀರಾಭಿಷೇಕ, ಜಲಾಭಿಷೇಕ, ಕುಂಕುಮಾರ್ಚನೆ ಅನೇಕ ಬಗೆಯ ಪೂಜಾ ಕಾರ್ಯಕ್ರಮಗಳು ನೆರವೇರಿಸಿದ ಬಳಿಕ ನವರಾತ್ರಿ ಉತ್ಸವಕ್ಕೆ ಚಾಲನೆ ನೀಡಲಾಯಿತು. ಪ್ರವಚನಕಾರ ಮಡಿವಾಳಪ್ಪ ವನ್ನೂರ ಹಾಗೂ ತುರುಮರಿಯ ಪೂಜ್ಯ ಶಾಂತಯ್ಯ ಮಹಸ್ವಾಮಿಗಳು ಇವರಿಂದ ದೇವಿ ಪಾರಾಯಣ ಜರುಗಿತು. ಬಳಿಕ ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವಿಗೆ ನೈವೇದ್ಯ ಅರ್ಪಿಸಿ ದರ್ಶನ ಪಡೆದರು.

ಕಾರ್ಯಕ್ರಮಕ್ಕೂ ಮುನ್ನ ದೇವಸ್ಥಾನದ ಆವರಣದಲ್ಲಿ ಮುತ್ತೈದೆಯರಿಗೆ ಪೂಜೆ ಸಲ್ಲಿಸಲಾಯಿತು. ಪೂಜ್ಯ ಗಣಪತಿ ಮಹಾರಾಜರು, ಎ. ಜಿ. ಪತ್ತಾರ, ಡಾ. ಕಾಶೀನಾತ ಅಂಗಡಿ, ವಿ. ಎಮ್. ಮರಡಿ, ಶಿವಾನಂದ ಹಂಜಿ, ಸುಭಾಸ ರೊಗೆ, ಡಾ. ವಿಶ್ವಾನಾಥ ತಾಂವಶಿ, ಮಹಾದೇವ ದಂಡಿನದುರ್ಗಿ, ಬಿ. ಕೆ. ರಂಗಣ್ಣವರ, ವಾಯ್. ಎಮ್. ಕಡಕೋಳ, ರಾಜೇಂದ್ರ ಶೆಟ್ಟಿ, ವಿಶ್ವಾನಾಥ ಹೊಳಿಮಠ, ಆಶಾ ಪರೀಟ, ಶೋಭಾ ದಂಡಿನದುರ್ಗಿ, ಮೈತ್ರಾ ಹೊಂಗಲ, ಮುಖಂಡರು ಸೇರಿದಂತೆ ಅನೇಕ ಭಕ್ತರು ಉಪಸ್ಥಿತರಿದ್ದರು.



# ಅತ್ಯುತ್ತಮ ಮಹಿಳಾ ಸಂಘ ಪ್ರಶಸ್ತಿ

**ರಾಯಬಾಗ:** ಇತ್ತೀಚೆಗೆ ಬೆಳಗಾವಿ ಜಿಲ್ಲಾ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಬೆಳಗಾವಿ ಇವರ ವತಿಯಿಂದ 2024–25ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಸಾಮಾನ್ಯ ಸಭೆ ಜರುಗಿತ್ತು.ಈ ಸಭೆಯಲ್ಲಿ ತೇಲಿ ತೋಟ (ಮೊರಬ) ತಾ. ರಾಯಬಾಗದಲ್ಲಿರುವ ತೇಲಿ ತೋಟ ಮಹಿಳಾ ಹಾಲು ಉತ್ಪಾದಕರ ಸಹಕಾರಿ ಸಂಘ ನಿ. ಜಿಲ್ಲಾ ಮಟ್ಟದ ಅತ್ಯುತ್ತಮ ಮಹಿಳಾ ಸಂಘವೆಂದು ಗುರುತಿಸಲ್ಪಟ್ಟು ಚಾಂಪಿಯನ್ ಪ್ರಶಸ್ತಿಗೆ ಭಾಜನವಾಗಿದೆ.

ಪ್ರಶಸ್ತಿಯನ್ನು ಒಕ್ಕೂಟದ ಅಧ್ಯಕ್ಷ ಬಾಲಚಂದ್ರ ಅಣ್ಣಾ ಜಾರಕಿಹೊಳಿ ನೀಡಿ ಗೌರವಿಸಿದರು.ಈ ಸಂದರ್ಭದಲ್ಲಿ ಬೆಳಗಾವಿ ಹಾಲು ಒಕ್ಕೂಟದ ಮಾಜಿ ಅಧ್ಯಕ್ಷ ಹಾಲಿ ನಿರ್ದೇಶಕ ವಿವೇಕರಾವ್ ಪಾಟೀಲ ಹಾಲು ಉತ್ಪಾದನಾ ಕ್ಷೇತ್ರದಲ್ಲಿ ಮಹಿಳೆಯರ ಸಕ್ರಿಯತೆ, ಸಂಘದ ಶ್ರೇಷ್ಠ ಕಾರ್ಯಪದ್ಧತಿ ಮತ್ತು ಸದಸ್ಯರ ಏಕತಾ ಮನೋಭಾವವನ್ನು ಶ್ಲಾಘಿಸಿದರು.

ಸಂಘದ ಅಧ್ಯಕ್ಷೆ ಕಸ್ತೂರಿ ತೇಲಿ, ಉಪಾಧ್ಯಕ್ಷೆ ರೂಪಾ ಮದನೆ,ಕಾರ್ಯದರ್ಶಿ, ಸುವರ್ಣಾ ತೇಲಿ, ರುಕ್ಮಿಣಿ ಚೌಗಲಾ, ಮಾಯವ್ವ ಸವದತ್ತಿ ಸೇರಿದಂತೆ ತಾಲ್ಲೂಕು ಉಪಕೇಂದ್ರಾಧಿಕಾರಿ ಡಾ.ಚಂದ್ರಶೇಖರ ಸಂಬಾಳ ಇದ್ದರು.

# ಸಹಕಾರ ಸಂಘದ 83ನೇ ವಾರ್ಷಿಕ ಸಭೆ

**ಯರಗಟ್ಟಿ:** ಸಮೀಪದ ರೈನಾಪೂರ ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ರೈನಾಪೂರ 2024 25ನೇ ಸಾಲಿನ 83ನೇ ವಾರ್ಷಿಕ ಸರ್ವ ಸಾಧಾರಣ ಮಹಾಸಭೆ ನಡೆಯಿತು.

ಅಧ್ಯಕ್ಷತೆ ವಹಿಸಿದ ಸಂಘದ ಅಧ್ಯಕ್ಷರಾದ ವಿಠ್ಠಲ ಬಂಟನೂರ ಮಾತನಾಡಿ, ಹಿಂದಿನ ಸಹಕಾರ ವರ್ಷದ ಮಂಡಳಿಯು ಮಂಡಿಸಿದ ವಾರ್ಷಿಕ ವರದಿಯನ್ನು ಪರಿಗಣಿಸುವದು. ಹಿಂದಿನ ಸಹಕಾರ ವರ್ಷದ ಲೆಕ್ಕ ಪರಿಶೋಧನಾ ವರದಿ ಮತ್ತು ಅದರ ಬಗೆಗಿನ ಮಂಡಳಿ ವರದಿಯನ್ನು ಪರಿಗಣಿಸಿದುವುದು.

ನಿರ್ದಿಷ್ಟ ಮೀಸಲು ಮತ್ತು ಇತರ ನಿಧಿಗಳು ಸೃಜಿಸುದು. ರೈತರಿಗೆ ಏನಾದರೂ ಸಂಘದಿಂದ ಉಪಯೋಗವಾಗುವ ಕೆಲಸವನ್ನು ಮಾಡುತ್ತೇನೆ. ಬೀಜ ಗೊಬ್ಬರವನ್ನು ರೈತರಿಗೆ ತಂದು ಮುಟ್ಟಿಸುವ ವ್ಯವಸ್ಥೆಯನ್ನು ನಾವು ಎಲ್ಲ ಆಡಳಿತ ಮಂಡಳಿಯವರು ಬರುವ ಮುಂದಿನ ಸಮಯದಲ್ಲಿ ರೈತರಿಗೆ ಉಪಯೋಗ ವಾಗುವಂತೆ ಮನಮುಟ್ಟುವ ಒಳ್ಳೆಯ ಕೆಲಸವನ್ನು ಮಾಡುತ್ತೇವೆ.

ಪ್ರಸ್ತುತ ವರ್ಷದಲ್ಲಿ ಸಂಘದಿಂದ ರೈತರಿಗೆ 6 ಕೊಟಿ 36 ಲಕ್ಷ ಸಾಲ ನೀಡಿದೆ ಮತ್ತು ವಿವಿಧ ಬ್ಯಾಂಕುಗಳಲ್ಲಿ 2,06,10,081,00 ಠೇವಣಿ ಇಡಲಾಗಿದೆ ಹಾಗೂ ಪ್ರಸ್ತುತ ವ?ದ 20,65,311–00 ಲಾಭ ಗಳಿಸಿದ ಎಂದು ಸಂಘದ ಅಧ್ಯಕ್ಷ ಹೇಳಿದರು. ಸಭೆಯಲ್ಲಿ ಉಪಾಧ್ಯಕ್ಷ ಆನಂದ ಪಟ್ಟಣಶೆಟ್ಟಿ, ನಿರ್ದೇಶಕರಾದ ಬಸವರಾಜ ಪಟ್ಟಣಶೆಟ್ಟಿ, ಭೀಮಪ್ಪ ಕಳ್ಳಿಗುದ್ದಿ, ಹೇಮರೆಡ್ಡಿ ಚುಳಕಿ, ಹನಮಂತ ಶಿದ್ನಾಳ, ಮಂಜುನಾಥ ದಳವಾಯಿ, ಭೀಮಪ್ಪ ಮುಡೆನ್ನವರ, ಮುದಕಪ್ಪ ಜೂಗನವರ, ಸುಧಾ ಪಟ್ಟಣಶೆಟ್ಟಿ, ಶಾಂತವ್ವ ಶಿದ್ನಾಳ, ಪಡೆಪ್ಪ ನರಗಟ್ಟಿ, ಎಸ್. ಎಮ್. ಪತ್ತಾರ, ಸಿಬ್ಬಂದಿ ವರ್ಗದವರಾದ ಬಸವರಾಜ ಪಟ್ಟಣಶೆಟ್ಟಿ, ಯಲ್ಲಪ್ಪ ತಳವಾರ ಹಾಗೂ ಶೇರುದಾರರು ಗ್ರಾಮಸ್ಥರು, ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



# ಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಧರ್ಮದ್ವಜಾರೋಹಣ




**ಗದಗ:** ನಗರದ ಮುಳಗುಂದನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ 45ನೇ ವರ್ಷದ ದಸರಾ ಮಹೋತ್ಸವ, ಘಟಸ್ಥಾಪನೆ ಮತ್ತು ಶ್ರೀದೇವಿ ಪುರಾಣ ಪ್ರಾರಂಭೋತ್ಸವಕ್ಕೆ ಸೋಮವಾರ ಧರ್ಮದ್ವಜಾರೋಹಣ ನೆರವೇರಿಸುವ ಮೂಲಕ ಚಾಲನೆ ನೀಡಲಾಯಿತು.

ಶ್ರೀಮಠದಲ್ಲಿ ಶ್ರೀಅನ್ನಪೂರ್ಣೇಶ್ವರಿ ದೇವಿಗೆ ವಿಶೇಷ ಪೂಜೆ ನೆರವೇರಿಸಲಾಯಿತು. ಬಳಿಕ ಧರ್ಮ ಧ್ವಜಾರೋಹಣವನ್ನು ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾಮಹೋತ್ಸವ ಸಮಿತಿಯ ಅಧ್ಯಕ್ಷರಾದ ಸದಾಶಿವಯ್ಯ ಮದರಿಮಠ ಅವರು, ಹಿರೇವಡ್ಡಟ್ಟಿಯ ವೀರೇಶ್ವರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ಹಾಗೂ ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಸಮ್ಮುಖದಲ್ಲಿ ನೆರವೇರಿಸಿದರು.

ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾಮಹೋತ್ಸವ ಸಮಿತಿಯ ಗೌರವಾಧ್ಯಕ್ಷರಾದ ಎಸ್.ಪಿ. ಸಂಶಿಮಠ, ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಎಸ್. ಗುಡಿಮನಿ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ, ಪೂಜಾ ಸಮಿತಿ ಅಧ್ಯಕ್ಷರಾದ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ಡಾ.ರಾಜೇಂದ್ರ ಗಡಾದ, ಬಿ.ಬಿ. ಪಾಟೀಲ, ಹಿರಿಯ ಲೆಕ್ಕಪರಿಶೋಧಕರಾದ ವೀರೇಶ ಕೂಗು, ಕಿರಣ ಹಾವನೂರ, ರತನಲಾಲಸಾ ಭಾಂಡಗೆ, ಸಿದ್ದಣ್ಣ ಜವಳಿ, ಶಾರದಾ ಬೊಮ್ಮಸಾಗರ, ಉದ್ದಿಮೆದಾರರಾದ ಉಮೇಶ ಹುಬ್ಬಳ್ಳಿ, ಗದಗ ಅಕ್ಕನಬಳಗದ ಅಧ್ಯಕ್ಷರಾದ ಜಯಶ್ರೀ ಹುಬ್ಬಳ್ಳಿ, ಉದ್ದಿಮೆದಾರರಾದ ಸಿದ್ಧಲಿಂಗೇಶ ಉಮಚಗಿ, ಅಕ್ಷತಾ ಉಮಚಗಿ, ಸಿದ್ದಣ್ಣ ಜವಳಿ, ವ.ಎಂ. ಕುಮದ್ರಾಳ ಹಿರೇಮಠ, ಯು.ಆರ್. ಭೂಸನೂರಮಠ, ಕೆ.ಎಚ್. ಬೇಲೂರ, ಜಾತ್ರಾ ಮಹೋತ್ಸವ ಸಮಿತಿಯ ಸಹಕಾರ್ಯದರ್ಶಿ ಗುರುಬಸವಲಿಂಗ ದಾನಪ್ಪ ತಡಸದ, ಕೋಶಾಧ್ಯಕ್ಷರಾದ ವಿರುಪಣ್ಣ ಬಳ್ಳೊಳ್ಳಿ, ಮಹಿಳಾ ಸಮಿತಿಯ ಕಾರ್ಯದರ್ಶಿ ಗೀತಾ ವಿ. ಹೂಗಾರ, ಸಹಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ ಮತ್ತಿತರರು ಉಪಸ್ಥಿತರಿದ್ದರು.

## ಇಂದು ಸಾರ್ವಜನಿಕರ ದೂರು ಸ್ವೀಕಾರ

**ಧಾರವಾಡ:** ಕರ್ನಾಟಕ ಲೋಕಾಯುಕ್ತ, ಪೊಲೀಸ್ ಇಲಾಖೆಯ ಧಾರವಾಡ ಕಚೇರಿಯ ಅಧಿಕಾರಿಗಳು ಸೆಪ್ಟಂಬರ್ 24, 2025 ರಂದು ಹುಬ್ಬಳ್ಳಿ ಮಿನಿ ವಿಧಾನಸೌಧ, ತಾಲೂಕು ಪಂಚಾಯತ ಕಾರ್ಯಾಲಯದ ಸಭಾಭವನದಲ್ಲಿ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಸಾರ್ವಜನಿಕರಿಂದ ದೂರು, ಅಹವಾಲು ಸ್ವೀಕರಿಸಲಿದ್ದಾರೆ. ಆದ್ದರಿಂದ ಯಾವುದೇ ಸರಕಾರಿ ಅಧಿಕಾರಿ, ನೌಕರರು ಸರ್ಕಾರಿ ಸೇವೆ ಒದಗಿಸುವವಲ್ಲಿ ಲಂಚಕ್ಕೆ ಬೇಡಿಕೆ ಇಟ್ಟಲ್ಲಿ, ಅನಾವಶ್ಯಕ ವಿಳಂಬ ಮಾಡುತ್ತಿದ್ದಲ್ಲಿ, ಯಾವುದಾದರು ಸರ್ಕಾರಿ ಭೂಮಿಗಳ ಒತ್ತುವರಿಯಾಗಿದ್ದಲ್ಲಿ, ಕಾಮಗಾರಿಗಳಲ್ಲಿ ಅಕ್ರಮ ಅಥವಾ ಕಳಪೆ ಕಾರ್ಯ ನಡೆದಿದ್ದಲ್ಲಿ ಈ ಬಗ್ಗೆ ದೂರ ನೀಡಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಅಹ್ವಾನ


**ಬೆಳಗಾವಿ:** ತಾಂತ್ರಿಕ ತರಬೇತಿ ಸಂಸ್ಥೆ ಹಿಂದೂಸ್ಥಾನ ಏರೋನಾಟಿಕ್ಸ್ ಲಿಮಿಟೆಡ್ (HAL)ನಲ್ಲಿ ITI ಪಾಸಾದ ಅಭ್ಯರ್ಥಿಗಳಿಗೆ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಅಹ್ವಾನಿಸಿದೆ. ಆಸಕ್ತ ಅಭ್ಯರ್ಥಿಗಳು ಸೆಪ್ಟಂಬರ, 25, 2025 ರ ಒಳಗಾಗಿ https://apprenticeshipindia.gov.in ಮೂಲಕ ಜಿಲ್ಲಾಉದ್ಯೋಗ ವಿನಿಮಯ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಐ.ಟಿ.ಐ ನಲ್ಲಿ ಫೀಟ್ಟರ್, ಟರ್ನರ್, ಮಶಿನಿಷ್ಟ್, ಇಲೆಕ್ಟ್ರಾನಿಕ್ಸ್, ವೆಲ್ಡರ್, ಕಂಪ್ಯೂಟರ್ ಅಪರೇಟಿವ್ ಮತ್ತು ಪ್ರೋಗ್ರಾಮಿಂಗ್ ಅಸಿಸ್ಟೆಂಟ್, ಕಾರಪೆಂಟರ್, ಪೌಂಡರಿ ಮ್ಯಾನ್, ಶೀಟ್ ಮೆಟಲ್ ವರ್ಕರ್, ಟೂಲ್ ಮತ್ತು ಡೈ ಮೇಕರ್,ಸಿ.ಎನ್.ಸಿ. ಪ್ರೋಗ್ರಾಮರ್ ಕಮ್‌ಆಪ್ ರೇಟರ್, ಮೆಕಾನಿಕ್ ರೆಫ್ರಿಗೆರೆಶನ್ ಮತ್ತು ಏರ್ ಕಂಡಿಶೀನಿಂಗ್ ಈ ಎಲ್ಲಾ ಕೋರ್ಸನಲ್ಲಿ ಪಾಸಾದ ಅಭ್ಯರ್ಥಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಮಾರ್ಕ್ಸ್ ಕಾರ್ಡ್, ಐ.ಟಿ.ಐ ಮಾರ್ಕ್ಸ್ ಶೀಟ್ (ಸೆಲ್ಫ್ ಅಟೆಸ್ಟೆಡ್ ಇಂಟರ್ನೆಟ್ ಡೌನಲೋಡ್ ರಿಸಲ್ಟ್ ಶೀಟ್) ಎನ್.ಟಿ.ಸಿ ಪ್ರತಿ, ಜಾತಿ ಪ್ರಮಾಣ ಪತ್ರ, ಆಧಾರ ಕಾರ್ಡ್ ಮತ್ತು ಪ್ಯಾನ್ ಕಾರ್ಡ್ ಈ ಎಲ್ಲಾ ಮೂಲ ದಾಖಲಾತಿ ಮತ್ತು 2 ಸೆಟ್ ಜೆರಾಕ್ಸ್ ಪ್ರತಿಯನ್ನು ತೆಗೆದುಕೊಂಡು ಜಿಲ್ಲಾಉದ್ಯೋಗ ವಿನಿಮಯ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ: 0831–2443948 ಗೆ ಅಥವಾ ಸುವರ್ಣ ವಿಧಾನಸೌಧ ಕೆಳಮಹಡಿ ಜಿಲ್ಲಾ ಉದ್ಯೋಗ ವಿನಿಮಯಕೇಂದ್ರದ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಕೃಷಿ ಸಹಕಾರ ಸಂಘಕ್ಕೆ 5.46 ಲಕ್ಷಗಳು ಲಾಭ

**ಮುದ್ದೇಬಿಹಾಳ:** ಸಹಕಾರಿ ಬ್ಯಾಂಕ್ ಅಭಿವೃದ್ಧಿ ಯಾಗಬೇಕಾದರೆ ಬ್ಯಾಂಕ್ ಶೇರುದಾರರು ಸಾಲ ತೆಗೆದುಕೊಂಡು ಆ ಸಾಲವನ್ನು ಸಮಯಕ್ಕೆ ಸರಿಯಾಗಿ ಸಾಲವನ್ನು ಮರುಪಾವತಿ ಮಾಡಿದರೆ ಸಹಕಾರಿ ಬ್ಯಾಂಕ್ ಬೆಳವಣಿಗೆ ಯಾಗುತ್ತದೆ.ಅದೇ ರೀತಿಯ ರೈತರಿಗೆ ಸಾಲವನ್ನು ನೀಡಲು ಅನುಕೂಲವಾಗುತ್ತದೆ. ಕೃಷಿ ಮಧ್ಯಮಾವಧಿ ಹಾಗೂ ಬೆಳೆಯ ಸಾಲ ,ಕುರಿ ಸಾಲ, ಟ್ರಾಕ್ಟರ್ ಖರೀದಿಗಾಗಿ ಸಾಲವನ್ನು ರೈತರಿಗೆ ಸಿಗುತ್ತದೆ ಎಂದು ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಮುಖ್ಯಕಾರ್ಯನಿರ್ವಾಹಕ ಎಸ್ ಆರ್ ಪಾಟೀಲ ಹೇಳಿದರು.

ತಾಲ್ಲೂಕಿನ ಮಲಗಲದಿನ್ನಿ ಗ್ರಾಮದಲ್ಲಿ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಸನ್ 2024–25 ಸಾಲಿನ 50 ನೇ ವಾರ್ಷಿಕ ಸರ್ವ ಸಾಧಾರಣ ಸಭೆಯಲ್ಲಿ ವರದಿ ವಾಚನ ನೀಡಿ ಅವರು ಮಾತನಾಡಿ, ರೈತರೇ ಸಂಘದ ಬೆನ್ನುಲುಬಾಗಿದ್ದು ಸಂಘದ ಒಟ್ಟು ಶೇರುದಾರರು 1765, ಸಾಲಗಾರರು 689, ಈ ವರ್ಷದಲ್ಲಿ ಸಂಘದ 5.46 ಲಕ್ಷಗಳ ಲಾಭಯಾಗಿದ್ದು ಬಂಡವಾಳವನ್ನು ಹೊಂದಿದೆ. ರೈತರು ಸಹಕಾರಿ ಸಂಘದಲ್ಲಿ ವಿಶ್ವಾಸವಿರಿಸಿ ಸಹಕರಿಸಿದ್ದು ರೈತರು ಹೆಚ್ಚು ಹಣವನ್ನು ಸಂಘದಲ್ಲಿ ಠೇವಣಿ ಇಡುವಂತೆ ರೈತರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಅಧ್ಯಕ್ಷ ಹುಲ್ಲಪ್ಪ ಎಚ್ ಕುರುಬಗೌಡರ, ಉಪಾಧ್ಯಕ್ಷ ಬಸನಗೌಡ ಪಾಟೀಲ,ಸದಸ್ಯರಾದ ನ್ಯಾಯವಾದಿ ಆರ್ ಬಿ ಪಾಟೀಲ, ಕಲ್ಲಣ್ಣ ಪ್ಯಾಟಿ,ಶಾಂತಗೌಡ ಪಾಟೀಲ, ಶಿವರಾಯ ಪ್ಯಾಟಿ, ಸಿದ್ದಲಿಂಗಪ್ಪಗೌಡ ಪಾಟೀಲ, ಪರಶುರಾಮ ಭೋವಿ, ನೀಲಮ್ಮ ಪಾಟೀಲ, ಚಾಯಮ್ಮ ಮದರಿ,ಮಲ್ಲಪ್ಪ ಕೊಂಡಗೂಳಿ, ಡಿಡಿಸಿ ಬ್ಯಾಂಕ್ ನ ಕ್ಷೇತ್ರಾಧಿಕಾರಿ ಆಯ್ ಕೆ ಕೊಣ್ಣೂರ, ನಾಗರಬೆಟ್ಟ ಗ್ರಾಪಂ ಅಧ್ಯಕ್ಷ ಸಿದ್ದರಾಮಪ್ಪ ಬ ಪ್ಯಾಟಿ, ಸದಸ್ಯ ಹಣಮಗೌಡ ಪಾಟೀಲ, ಬ್ಯಾಂಕ್ ನ ಸಿಬ್ಬಂದಿಗಳಾದ ಸಿ ಎಂ ಮಠ,ಬಿ ಎಸ್ ಏಳೂರ, ಮಲಗಲದಿನ್ನಿ ಬೂದಿಹಾಳ, ಅಡವಿ ಹುಲಗಬಾಳ, ಅಡವಿ ಹುಲಗಬಾಳ ತಾಂಡಾ, ಗೋನಾಳ ಎಸ್ ಎಚ್, ಗ್ರಾಮದ ಶೇರುದಾರರು ಸೇರಿದಂತೆ ಉಪಸ್ಥಿತರಿದ್ದರು.



# ಕ್ರೀಡಾಕೂಟ: ಜಿಲ್ಲಾ ಮಟ್ಟಕ್ಕೆ ಆಯ್ಕೆ



**ಜಮಖಂಡಿ:** ನಗರದ ತಾಲೂಕ ಕ್ರೀಡಾಂಗಣದಲ್ಲಿ ನಡೆದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ತಾಲೂಕ ಮಟ್ಟದ ಕ್ರೀಡಾಕೂಟದಲ್ಲಿ ಪ್ರೌಢಶಾಲೆಗಳ 17 ರ ವಯೋಮಾನದ ಒಳಗಿನ ಕ್ರೀಡಾಕೂಟದಲ್ಲಿ ಕುಂಬಾರಹಳ್ಳ ಸರಕಾರಿ ಪ್ರೌಢಶಾಲೆಯ ಬಾಲಕಿಯರ ತಂಡ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದೆ ಎಂದು ಮುಖ್ಯೋಪಾಧ್ಯಾಯ ನಾರಾಯಣ ಶಾಸ್ತ್ರಿ ಹೇಳಿದರು.

ವಾಲಿಬಾಲ್ ತಂಡದಲ್ಲಿ ಸಹನಾ ನ್ಯಾಮಗೌಡ ತಂಡದ ನಾಯಕಿ, ಅನಸೂಯಾ ಬಿರಾದಾರ, ಸ್ನೇಹಾ ನರಸನ್ನವರ, ರಾಗಿಣಿ ಚಿಕ್ಕಲಕಿ, ಸನ್ಮತಿ ಶಿರಹಟ್ಟಿ, ಸೌಂದರ್ಯ ಪೂಜಾರಿ, ಪೂಜಾ ಕುರಣಿ, ಸಾವಿತ್ರಿ ಕುರಣಿ, ಪೂಜಾ ಅಮಲಝರಿ ಭಾಗವಹಿಸಿದ್ದರು.

ವಿದ್ಯಾರ್ಥಿಗಳ ಸಾಧನೆಗೆ ಕ್ಷೇತ್ರ ಶಿಕ್ಷಣಾಧಿಕಾರಿ ಅಶೋಕ್ ಬಸಣ್ಣವರ, ದೈಹಿಕ ಶಿಕ್ಷಣ ಪರೀವಿಕ್ಷಕಿ ಪಂಚಾಕ್ಷರಿ ನಂದೇಶ, ದೈಹಿಕ ಶಿಕ್ಷಣ ಶಿಕ್ಷಕ ಬಾಹುಬಲಿ ಮುತ್ತೂರ, ತಂಡದ ವ್ಯವಸ್ಥಾಪಕ ಸಂಗಮೇಶ ಉಟಗಿ , ಆಶಿಫಾ ಭಾನು ಮೋಮಿನ, ಶಿಕ್ಷಕರಾದ ಸಂಜೀವ್ ಝಾಂಬೂರೆ, ಚಂದ್ರಕಾಂತ ಪೊಲೀಸ, ಸವಿತಾ ಬೆನಕಟ್ಟಿ, , ಶಾರದಾ ಮಠ, ಶಕುಂತಲಾ ಬಿರಾದಾರ್, ಸಮೂಹ ಸಂಪನ್ಮೂಲ ವ್ಯಕ್ತಿ ಅಶೋಕ ಹಳೆಮನೆ ಹಾಗು ಗ್ರಾಮ ಪಂಚಾಯತ, ಪಿಕೆಪಿಎಸ್, ಹಾಲು ಉತ್ಪಾದಕ ಮಂಡಳಿಯ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು, ಊರಿನ ಹಿರಿಯರು, ಶಿಕ್ಷಣ ಪ್ರೇಮಿಗಳು ಶುಭ ಹಾರೈಸಿದ್ದಾರೆ.

# ಸೆ.26 ರಂದು ಸಾಮಾನ್ಯ ಸಭೆ

**ಧಾರವಾಡ:** ಹುಬ್ಬಳ್ಳಿ– ಧಾರವಾಡ ಮಹಾನಗರ ಪಾಲಿಕೆಯ ಸಾಮಾನ್ಯ ಸಭೆಯನ್ನು ಸೆಪ್ಟೆಂಬರ 26, 2025 ರಂದು ಬೆಳಿಗ್ಗೆ 11 ಗಂಟೆಗೆ ಧಾರವಾಡ ಮಹಾನಗರ ಪಾಲಿಕೆಯ ಸ್ವಾತಂತ್ರ್ಯದ ಅಮೃತ ಮಹೋತ್ಸವ ಸಭಾಭವನದಲ್ಲಿ ಆಯೋಜಿಸಲಾಗಿದೆ ಮಹಾನಗರ ಪಾಲಿಕೆಯ ಪರಿಷತ್ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಕ್ಷ್ಮೇಶ್ವರ: ತಂಬಾಕು ಉತ್ಪನ್ನಗಳ ನಿಯಂತ್ರಣಕ್ಕಾಗಿ ಕೋಟ್ಪಾ ದಾಳಿ

**ಗದಗ:** ತಾಲೂಕಿನಲ್ಲಿ ಹಮ್ಮಿಕೊಂಡು ತಂಬಾಕು ನಿಯಂತ್ರಣ ಕೋಟ್ಪಾ ಕಾಯ್ದೆ 2003 ಉಲ್ಲಂಘನೆ ಕುರಿತು ಮಾರಾಟಗಾರರಿಗೆ ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ ಎಚ್ಚರಿಕೆ ನೀಡಿ 08 ಪ್ರಕರಣ ದಾಖಲಿಸಿ ರೂ. 4500 ದಂಡ ವಿಧಿಸಲಾಯಿತು

ಸೆಪ್ಟಂಬರ್ 22 ಸೋಮವಾರ ದಂದು ಜಿಲ್ಲಾ ಸಮೀಕ್ಷಣಾಧಿಕಾರಿಗಳು ಡಾ.ವೆಂಕಟೇಶ ರಾಥೋಡ್ ಇವರ ಮಾರ್ಗದರ್ಶನದಲ್ಲಿ ಲಕ್ಷೆ?ಮೇಶ್ವರ ಪಟ್ಟಣದಲ್ಲಿ ಕೋಟ್ಪಾ ದಾಳಿಮಾಡಲಾಯಿತು. ಪಾನ್ ಬೀಡಾ ಅಂಗಡಿ ಹೋಟೆಲ್‌ಗಳಲ್ಲಿ ಅನಧಿಕೃತ ಧೂಮಪಾನ ಅಡ್ಡಾಗಳು ಮಾಡಿಕೊಂಡು ಸಾರ್ವಜನಿಕರ ಜೀವದ ಜೋತೆ ಚೆಲ್ಲಾಟವಾಡುತ್ತಿದ್ದು ಈ ರೀತಿಯ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವದರಿಂದ ಅವರು ಸೇವಿಸಿ ಬಿಟ್ಟ ಹೊಗೆಯಿಂದ ಅಮಾಯಕರು ಆ ಹೊಗೆ ಸೇವನೆಯಿಂದ ಪರೋಕ್ಷ ಧೂಮಪಾನಿಗಳಾಗಿ ತಂಬಾಕು ಸೇವನೆಯಿಂದಾಗು ಅಪಾಯಕಾರಿ ಕ್ಯಾನ್ಸರ್ ಹೃದಯ ಸಂಬಂಧಿ ಕಾಯಿಲೆ ಪಾರ್ಶ್ವವಾಯು, ಇತರ ಮಾರಣಾಂತಿಕ ಕಾಯಿಲೆಗಳಿಗೆ ಬಲಿಯಾಗುತ್ತಾರೆ ಸೆಕ್ಷನ್ 4. ಕಾಯ್ದೆ ಉಲ್ಲಂಘನೆಯಾದಲ್ಲಿ ದಂಡದ ಮೊತ್ತ ರೂ.1000/– ವಾಗಿದ್ದು ಧೂಮಪಾನದ ಜೊತೆಗೆ ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವದನ್ನು ನಷೇಧಿಸಲಾಗಿದೆ. ಸೆಕ್ಷನ್ 6ಬಿ ಶಾಲಾ ಕಾಳೇಜುಗಳ ಸುತ್ತ 100 ಗಜದ ವರೇಗೆ ತಂಬಾಕು ಉತ್ಪನ್ನಗಳ ನಿಷೇಧಕ್ಕೆ ಹಾಗೂ ಸೆಕ್ಷನ್ 6ಎ 18 ವರ್ಷದೋಳಗಿನ ಬದಲಿಗೆ 21 ವರ್ಷದೊಳಗಿನವರಿಗೆ ತಂಬಾಖು ಉತ್ಪನ್ನನಿಷೇಧಿಸಲಾಗಿದ್ದು ಈ ಸೆಕ್ಷನ್ ಈ ಮೊದಲು ರೂ.200/–ಇದ್ದು ಸದರಿ ರೂ.1000/–ವರೆಗೆ ದಂಡ ಹೆಚ್ಚಿಸಲಾಗಿದೆ. ದಾಳಿಯಲ್ಲಿ ಗೋಪಾಲ ಸುರಪುರ ಜಿಲ್ಲಾ ಸಲಹೆಗಾರರು ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಗದಗ. ಪೊಲೀಸ್ ಇಲಾಖೆಯಿಂದ ವೈ.ಸಿ.ದೊಡ್ಡಮನಿ ಎ.ಎಸ್.ಐ ಪ್ರಕಾಶ ಕರ್ಜಗಿ ಎಫ್.ಬಿ. ಹೂಗಾರ ಆರೋಗ್ಯ ಶಿಕ್ಷಣ ಅಧಿಕಾರಿಗಳು, ಶ್ರೀಮತಿ ಬಸಮ್ಮ ಚಿತ್ತರಗಿ ಸಾಮಾಜಿಕ ಕಾರ್ಯಕರ್ತೆ. ಜಿ.ಬಿ.ಬಣಗಾರ ಹಾಗೂ ಕೆ.ಎಂ.ಕುಲಕರ್ಣಿ ಆರೋಗ್ಯ ನಿರೀಕ್ಷಣಾಧಿಕರಿಗಳು ಉಪಸ್ಥಿತರಿದ್ದರು.

# ಮೊಸಳೆ ಪ್ರತ್ಯಕ್ಷ ರೈತರಲ್ಲಿ ಆತಂಕ



**ಮುದ್ದೇಬಿಹಾಳ:** ಮುದ್ದೇಬಿಹಾಳ ತಾಲ್ಲೂಕಿನ ಆಲೂರ ಕೇಸಾಪೂರ ವ್ಯಾಪ್ತಿಯ ರೈತರ ಜಮೀನಿನಲ್ಲಿ ಮೊಸಳೆ ಕಂಡು ಬಂದ ಹಿನ್ನೆಲೆ ರೈತರು ಆತಂಕ ವ್ಯಕ್ತಪಡಿಸಿದ್ದಾರೆ.

ಶನಿವಾರ ಸಾಯಂಕಾಲ ರೈತ ಅಶೋಕ ಹಗರಗುಂಡ ಅವರ ತೊಗರಿ ಹೊಲದಲ್ಲಿಯ ಕೃಷಿಹೊಂಡದಲ್ಲಿ ಮೊಸಳೆ ಕಂಡಿದೆ ಮೊಸಳೆ ನೋಡುತ್ತಿದ್ದಂತೆ ಅರಣ್ಯ ಇಲಾಖೆಯವರಿಗೆ ಮಾಹಿತಿ ನೀಡಿದ್ದು ರಾತ್ರಿ ಕಾರ್ಯಾಚರಣೆ ಬೇಡ ಬೆಳಗ್ಗೆ ಬರುತ್ತೇವೆ ಎಂದು ತಿಳಿಸಿದ್ದಾರೆ. ರವಿವಾರ ರಾತ್ರಿ ಮಳೆಯಾಗಿದೆ ಬೆಳಗ್ಗೆ ಅಶೋಕ ಹಗರಗೊಂಡ ಕೃಷಿ ಹೊಂಡಕ್ಕೆ ಬಂದಾಗ ಮೊಸಳೆ ಕೃಷಿ ಹೊಂಡದಿಂದ ಹೊರ ಹೋದ ಹೆಜ್ಜೆ ಗುರುತು ಕಾಣಿಸಿಕೊಂಡಿದ್ದು ಹೆಜ್ಜೆ ಗುರುತು ಹಿಂಬಾಲಿಸಿದಾಗ ಮೊಸಳೆ ಪಕ್ಕದ ಜಿ.ಎಸ್ ಪಾಟೀಲ್ ರ ತೊಗರಿ ಹೊಲದಲ್ಲಿ ಮಲಗಿರೋದು ಕಾಣಿಸಿದೆ ,ನಾಲತವಾಡ ಉಪ ವಲಯ ಅರಣ್ಯಾಧಿಕಾರಿ ರಾಜೇಂದ್ರ ಹೂನ್ನರು ನೇತೃತ್ವದ ತಂಡ ಅಂದಾಜು 8 ಅಡಿ ಉದ್ದ 120 ಕೆಜಿಯ ಬೃಹತ್ ಮೊಸಳೆ ಸರೆ ಹಿಡಿದು ಸುರಕ್ಷಿತವಾಗಿ ನಾರಾಯಣಪುರ ಹಿನ್ನಿರಿಗೆ ಬಿಟ್ಟಿದ್ದಾರೆ. ಕಾರ್ಯಾಚರಣೆಯಲ್ಲಿ ಉಪ ವಲಯ ಅರಣ್ಯಾಧಿಕಾರಿ ರಾಜೇಂದ್ರ ಹೂನ್ನುರು ಗಸ್ತುಪಾಲಕರಾದ ವಿಜಯಕುಮಾರ್ ಕಿತ್ತೂರ, ವಿಠ್ಠಲ ಬೋರಟಗಿ ಅರಣ್ಯಪಾಲಕರಾದ ಮುತ್ತು, ಪ್ರಭು ,ಪ್ರಜ್ವಲ್ ,ಮಲ್ಲಪ್ಪ, ಮುದ್ದಪ್ಪ ಪೂಜಾರಿ, ಗ್ರಾಮಸ್ಥರಾದ ಗದ್ದೇಪ್ಪ ಬೋವೇರ,ರಫೀಕ ಹಂಡರಗಲ್ಲ, ಆಸೀಪ್ ತಾಳಿಕೋಟಿ, ಭಾಗವಹಿಸಿದ್ದರು.

# ಘಟಪ್ರಭಾ ರೈಲು ನಿಲ್ದಾಣದಲ್ಲಿ ನಾಗರಿಕರಿಂದ ಸ್ವಚ್ಛತಾ ಕಾರ್ಯ




**ಘಟಪ್ರಭಾ:** ಸ್ವಚ್ಛಭಾರತ ಅಭಿಯಾನದ ಅಂಗವಾಗಿ ಮತ್ತು ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಯವರ ಹುಟ್ಟುಹಬ್ಬ ಮತ್ತು ಮಹಾತ್ಮ ಗಾಂಧಿಯವರ ಹುಟ್ಟು ಹಬ್ಬದ ಅಂಗವಾಗಿ ಸೇವಾ ಪಾಕ್ಷಿಕ ಆಚರಣೆ ನಿಮಿತ್ತ ಘಟಪ್ರಭಾ ರೇಲ್ವೆ ನಿಲ್ದಾಣದಲ್ಲಿ ಸ್ವಚ್ಛತಾ ಕಾರ್ಯಕ್ರಮವನ್ನು ನಡೆಸಲಾಯಿತು. ಮತ್ತು ನಾಗರಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಮಾಡಲಾಯಿತು. ಈ ಕಾರ್ಯಕ್ರಮದಲ್ಲಿ ಹಿರಿಯ ನಾಗರಿಕರ ವೇದಿಕೆ, ರಾಷ್ಟ್ರೀಯ ಸ್ವಯಂಸೇವಕ ಸಂಘದ ಶ್ರೀ ರಾಮ ಪ್ರಭಾತ ಶಾಖೆ, ಜೈಂಟ್ಸ್ ಗ್ರೂಪ್ ಆಫ್ ಘಟಪ್ರಭಾದ ಸದಸ್ಯ ರು ಭಾಗವಹಿಸಿದ್ದರು

ಈ ಸಂದರ್ಭದಲ್ಲಿ ರಾಮಣ್ಣ ಹುಕ್ಕೇರಿ, ಸುರೇಶ ಪಾಟೀಲ, ಶ್ರೀಕಾಂತ ವಿ ಮಹಾಜನ ಅರ್ ಪಿ ಎಫ್ ಅಧಿಕಾರಿಗಳಾದ ತ್ರಿವಾಲ ಕುಮಾರ ಬಸವರಾಜ ಕಟ್ಟೀಮನಿ ಮುಂತಾದವರು ಮಾತನಾಡಿ ರೇಲ್ವೆ ನಿಲ್ದಾಣದಲ್ಲಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸ್ವಚ್ಛತೆಯನ್ನು ಕಾಪಾಡಲು ಎಲ್ಲಾ ನಾಗರೀಕರು ಸಹಕಾರ ನೀಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸುಪಪರಿಂಟೆಂಡೆಂಟ್ ವಿಕ್ರಮ್ ಮೀನಾ ಬಾಬುರಾವ್ ಚೌಧರಿ, ಹುಕಮಾರಾಮ್ ಚೌಧರಿ, ಸುಭಾಸ್ ದಡ್ಡೀಕರ, ಚಿನ್ನಪ್ಪ ಅಂಗಡಿ ಬಾಬುರಾವ್ ಚೌಧರಿ, ಹುಕಮಾರಾಮ್ ಚೌಧರಿ ಭೂಪಾಲ್ ಖೆಮಲಾಪುರೆ ಶ್ರೀಕಾಂತ ಕುಲಕರ್ಣಿ ಪ್ರಶಾಂತ ಶಿವಾಪುರ, ಮಲ್ಲಪ್ಪ ಹುಕ್ಕೇರಿ, ಗುರುಬಸಯ್ಯಾ ಕರ್ಪೂರಮಠ ರಾಜು ಕತ್ತಿ, ಕೆಂಚಪ್ಪಾ ನಾಯಿಕ , ಪುಂಡಲೀಕ ನಾಯಿಕ ಕೆಪಿ ಕಳ್ಳೀಮಠ, ಮಲ್ಲಿಕಾರ್ಜುನ ಮಾನಗಾವಿ ಕಾಳಪ್ಪ ರಾಜಣ್ಣವರ, ರಮೇಶ್ ಜಿರ್ಲಿ ಗಣುಸಿಂಗ ರಜಪೂತ ಮಾರುತಿ ವನಜೇರಿ ಆರ್ ಪಿ ಎಫ್ ಸಿಬ್ಬಂದಿಗಳಾದ , ಎಸ್ ಆಯ್ ಮಲ್ಲಿಕಾರ್ಜುನ ಇಂಗಳೆ ಬಸವರಾಜ ಕಟ್ಟೀಮನಿ ಧಾರು, ಮಾರುತಿ ಸೇರಿದಂತೆ ಘಟಪ್ರಭಾ ಹಾಗೂ ಸುತ್ತ ಮುತ್ತಲಿನ ನಾಗರಿಕರು ಭಾಗವಹಿಸಿದ್ದರು.

# ಬ್ಯಾಂಕ್-ಹಣಕಾಸು ಸಂಸ್ಥೆಗಳು ಅಗತ್ಯ ಭದ್ರತಾ ವ್ಯವಸ್ಥೆಗೆ ಸೂಚನೆ

**ವಿಜಯಪುರ:** ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲ ಖಾಸಗಿ ಮತ್ತು ರಾಷ್ಟ್ರೀಕೃತ ಬ್ಯಾಂಕ್‌ಗಳು ಹಾಗೂ ಹಣಕಾಸು ಸಂಸ್ಥೆಗಳಲ್ಲಿ ಭದ್ರತೆ ವ್ಯವಸ್ಥೆಗೆ ಸಂಬಂಧಿಸಿದಂತೆ ಎಲ್ಲ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಸೂಚನೆ ನೀಡಿದ್ದಾರೆ.

ಸೋಮವಾರ ನಗರದ ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ನಡೆದ ಬ್ಯಾಂಕ್ ಸುರಕ್ಷತೆ ಹಾಗೂ ಭದ್ರತಾ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದ ಅವರು, ಇತ್ತೀಚೆಗೆ ಜನರು ತಮ್ಮ ಹಣ, ಆಭಣರಗಳನ್ನು ಸುರಕ್ಷತೆ ದೃಷ್ಟಿಯಿಂದ ಬ್ಯಾಂಕಿನಲ್ಲಿಟ್ಟಿರುತ್ತಾರೆ. ಅವರ ವಸ್ತುಗಳ ಸುರಕ್ಷತೆ ಬ್ಯಾಂಕಿನ್ ಜವಾಬ್ದಾರಿಯಾಗಿರುತ್ತದೆ. ಆರ್‌ಬಿಐ ನಿಯಮದನ್ವಯ ಗ್ರಾಹಕರ ವಸ್ತುಗಳ ಸುರಕ್ಷತೆ ಒದಗಿಸುವುದು ಅತ್ಯವಶ್ಯಕ ಹಾಗೂ ಸುರಕ್ಷತೆ ಪ್ರಮುಖವಾಗಿದೆ. ಜನರ ವಿಶ್ವಾಸ, ನಂಬಿಕೆ ಉಳಿಸಿಕೊಳ್ಳಲು ಭದ್ರತಾ ವ್ಯವಸ್ಥೆ ಕುರಿತಂತೆ ನಿರ್ಲಕ್ಷ್ಯ ವಹಿಸದೆ ಎಸ್‌ಓಪಿ ಹಾಗೂ ಆರ್‌ಬಿಐ ನಿರ್ದೇಶನಗಳನ್ನು ಪಾಲಿಸಬೇಕು. ಜನರ ಹಣ-ಆಭರಣಗಳ ಸುರಕ್ಷತೆ ನಿಮ್ಮ ಜವಾಬ್ದಾರಿಯಾಗಿದ್ದು, ಬ್ಯಾಂಕ್ ವ್ಯವಸ್ಥಾಪಕರು ಅತ್ಯಂತ ಜಾಗರೂಕತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಅವರು ಹೇಳಿದರು.

ಇತ್ತೀಚೆಗೆ ಕಳ್ಳತನ, ದರೋಡೆಯಂತಹ ಪ್ರಕರಣಗಳು ನಡೆದಿದ್ದು, ಇಂತಹ ಪ್ರಕರಣಗಳು ಮರುಕಳಿಸದಂತೆ ಎಲ್ಲ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸಬೇಕು. ಎಲ್ಲ ಬ್ಯಾಂಕ್‌ಗಳು ಲಾಕರ್ ವ್ಯವಸ್ಥೆ, ಶಸ್ತ್ರಸಜ್ಜಿತ ಭದ್ರತಾ ಸಿಬ್ಬಂದಿಗಳ ನಿಯೋಜನೆ ಹಾಗೂ ಭದ್ರತಾ ಸಿಬ್ಬಂದಿಗಳಿಗೆ ತುರ್ತು



ಸಂದರ್ಭವನ್ನು ಸಮರ್ಥವಾಗಿ ಎದುರಿಸಲು ಸೂಕ್ತ ತರಬೇತಿ ನೀಡಬೇಕು. ಸಿಸಿಟಿವಿ ಅಳವಡಿಕೆ, ಸ್ಟ್ರಾಂಗ್ ರೂಂ ಮತ್ತು ನಗದು ವಾಹನಗಳಿಗೆ ಡಬಲ್ ಲಾಕಿಂಗ್-ಡಿಜಿಟಲ್ ಲಾಕ್ ವ್ಯವಸ್ಥೆ, ಬ್ಯಾಂಕ್ ಆವರಣ ಹಾಗೂ ಎಟಿಎಂ ಆವರಣಗಳಲ್ಲಿ ಸೂಕ್ತ ಬೆಳಕಿನ ವ್ಯವಸ್ಥೆ, ಹಣ ಮತ್ತು ಆಭರಣಗಳಿಗಾಗಿ ಸುರಕ್ಷಿತ ಸೇಫ್ ಲಾಕರ್ ವ್ಯವಸ್ಥೆ ಮತ್ತು ಬ್ಯಾಂಕ್‌ಗಳಲ್ಲಿ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆಯನ್ನು ಮತ್ತು 112 ನಂಬರ್‌ನ್ನು ಸಾರ್ವಜನಿಕರಿಗೆ ಕಾಣುವಂತೆ ಪ್ರದರ್ಶನ ಮಾಡಬೇಕು. ಗ್ರಾಹಕರಿಗೆ ಸೈಬರ್ ವಂಚನೆಯ ಕುರಿತು ಜಾಗೃತಿ ಮೂಡಿಸುವ ಫಲಕಗಳನ್ನು ಅಳವಡಿಸಬೇಕು. ದರೋಡೆ, ಕಳ್ಳತನದಂತಹ ಸೂಚನೆ ಕಂಡು ಬಂದಲ್ಲಿ ಕೂಡಲೇ ಸೈರನ್-ಅಲಾರಂ ಒತ್ತಿ ಪೊಲಿಸರಿಗೆ ಮಾಹಿತಿ ನೀಡುವ ವ್ಯವಸ್ಥೆಗೆ ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಬ್ಯಾಂಕ್ ನಿರ್ವಹಣೆಗಾಗಿ 22 ಅಂಶಗಳ ಚೆಕ್‌ಲಿಸ್ಟ್‌ನ್ನು ನೀಡಲಾಗಿದ್ದು, ಸಮರ್ಪಕವಾಗಿ ಅನುಸರಣೆ ಮಾಡಬೇಕು. ಈಗಾಗಲೇ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತ್ರೈಮಾಸಿಕ ಸಭೆಗಳನ್ನು ನಡೆಸಿ ಅಗತ್ಯ ಭದ್ರತಾ ವ್ಯವಸ್ಥೆಗಳ ಕುರಿತು ತಿಳಿಸಲಾಗಿದೆ. ಭದ್ರತಾ ವ್ಯವಸ್ಥೆ ಹೆಚ್ಚಿನ ಗಮನ ನೀಡಬೇಕು. ಯಾವುದೇ ತುರ್ತು ಪರಿಸ್ಥಿತಿ ಎದುರಾಗುವ ಸಂದರ್ಭದಲ್ಲಿ ಕೂಡಲೆ ಪೊಲೀಸ್ ಇಲಾಖೆಯನ್ನು ಸಂಪರ್ಕಿಸಿ, ಸಹಾಯ ಪಡೆದುಕೊಳ್ಳಿ, ಪೊಲೀಸ್ ಇಲಾಖೆ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದ್ದು, ಭದ್ರತೆಗೆ ಸದಾ ಸನ್ನದ್ಧವಾಗಿರಲಿದೆ ಎಂದು ಅವರು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಅವರು ಮಾತನಾಡಿ, ಜನರ ವಿಶ್ವಾಸವೇ ಬ್ಯಾಂಕಿನ ಬಂಡವಾಳವಾಗಿದ್ದು, ಈ ನಿಟ್ಟಿನಲ್ಲಿ ಆರ್‌ಬಿಐ ಸುರಕ್ಷತೆಯ ನಿಯಮಗಳನ್ನು ಪಾಲನೆ ಮಾಡಬೇಕು. ಬ್ಯಾಂಕಿನಲ್ಲಿರುವ ಲಾಕರ್ ವ್ಯವಸ್ಥೆ ಸುಭದ್ರವಾಗಿರಬೇಕು. ಶಸ್ತ್ರ ಸಜ್ಜಿತ ಭದ್ರತಾ ಸಿಬ್ಬಂದಿಗಳು ನೇಮಕಾತಿಯಲ್ಲಿ ನಿಯಮಗಳ ಪಾಲನೆ ಮಾಡಬೇಕು. ಬ್ಯಾಂಕಿನ ಸಮಯದೊಳಗೆ ವ್ಯವಹಾರ ಮುಗಿಸಬೇಕು. ಆಗಾಗ್ಗೆ ಸಿಸಿಟಿ ಕಾರ್ಯನಿರ್ವಹಣೆ ಕುರಿತು ಪರಿಶೀಲನೆ ನಡೆಸಬೇಕು. ಬ್ಯಾಂಕಿಗೆ ಸಂಬಂಧಿಸಿದ ಸುರಕ್ಷತೆ ಹಾಗೂ ಭದ್ರತೆ ಬಗ್ಗೆ ಪ್ರತಿ ಆರು ತಿಂಗಳಿಗೊಮ್ಮೆ ಅಣುಕುಪ್ರದರ್ಶನ ಏರ್ಪಡಿಸಿ ಜಾಗೃತಿ ಮೂಡಿಸುವ ಕಾರ್ಯ ಬ್ಯಾಂಕ್ ವ್ಯವಸ್ಥಾಪಕರ ನೇತೃತ್ವದಲ್ಲಿ ನಡೆಸಿ, ಸುರಕ್ಷತೆ ಕ್ರಮಗಳ ಕುರಿತು ಖಚಿತತೆಪಡಿಸಿಕೊಳ್ಳಬೇಕು. ಇದರಿಂದ ಜನರಿಗೂ ವಿಶ್ವಾಸ ದೊರೆಯುತ್ತದೆ. ಬ್ಯಾಂಕಿಂಗ್ ವಲಯದಲ್ಲಿ ನಂಬಿಕೆಯೇ ಬಂಡವಾಳ, ಭದ್ರತೆಯೇ ಜೀವಾಳ ಈ ನಿಟ್ಟಿನಲ್ಲಿ ಗ್ರಾಹಕ ಸ್ನೇಹಿಯಾಗಿ ಗ್ರಾಹಕರ ಹಣಕ್ಕೆ ಭದ್ರತೆ ಒದಗಿಸಬೇಕು. ಪೊಲೀಸ್ ಇಲಾಖೆ ವರ್ಷವಿಡಿ ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಲು ಕಾರ್ಯನಿರ್ವಹಿಸುತ್ತದೆ. ಜಿಲ್ಲೆಯಲ್ಲಿ ಇಂತಹ ಘಟನೆ ಮರುಕಳಿಸದಂತೆ ಪೊಲೀಸ್ ಇಲಾಖೆ ತಮ್ಮೊಂದಿಗೆ ಆಗಾಗ ಸಭೆ ನಡೆಸಿ ಅಗತ್ಯ ಸಲಹೆ ಸೂಚನೆಗಳನ್ನ ನೀಡಲಿದ್ದು, ತಾವೂ ಸಹ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಬ್ಯಾಂಕಿನ ಕಾರ್ಯ ನಿರ್ವಹಣೆ ಮಾಹಿತಿಯನ್ನು ನಿರ್ವಹಿಸಿ, ಜಿಲ್ಲಾಡಳಿತದೊಂದಿಗೆ ಕೈಜೋಡಿಸಿ, ಚೆಕ್ ಲಿಸ್ಟ್ ನೀಡಿದ್ದು ಈ ಅಂಶಗಳ ಕುರಿತು ಪಾಲನೆ ಮಾಡಬೇಕು.ಸಾರ್ವಜನಿಕರ ವಿಶ್ವಾಸ ಬ್ಯಾಂಕಿನಲ್ಲಿದ್ದು ಭದ್ರತಾ ಹಾಗೂ ಸುರಕ್ಷತೆಗೆ ಒತ್ತು ನೀಡಬೇಕು. ಯಾವುದೇ ಭದ್ರತಾ ಲೋಪ ಆಗದಂತೆ ಸುರಕ್ಷತಾ ಕ್ರಮವನ್ನು ಅನುಸರಿಸಬೇಕು ಎಂದು ಹೇಳಿದರು. ಸಭೆಯಲ್ಲಿ ವಿವಿಧ ಬ್ಯಾಂಕಿನ ಅಧಿಕಾರಿಗಳು ತಮ್ಮ ಅನಿಸಿಕೆ ಹೇಳಿದರು. ಸಭೆಯಲ್ಲಿ ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ಇಂಡಿ ಉಪ ವಿಭಾಗಾಧಿಕಾರಿ ಅನುರಾಧ ವಸ್ತ್ರದ, ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕ ಸಿದ್ದಯ್ಯ.ಬಿ, ಡಿವೈಎಸ್ಪಿ ಬಸವರಾಜ್ ಯಲಿಗಾರ, ಸೇರಿದಂತೆ ಎಲ್ಲ ಬ್ಯಾಂಕಿನ ವ್ಯವಸ್ಥಾಪಕರು ಉಪಸ್ಥಿತರಿದ್ದರು.

## ವಿವಿಧ ಸ್ನಾತಕೋತ್ತರ ವಿಭಾಗಗಳ ಪ್ರವೇಶಾತಿ ಅವಧಿ ವಿಸ್ತರಣೆ

**ಕೊಪ್ಪಳ:** ಕೊಪ್ಪಳ ವಿಶ್ವವಿದ್ಯಾಲಯದ 2025-26ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕೋತ್ತರ ವಿಭಾಗಗಳಿಗೆ ಪ್ರಥಮ ವರ್ಷದ ಪ್ರವೇಶಾತಿಯ ಅವಧಿಯನ್ನು ವಿಸ್ತರಿಸಲಾಗಿದ್ದು, ಆಸಕ್ತ ವಿದ್ಯಾರ್ಥಿಗಳು ಸೆಪ್ಟೆಂಬರ್ 27 ರವರೆಗೆ ಅರ್ಜಿ ಸಲ್ಲಿಸಿ, ಸೆ. 29 ರಂದು ಪ್ರವೇಶಾತಿಯನ್ನು ಪಡೆಯಬಹುದು.

ಕೊಪ್ಪಳ ವಿಶ್ವವಿದ್ಯಾಲಯದ ಮುಖ್ಯ ಆವರಣ, ಸ್ನಾತಕೋತ್ತರ ಕೇಂದ್ರ, ಯಲಬುರ್ಗಾ ಮತ್ತು ಗಂಗಾವತಿ ಹಾಗೂ ಕೊಪ್ಪಳ ವಿಶ್ವವಿದ್ಯಾಲಯದ ಸಂಯೋಜಿತ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನೇತರ ಮಹಾವಿದ್ಯಾಲಯಗಳಲ್ಲಿನ 2025-26ನೇ ಸಾಲಿನ ಎಂ.ಎ. ಕನ್ನಡ, ಇಂಗ್ಲೀಷ್, ಇತಿಹಾಸ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಸಮಾಜಶಾಸ್ತ್ರ, ಪ್ರದರ್ಶನ ಕಲೆ, ಮಹಿಳಾ ಅಧ್ಯಯನ ವಿಭಾಗ, ಪತ್ರಿಕೋದ್ಯಮ, ಎಂ.ಕಾಂ., ಎಂ.ಎಸ್ಸಿ ಭೌತಶಾಸ್ತ್ರ, ರಸಾಯನಶಾಸ್ತ್ರ, ಭೂಗೋಳಶಾಸ್ತ್ರ ಮತ್ತು ಗಣಿತಶಾಸ್ತ್ರ ಕೋರ್ಸುಗಳಿಗೆ UUCMS https://uucms.karnataka.gov.in/ ತಂತ್ರಾಂಶದ ಮುಖಾಂತರ ಅರ್ಜಿ ಸಲ್ಲಿಸಬೇಕು.

ಅರ್ಜಿ ಶುಲ್ಕಗಳ ವಿವರ ಹಾಗೂ ಅರ್ಜಿಗಳನ್ನು ಸಲ್ಲಿಸಲು ಪಾಲಿಸಬೇಕಾದ ಮಾನದಂಡಗಳಿಗೆ ಸಂಬಂಧಿಸಿದ ಮಾಹಿತಿಯನ್ನು ವಿಶ್ವವಿದ್ಯಾಲಯದ ಜಾಲತಾಣ https://www.koppaluniversity.ac.in ಗೆ ಭೇಟಿ ನೀಡಿ ಅಥವಾ ಪ್ರವೇಶಾತಿ ಪಡೆಯಲಿಚ್ಛಿಸುವ ವಿದ್ಯಾರ್ಥಿಗಳು ಕೊಪ್ಪಳ ವಿಶ್ವವಿದ್ಯಾಲಯದ ಮುಖ್ಯ ಆವರಣ, 4ನೇ ಮಹಡಿ, ಸರ್ಕಾರಿ ತಾಂತ್ರಿಕ ಮಹಾವಿದ್ಯಾಲಯ, ತಳಕಲ್, ಸ್ನಾತಕೋತ್ತರ ಕೇಂದ್ರ, ಯಲಬುರ್ಗಾ ಮತ್ತು ಗಂಗಾವತಿ ಹಾಗೂ ಸಂಯೋಜಿತ ಮಹಾವಿದ್ಯಾಲಯಗಳಿಗೆ ನೇರವಾಗಿ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಕೊಪ್ಪಳದ ಪ್ರಭಾರ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಕೃತಿಯ ರಕ್ಷಣೆಗೆ ಒತ್ತಾಯ

**ವರದಿ ಲಿಂಗರಾಜ ಬೆಳ್ಳೆನ್ನವರ**

**ಜಮಖಂಡಿ:** ನಗರದ ಎಸ್ ಆರ್ ಕ್ಲಬ್ ಸುತ್ತಲೂ ಇರುವ ಹಲವಾರು ಹಳೆಯ ಮರಗಳು ಶತಮಾನಗಳ ಇತಿಹಾಸವನ್ನು ಹೊಂದಿವೆ. ಈ ಮರಗಳು ಕೇವಲ ಶಾಖೆ-ಹಣ್ಣುಗಳಲ್ಲ, ಅವು ನಗರದ ಹವಾಮಾನ ಸಮತೋಲನ, ಜಲಚಕ್ರ, ಹಾಗೂ ಜೀವಜಾತಿಗಳ ಆಶ್ರಯ ಸ್ಥಳಗಳಾಗಿ ಕಾರ್ಯನಿರ್ವಹಿಸುತ್ತಿವೆ. ಆದರೆ ನಗರಾಭಿವೃದ್ಧಿ ಯೋಜನೆಯ ಭಾಗವಾಗಿ ಹಲವಾರು ಹಳೆಯ ಹಾಗೂ ಭವ್ಯ ಗಿಡಗಳನ್ನು ತೆರವುಗೊಳಿಸುವ ಪ್ರಕ್ರಿಯೆ ಆರಂಭವಾಗಿದೆ. ಈ ಕ್ರಮವು ಸ್ಥಳೀಯ ಪರಿಸರ ಪ್ರೇಮಿಗಳಲ್ಲಿ ಆತಂಕವಾಗಿದೆ ಮರಗಳನ್ನು ಇಟ್ಟುಕೊಂಡೇ ನಗರ ಅಭಿವೃದ್ಧಿ ಸಾಧ್ಯ. ನಾವು ಅಭಿವೃದ್ಧಿಗೆ ವಿರೋಧಿಗಳಲ್ಲ. ಆದರೆ, ಗಿಡಮರಗಳ ಸಂರಕ್ಷಣೆಯೊಂದಿಗೆ ಸಮತೋಲನದ ಅಭಿವೃದ್ಧಿ ಅಗತ್ಯ ಎಂದು ಪರಿಸರ ಪ್ರೇಮಿಗಳು ಒತ್ತಾಯ

ತೆರವುಗೊಳಿಸುವಿಕೆಯನ್ನು ತಾತ್ಕಾಲಿಕವಾಗಿ ನಿಲ್ಲಿಸಿ: ಮುಂದಿನ ಪೀಳಿಗೆಗೆ ಜೀವವಾತಾವರಣ ಉಳಿಸೋಣ ಈ ಗಿಡಗಳ ತೆರವುಗೊಳಿಸುವಿಕೆಯನ್ನು ತಾತ್ಕಾಲಿಕವಾಗಿ ನಿಲ್ಲಿಸಿ, ಪರ್ಯಾಯ ಮಾರ್ಗಗಳನ್ನು ಹುಡುಕುವಂತೆ ನಗರ ಆಡಳಿತಕ್ಕೆ ಮನವಿ. ಎಷ್ಟು ಸಾಧ್ಯವೋ ಅಷ್ಟು ಗಿಡಮರಗಳನ್ನು ಉಳಿಸಿ, ಮುಂದಿನ ಪೀಳಿಗೆಗೆ ಜೀವವಾತಾವರಣವನ್ನು ಉಳಿಸೋಣ



ಜಮಖಂಡಿಯ ಜನತೆ ಅಭಿವೃದ್ಧಿಯ ಪರವಾಗಿದ್ದಾರೆ. ಆದರೆ, ಅವರು ಪ್ರಕೃತಿಯ ರಕ್ಷಣೆಯೂ ಸಮಾನವಾಗಿ ಮುಖ್ಯವೆಂದು ನಂಬಿದ್ದಾರೆ. ನಗರಾಭಿವೃದ್ಧಿಯ ಹೆಸರಿನಲ್ಲಿ ಪರಿಸರ ನಾಶವಾಗದಂತೆ, ಸಮತೋಲನದ ಮಾರ್ಗವನ್ನು ಆಯ್ಕೆ ಮಾಡಬೇಕು ಎಂದರು

**-ಪ್ರದೀಪ್ ಮೇಟಗುಡ್ಡ**
**ಇಂಚಗೇರಿ ಸಂಪ್ರದಾಯ ಗುರುಬಂಧುಗಳು.**

# ಗಾಂಧಿ, ಶಾಸ್ತ್ರೀ ಜಯಂತಿ ಅರ್ಥಪೂರ್ಣ ಆಚರಣೆ

**ಹಾವೇರಿ:** ಅಕ್ಟೋಬರ್ 2 ರಂದು ಮಹಾತ್ಮಗಾಂಧಿ ಹಾಗೂ ಲಾಲ್ ಬಹದ್ದೂರ ಶಾಸ್ತ್ರೀ ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಡಾ.ನಾಗರಾಜ ಅವರು ವಿವಿಧ ಇಲಾಖಾ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಅಪರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ಗಾಂಧಿ ಜಯಂತಿ ಹಾಗೂ ಲಾಲ್ ಬಹದ್ದೂರ ಶಾಸ್ತ್ರೀ ಜಯಂತಿ ಆಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗಾಂಧಿ ಜಯಂತಿ ಅಂಗವಾಗಿ ಈ ವರ್ಷ ಎರಡು ದಿನ ಶ್ರಮದಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು, ಜಯಂತಿ ಕಾರ್ಯಕ್ರಮದಲ್ಲಿ ಎಲ್ಲ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು ಎಂದು ತಿಳಿಸಿದರು.

ಸೆಪ್ಟೆಂಬರ 29 ರಂದು ಎಲ್ಲ ಕಚೇರಿಗಳ ಸ್ವಚ್ಛತಾ ಕಾರ್ಯಗಳನ್ನು ಕೈಗೊಳ್ಳಬೇಕು ಹಾಗೂ ಸೆ. 30 ರಂದು ನಗರದ ವಾರ್ಡ್‌ವಾರು ಸಾಮೂಹಿಕ ಶ್ರಮದಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು ಹಾಗೂ ಪ್ರತಿ ವಾರ್ಡ್‌ಗೆ ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗುವುದು ಎಂದರು.

ಅಕ್ಟೋಬರ್ 2ರ ಗಾಂಧಿ ಜಯಂತಿ ದಿನ ಮುಂಜಾನೆ ಶ್ರಮದಾನ, ನಂತರ ಗಾಂಧಿ ವೃತ್ತದಲ್ಲಿರುವ ಮಹಾತ್ಮಗಾಂಧಿ ಪುತ್ಥಳಿಗೆ ಮಾಲಾರ್ಪಣೆ, ಸದ್ಭಾವನಾ ನಡಿಗೆ ಹಾಗೂ ವೇದಿಕೆ ಕಾರ್ಯಕ್ರಮ, ಸರ್ವಧರ್ಮ ಪ್ರಾರ್ಥನೆ, ಗಾಂಧಿ, ಶಾಸ್ತ್ರೀಜಿ ಅವರ ವಿಚಾರ ಧಾರೆ ಕುರಿತು ಉಪನ್ಯಾಸ, ಗಾಂಧಿ ಪ್ರೀಯ ಗೀತೆಗಳ ಗಾಯನ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಡೆಸುವ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆ ವಿಜೇತರಿಗೆ ನಗದು ಬಹುಮಾನ ವಿತರಣೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ನಿರ್ಧರಿಸಲಾಯಿತು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಹಿರೇಮಠ, ಜಿಲ್ಲಾ ನಿರ್ಮಿತಿ ಕೇಂದ್ರದ ತಿಮ್ಮೇಶ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ದೂರು, ಆಕ್ಷೇಪಣೆಗೆ ಅವಕಾಶ

**ಹಾವೇರಿ:** ಕರ್ನಾಟಕ ಹಿಂದುಳಿದ ವರ್ಗಗಳ ಆಯೋಗವು ಕೈಗೊಂಡಿರುವ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ-2025ಕ್ಕೆ ಸಂಬಂಧಿಸಿದಂತೆ ಹಾವೇರಿ ಜಿಲ್ಲೆಯ ಸಾರ್ವಜನಿಕರು ಸಮೀಕ್ಷೆ ಕುರಿತಂತೆ ಮಾಹಿತಿ, ದೂರು, ಆಕ್ಷೇಪಣೆ ಹಾಗೂ ಸಲಹೆಗಳಿಗಾಗಿ ಸಹಾಯವಾಣಿ ಸಂಖ್ಯೆ 08375-249102 ಅಥವಾ ಇ-ಮೇಲ್ ಸಂಪರ್ಕಿಸಬಹುದೆಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಸಮನ್ವಯ ಸಮಿತಿ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹುಬ್ಬಳ್ಳಿ ಧಾರವಾಡ ಸ್ಥಳೀಯ ಯೋಜನಾ ಪ್ರದೇಶಕ್ಕೆ 46 ಹಳ್ಳಿಗಳ ಹೊಸದಾಗಿ ಸೇರ್ಪಡೆ

# ಸುಸಜ್ಜಿತ ಮಹಾನಗರ, ಹಳ್ಳಿಗಳ ಅಭಿವೃದ್ಧಿಗೆ ಆದ್ಯತೆ

**ಹುಬ್ಬಳ್ಳಿ:** ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ( ಎಲ್.ಪಿ.ಎ) ಹುಬ್ಬಳ್ಳಿ ತಾಲ್ಲೂಕಿನ 13 ಗ್ರಾಮಗಳು, ಕಲಘಟಗಿ ತಾಲ್ಲೂಕಿನ 6 ಗ್ರಾಮಗಳು ಮತ್ತು ಧಾರವಾಡ ತಾಲ್ಲೂಕಿನ 27 ಗ್ರಾಮಗಳು ಸೇರಿದಂತೆ ಹೊಸದಾಗಿ 46 ಹಳ್ಳಿಗಳನ್ನು ಸೇರ್ಪಡೆ ಮಾಡಿ, ನಗರಾಭಿವೃದ್ಧಿ ಇಲಾಖೆ ಅಧಿಸೂಚನೆ ಹೊರಡಿಸಿದೆ. ಈ ಎಲ್ಲ ಹಳ್ಳಿಗಳನ್ನು ನಿಯಮಾನುಸಾರ ಅಭಿವೃದ್ಧಿ ಪಡಿಸಿ, ಅಗತ್ಯ ಸೌಕರ್ಯಗಳನ್ನು ನಿರ್ಮಿಸಿ, ಅವಳಿ ನಗರದ ನಾಗರಿಕರಿಗೆ ಸುಸಜ್ಜಿತ ಬಡಾವಣೆ, ನಿವೇಶನ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶಾಕೀರ ಸನದಿ ಅವರು ಹೇಳಿದರು. ನವನಗರದ ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಸಭಾಂಗಣದಲ್ಲಿ, ಪತ್ರಿಕಾಗೋಷ್ಠಿ ಜರುಗಿಸಿ, ಮಾಧ್ಯಮ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಿದರು.

ಈಗಾಗಲೇ ಹುಬ್ಬಳ್ಳಿ ಧಾರವಾಡ ಸ್ಥಳೀಯ ಯೋಜನಾ ಪ್ರದೇಶ ವ್ಯಾಪ್ತಿಯಲ್ಲಿ ಹುಬ್ಬಳ್ಳಿ ತಾಲ್ಲೂಕಿನ 21 ಗ್ರಾಮಗಳು ಹಾಗೂ ಧಾರವಾಡ ತಾಲ್ಲೂಕಿನ 25 ಗ್ರಾಮಗಳು ಸೇರಿದಂತೆ ಒಟ್ಟು 46 ಗ್ರಾಮಗಳನ್ನು ಸೇರ್ಪಡೆ ಮಾಡಲಾಗಿತ್ತು. ಈಗ ಪ್ರಸ್ತುತ ಸರಕಾರದ ಅಧಿಸೂಚನೆ ಪ್ರಕಾರ ಪ್ರಾಧಿಕಾರದ ವ್ಯಾಪ್ತಿಗೆ ಹೊಸದಾಗಿ 46 ಗ್ರಾಮಗಳನ್ನು ಸೇರ್ಪಡೆ ಮಾಡಲಾಗಿದೆ.

ಒಟ್ಟಾರೆಯಾಗಿ 92 ಗ್ರಾಮಗಳು ಸ್ಥಳೀಯ ಯೋಜನಾ ಪ್ರದೇಶ ವ್ಯಾಪ್ತಿಗೆ ಸೇರ್ಪಡೆಯಾಗಿವೆ ಎಂದು ಅವರು ತಿಳಿಸಿದರು. ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಒಳಪಡುವ ಪ್ರತಿ ಹಳ್ಳಿಗೂ ರಿಂಗ್ ರೋಡ್ ನಿರ್ಮಿಸಲಾಗುತ್ತದೆ. ಅಭಿವೃದ್ಧಿಗೆ ಪೂರಕವಾಗುವ ನಿಟ್ಟಿನಲ್ಲಿ ಮಾಸ್ಟರ್ ಪ್ಲಾನ್ ಸಹ ಹಾಕಿಕೊಳ್ಳಲಾಗಿದೆ. ಇವುಗಳ ಜೊತೆಗೆ ಹುಬ್ಬಳ್ಳಿ ಮತ್ತು ಧಾರವಾಡ ನಗರದ ಸುತ್ತಮುತ್ತಲಿನ ಹಳ್ಳಿಗಳು ಸಹ ಅಭಿವೃದ್ಧಿ ಆಗಬೇಕೆಂಬ ಸದುದ್ದೇಶ ಹೊಂದಲಾಗಿದೆ.

ನಾಗರಿಕರಿಗೆ ಕಡಿಮೆ ಬೆಲೆಯಲ್ಲಿ ನಿವೇಶನಗಳು ದೊರೆಯುವಂತೆ ಆಗಬೇಕು ಎಂದು ಅಧ್ಯಕ್ಷ ಶಕೀರ ಸನದಿ ಅವರು ತಿಳಿಸಿದರು. ಸ್ಥಳೀಯ ಯೋಜನಾ ಪ್ರದೇಶದಲ್ಲಿ ಕೈಗಾರಿಕೆ ಮತ್ತು ನಗರ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಈಗಾಗಲೇ ಗುಜರಾತ್, ಕಟಕ, ಭುವನೇಶ್ವರ, ಚಂಡಿಗಡ, ನೊಯ್ಡಾ ನಗರಗಳಿಗೆ ತೆರಳಿ, ನಗರ ಮೂಲಸೌಕರ್ಯ, ಬಡಾವಣೆ ನಿರ್ಮಾಣದ ಬಗ್ಗೆ ಅಧ್ಯಯನ ಕೈಗೊಳ್ಳಲಾಗಿದೆ. ಈ ಕುರಿತು ನಮ್ಮಲ್ಲಿಯೂ ಕ್ರಮವಹಿಸಲಾಗುವುದು ಎಂದು ಅವರು ಹೇಳಿದರು. ಅವಳಿ ನಗರದಲ್ಲಿ ನಿಯಮಬಾಹಿರವಾಗಿ ಅಭಿವೃದ್ಧಿಪಡಿಸಿದ್ದ ಸುಮಾರು 176 ಅನಧಿಕೃತ ಲೇಔಟ್‌ಗಳಿಗೆ ನೋಟೀಸ್ ನೀಡಲಾಗಿದೆ. ಅಕ್ರಮ ಲೇಔಟ್ ನಿರ್ಮಾಣ ತಡೆಯಲು ಕ್ರಮ ವಹಿಸಲಾಗುವುದು. ಕುಸುಗಲ್ ಗ್ರಾಮದಿಂದ ಧಾರವಾಡ ಹೈಕೋರ್ಟ್ ವರೆಗೆ ಹೊರ ವರ್ತುಲ್ ರಸ್ತೆ ( ಔಟರ್ ರಿಂಗ್ ರೋಡ್ ) ನಿರ್ಮಿಸಲು ಡಿಪಿಆರ್ ಸಿದ್ಧಪಡಿಸಲಾಗಿದೆ ಎಂದು ಶಕೀರ ಸನದಿ ತಿಳಿಸಿದರು.

ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಸಂತೋಷಕುಮಾರ ಬಿರಾದಾರ ಅವರು ಮಾತನಾಡಿ, ಈ ಹಿಂದೆ ಪ್ರಾಧಿಕಾರ ವ್ಯಾಪ್ತಿಗೆ ಒಳಪಟ್ಟಿರುವ ಹಳ್ಳಿಗಳಲ್ಲಿ ಸುಸಜ್ಜಿತ ಬಡಾವಣೆಗಳ ಅಭಿವೃದ್ಧಿಗೆ ರೂಪಿಸಿದ್ದ, ಮಾಸ್ಟರ್ ಪ್ಲಾನ್ ಅನ್ನು ಸಮಗ್ರವಾಗಿ ಪರಿಷ್ಕರಿಸಿ, ಸರಕಾರದ ಅನುಮೋದನೆಗೆ ಕಳುಹಿಸಲಾಗಿದೆ. ಮಾಸ್ಟರ್ ಪ್ಲಾನ್ ಅನ್ನು ಈಗಿನ ಅಗತ್ಯಕ್ಕೆ ತಕ್ಕಂತೆ ಸರಿಪಡಿಸಿಕೊಳ್ಳಲಾಗುತ್ತಿದೆ.

ಸ್ಥಳೀಯ ಯೋಜನಾ ಪ್ರದೇಶದ ಹಳ್ಳಿಗಳ ರಸ್ತೆಗಳನ್ನು 15 ರಿಂದ 18 ಮೀಟರ್ ವರೆಗೆ ಅಗಲೀಕರಣ ಮಾಡಲಾಗುವುದು. ಈ ಮೊದಲು ಸರ್ಕಾರದ ಜಾಗದಲ್ಲಿ ಲೇಔಟ್ ನಿರ್ಮಿಸಲಾಗುತ್ತಿತ್ತು. ಆದರೆ ಈಗ ಸರ್ಕಾರದ ಜಾಗಗಳು ಸಿಗುತ್ತಿಲ್ಲ. ಇದನ್ನು ಬಳಸಿಕೊಂಡು, ಖಾಸಗಿಯವರು ಜನರಿಗೆ ಹಲವಾರು ಆಸೆ ಆಮಿಷಗಳನ್ನು ತೋರಿಸಿ ಸೈಟ್ ಖರೀದಿಸುವಂತೆ ಮನವೊಲಿಸುತ್ತಾರೆ. ನಿಯಮಾನುಸಾರ ಲೇಔಟ್ ಪೂರ್ಣಗೊಳಿಸದೆ, ಅಪೂರ್ಣ ಕಾಮಗಾರಿ ಮಾಡಿ, ನಾಗರಿಕರಿಗೆ ಹಾನಿ ಉಂಟು ಮಾಡುತ್ತಿದ್ದಾರೆ. ಇದನ್ನು ತಪ್ಪಿಸಲು ಕಾನೂನಾತ್ಮಕವಾಗಿ ಕ್ರಮಕೈಗೊಳ್ಳಲಾಗುತ್ತದೆ. ಮುಂದಿನ ದಿನಗಳಲ್ಲಿ ನಾಗರಿಕರಿಗೆ ಉತ್ತಮ ಬೆಲೆಯಲ್ಲಿ ಮತ್ತು ಮೂಲಸೌಕರ್ಯ ಹೊಂದಿರುವ ನಿವೇಶನಗಳನ್ನು ಅಭಿವೃದ್ಧಿಪಡಿಸಿ, ಪ್ರಾಧಿಕಾರದಿಂದ ಪೂರೈಸಲಾಗುತ್ತದೆ ಎಂದು ವಿವರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಫೈಜ್ ಅಹ್ಮದ್ ಕಲಘಟಗಿ, ಮಂಜುನಾಥ ಎಲ್.ಭೋವಿ, ವಿಜಯಾನಂದ ಶೆಟ್ಟಿ, ಸುನೀತಾ ಹುರಕಡ್ಲಿ, ನಗರ ಯೋಜಕ ಸದಸ್ಯ ಮಹಾಂತೇಶ ಪೂಜಾರ, ಪ್ರಾಧಿಕಾರದ ಇಂಜನೀಯರಗಳಾದ ಬಸವರಾಜ ದೇವಗಿರಿ, ಮುಕುಂದ ಜೋಶಿ ಪ್ರಾಧಿಕಾರದ ಕಾರ್ಯದರ್ಶಿ ನರಸಪ್ಪನವರ, ವ್ಯವಸ್ಥಾಪಕ ಮಂಜುನಾಥ ಗೂಳಪ್ಪನವರ ಸೇರಿದಂತೆ ಇತರರು ಉಪಸ್ಥಿತರಿದ್ದರು.

**ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರದೇಶಕ್ಕೆ ಸೇರ್ಪಡೆ ಆದ ಹೊಸ ಗ್ರಾಮಗಳು.**

**ಹುಬ್ಬಳ್ಳಿ ತಾಲೂಕು:*** ರೇವಡಿಹಾಳ, ದೇವರಗುಡಿಹಾಳ ಪರಸಾಪೂರ, ಬುಡ್ನಾಳ, ಮಾವನೂರ, ಬುಡರಸಿಂಗಿ, ಸಿದ್ದಾಪೂರ, ಮುರಾರಹಳ್ಳಿ, ಅದರಗುಂಚಿ, ಹಳ್ಯಾಳ, ಶಹರ ವೀರಾಪೂರ, ಕುಸುಗಲ್ಲ, ಸುಳ್ಳ ಗ್ರಾಮಗಳು. **ಕಲಘಟಗಿ ತಾಲೂಕು:** ದೇವಲಿಂಗಿಕೊಪ್ಪ, ದಾಸನೂರ, ದುಮ್ಮವಾಡ, ಕುರಣಕೊಪ್ಪ, ಕಾಡಣಕೊಪ್ಪ, ಚಳಮಟ್ಟಿ ಗ್ರಾಮಗಳು. **ಧಾರವಾಡ ತಾಲೂಕು:** ಕೋಟೂರ, ಅಗಸನಹಳ್ಳಿ, ಶಿಂಗನಹಳ್ಳಿ, ಹೆಗ್ಗೇರಿ, ವರವನಾಗವಾಲಿ, ಚಿಕ್ಕಮಲ್ಲಿಗವಾಡ, ದಡ್ಡಿಕಮಲಾಪೂರ, ಮಂಡಿಹಾಳ, ಮುಗದ, ಕ್ಯಾರಕೊಪ್ಪ, ಜಂಜಲ (ಜುಂಜಲಕಟ್ಟಿ), ಬಾಡ, ಬೆನಕನಕಟ್ಟಿ, ಮನಗುಂಡಿ, ನಾಯಿಕನಹುಲಿಕಟ್ಟಿ, ಶಿವಳ್ಳಿ, ಮಾರಡಗಿ, ನವಲೂರ ತಡೆಬಿಳ, ಅಲ್ಲಾಪೂರ, ಗೊಂಗಡಿಕೊಪ್ಪ, ಗೋವನಕೊಪ್ಪ, ದಂಡಿಕೊಪ್ಪ, ಕಮಲಾಪೂರ, ದಾಸನಕೊಪ್ಪ, ದೇವಗಿರಿ ಎಂ ನರೇಂದ್ರ, ಗೋವನಕೊಪ್ಪ ಎಂ ನರೇಂದ್ರ ಮತ್ತು ನೀರಲಕಟ್ಟಿ ಗ್ರಾಮಗಳು.

# ಮಕ್ಕಳ ಸಹಾಯವಾಣಿ 1098 ಬರೆಯಲು ಸೂಚನೆ

**ಬಾಗಲಕೋಟೆ:** ರಾಜ್ಯದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಸೇವಾ ಸಂಸ್ಥೆಗಳ ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ನ್ನು ಕಡ್ಡಾಯವಾಗಿ ಬರೆಸಲು ಮುಖ್ಯ ಕಾರ್ಯದರ್ಶಿಗಳು ಸೂಚನೆ ನೀಡಿದ್ದಾರೆ.

ಮಕ್ಕಳ ಹಕ್ಕುಗಳ ರಕ್ಷಣೆ ಇಂದಿನ ತುರ್ತು ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಅನುಷ್ಠಾನಗೊಂಡಿರುವ ಮಿಷನ್ ವಾತ್ಸಲ್ಯ ಯೋಜನೆಯು ಮಕ್ಕಳ ಅಭಿವೃದ್ಧಿ ಮತ್ತು ರಕ್ಷಣೆಯ ಆದ್ಯತೆಯನ್ನು ಸಾಧಿಸುವ ಒಂದು ಮಾರ್ಗವಾಗಿದೆ. ಸಂಕಷ್ಟದಲ್ಲಿನ ಹಾಗೂ ಸವಾಲಿನಲ್ಲಿರುವ ಮಕ್ಕಳ ಹಿತರಕ್ಷಣೆಗೆ ಹೆಚ್ಚು ಒತ್ತು ನೀಡುತ್ತಿದೆ. ಇಂತಹ ಮಕ್ಕಳ ಗುರುತಿಸುವಿಕೆ, ಸಂಕಷ್ಟ ಸ್ಥಿತಿಯಲ್ಲಿ ಮಾಹಿತಿ ಹಂಚಿಕೊಳ್ಳಲು ಹಾಗೂ ಪುನರ್ ವಸತಿ ಸೇವೆ ಕಲ್ಪಿಸುವಲ್ಲಿ ಮಕ್ಕಳ ಸಹಾಯವಾಣಿ 1098 ಮಹತ್ವದ ಪಾತ್ರ ವಹಿಸುತ್ತದೆ.

ಈ ಸಂಖ್ಯೆಯನ್ನು ವ್ಯಾಪಕವಾಗಿ ಪ್ರಚಾರ ಮಾಡಿದಲ್ಲಿ ಬಾಲ್ಯವಿವಾಹ, ಬಾಲಕಾರ್ಮಿಕತೆ ಸಂಕಷ್ಟದಲ್ಲಿನ ಮಕ್ಕಳ ರಕ್ಷಣೆ ಸೇರಿದಂತೆ ವಿವಿಧ ರೀತಿಯ ಮಕ್ಕಳ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಸಾಧ್ಯವಾಗಲಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ಮುಖ್ಯ ಕಾರ್ಯದರ್ಶಿಗಳು ಸೂಚನೆ ನೀಡಿದ್ದಾರೆ. ಈಗಾಗಲೇ ಕೆಲವು ಇಲಾಖೆಗಳು ಈ ಕುರಿತು ಕ್ರಮವಹಿಸಿವೆ.

ಕೆಲವು ಇಲಾಖೆಗಳಲ್ಲಿ ಈ ಬಗ್ಗೆ ನಿರ್ದೇಶನವಿಲ್ಲ ಎಂಬ ಗೊಂದಲಗಳಿಂದ ಶಾಶ್ವತ ಫಲಕಗಳಲ್ಲಿ ಪ್ರದರ್ಶಿಸದೇ ಇರುವುದು ತಿಳಿದು ಬಂದಿದ್ದು, ಮಕ್ಕಳ ಸಹಾಯವಾಣಿ ಸಂಖ್ಯೆಯನ್ನು ಶಾಶ್ವತ ಫಲಕದಲ್ಲಿ ಪ್ರದರ್ಶಿಸದೆ ಇರುವ ಇಲಾಖೆಗಳು ಯಾವುದೇ ಗೊಂದಲಗಳಿಗೆ ಆಸ್ಪದ ಕೊಡದೇ ತಕ್ಷಣ ಕ್ರಮಕೈಗೊಂಡು ಮಕ್ಕಳ ಸಹಾಯವಾಣಿ ಸಂಖ್ಯೆ 1098 ನ್ನು ತಮ್ಮ ಇಲಾಖೆಯ ಶಾಶ್ವತ ಫಲಕದಲ್ಲಿ ಪ್ರದರ್ಶಿಸುವಂತೆ ಮುಖ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

## ಯುವಜನೋತ್ಸವ: ಭಾಗವಹಿಸಲು ಸೂಚನೆ

**ಕೊಪ್ಪಳ:** 2025-26ನೇ ಸಾಲಿನಲ್ಲಿ ತಾತ್ಕಾಲಿಕ ದಿನಾಂಕ ಅಕ್ಟೋಬರ್ 15 ರಂದು ಕೊಪ್ಪಳ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕಾಗಿದ್ದು, 15 ರಿಂದ 29 ವರ್ಷ ವಯೋಮಾನದೊಳಗಿನ ಆಸಕ್ತ ಯುವಜನರು ಭಾಗವಹಿಸಬಹುದು.

ಕೇಂದ್ರ ಸರ್ಕಾರದ ಯುವ ವ್ಯವಹಾರ ಮತ್ತು ಕ್ರೀಡಾ ಮಂತ್ರಾಲಯವು ರಾಷ್ಟ್ರ ಮಟ್ಟದ ಯುವಜನೋತ್ಸವವನ್ನು ಪ್ರತಿ ವರ್ಷ ಜನವರಿ 12 ರಿಂದ 16ರ ವರೆಗೆ ಆಯೋಜಿಸುತ್ತದೆ. ಈ ಕಾರ್ಯಕ್ರಮಕ್ಕೆ ಕರ್ನಾಟಕ ವಿಜೇತ ಸ್ಪರ್ಧಾಳುಗಳ ತಂಡವನ್ನು ಕಳುಹಿಸುವ ಸಲುವಾಗಿ ಜಿಲ್ಲಾ ಮತ್ತು ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಸಂಘಟಿಸಬೇಕಾಗಿದ್ದು, ಕೇಂದ್ರ ಸರ್ಕಾರದ ಅರೆ ಸರ್ಕಾರಿ ಪತ್ರದನ್ವಯ ಮತ್ತು Concept Note for NYF-2026 ರಲ್ಲಿನ ಮಾರ್ಗಸೂಚಿಗಳಂತೆ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತದೆ.

ಸ್ಪರ್ಧೆಗಳು ಹಾಗೂ ಇತರೆ ಮಾಹಿತಿಗಾಗಿ ಬಿ. ಕೀರ್ತಿವರ್ಧನ ದ್ವಿ.ದ.ಸ-7676343554 ಹಾಗೂ ಕಛೇರಿಯ ದೂರವಾಣಿ ಸಂಖ್ಯೆ: 08539-230121 ಇವರಿಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 2ಕೋಟಿ ವೆಚ್ಚದ ಅಂಬೇಡ್ಕರ್ ಭವನದ ಕಾಮಗಾರಿಗೆ ಭೂಮಿಪೂಜೆ

**ಸಿಂದಗಿ:** ಸರಕಾರ ಬಿಡುಗಡೆಗೊಳಿಸಿದ ಸಾರ್ವಜನಿಕ ಹಿತಾಸಕ್ತಿಯ ಹಣವನ್ನು ಸದ್ಬಳಕೆ ಮಾಡಿಕೊಂಡಾಗ ಮಾತ್ರ ಸರಿಯಾದ ರೀತಿಯಲ್ಲಿ ಅಭಿವೃದ್ಧಿಯಾಗಲು ಸಾಧ್ಯ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ಪಟ್ಟಣದ ಅಂಬೇಡ್ಕರ್ ಭವನದಲ್ಲಿ ವಿಜಯಪುರ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಡಾ.ಬಿ.ಆರ್. ಅಂಬೇಡ್ಕರ್ ಭವನದ ಮುಂದುವರೆದ ರೂ.2ಕೋಟಿ ವೆಚ್ಚದ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಹಿಂದಿನ ಶಾಸಕರ ಅವಧಿಯಲ್ಲಿನ ಅನುದಾನವನ್ನು ಸದ್ಬಳಕೆ ಮಾಡಿಕೊಂಡು ಸುಂದರವಾದ ಮತ್ತು ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡಿ ಸಾರ್ವಜನಿಕರ ಅನುಕೂಲಕ್ಕೆ ಎಡೆಮಾಡಿಕೊಟ್ಟಿದ್ದು ಖುಷಿ ತಂದಿದೆ. ರೂ.3.5ಕೋಟಿಯ ಬೇಡಿಕೆಯಲ್ಲಿ ಸದ್ಯ ರೂ.2ಕೋಟಿ ಅನುದಾನ ಬಿಡುಗಡೆಯಾಗಿದ್ದು, ಅದನ್ನು ಸುಂದರ ಕಟ್ಟಡ ನಿರ್ಮಿಸಿ ಸಮಾಜದ ಜನರಿಗೆ ಒಳಿತಾಗುವ ರೀತಿಯಲ್ಲಿ ಕಟ್ಟಡ ಮಾಡಬೇಕು. ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿಯನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಬೇಕು. ಈಗಾಗಲೇ ರಾಜ್ಯ ಸರಕಾರ ಪ್ರತಿ ಶಾಸಕರಿಗೆ ರೂ.50ಕೋಟಿ ವಿಶೇಷ ಅನುದಾನ ನೀಡಿದ್ದು, ಈ ರೂ.50ಕೋಟಿ ಅನುದಾನದಲ್ಲಿ ಸಿಂದಗಿ ನಗರಕ್ಕೆ ರೂ.29ಕೋಟಿ ಅಭಿವೃದ್ಧಿಗೆ ವಿವಿಧ ಇಲಾಖೆಗಳಿಗೆ ಮೀಸಲಿಡಲಾಗಿದೆ. ತಾಲೂಕಿನ ಮೋಟರಗಿ ರೂ.50ಲಕ್ಷ, ನಾಗಾವಿ ಬಿಕೆ, ಯಂಕಂಚಿ, ಬಂಕಲಗಿ, ಕಡಣಿ ಸೇರಿದಂತೆ ತಲಾ ರೂ.25ಲಕ್ಷ ಅನುದಾನ ಅಂಬೇಡ್ಕರ್ ಭವನಕ್ಕೆ ಮೀಸಲಿಡಲಾಗಿದೆ ಎಂದರು. ಈ ವೇಳೆ ಪುರಸಭೆ ಮಾಜಿ ಅಧ್ಯಕ್ಷ, ಹಾಲಿ ಸದಸ್ಯ ಶಾಂತವೀರ ಬಿರಾದಾರ, ಮಾಜಿ ಉಪಾಧ್ಯಕ್ಷ ರಾಜಣ್ಣಿ ನಾರಾಯಣಕರ, ಶರಣಪ್ಪ ಸುಲ್ಪಿ, ಅರವಿಂದ ದನಗೊಂಡ, ಬಸವರಾಜ ಯರನಾಳ, ಚಂದ್ರಾಮ ಜಾಬಾನೂರ, ವಿಠ್ಠಲ ಹೊಸಮನಿ ವೇದಿಕೆಯ ಮೇಲಿದ್ದರು.

ಇದೇ ಸಂದರ್ಭದಲ್ಲಿ ರಾಜಶೇಖರ ಕೂಚಬಾಳ ಪ್ರಾಸ್ತಾವಿಕ ಮಾತನಾಡಿದರು. ದೇವಕ್ಕಿ ಮಣೂರ, ರಾಕೇಶ ಕಾಂಬಳೆ, ರವಿ ಹೊಳಿ, ಸಚಿನ ಚೌರ, ಸಿದ್ದು ಮ್ಯಾಕೇರಿ, ಅರ್ಜುನ ಜಾಬಾನೂರ, ಮೀನಾಕ್ಷಿ ವಾಘಮೋರೆ, ಮುತ್ತು ಮುಂಡೇವಾಡಗಿ, ದುಂಡಪ್ಪ ಸೊನ್ನದ ಸೇರಿದಂತೆ ವಿವಿಧ ಸಂಘಟನೆಗಳ ಪ್ರಮುಖರು ಇತರರು ಇದ್ದರು.



## ಪೋಷಣ ಮಾಸಾಚರಣೆಗೆ ಚಾಲನೆ



**ಬೆಳಗಾವಿ:** ಪೋಷಣ ಮಾಸಾಚರಣೆ ಕಾರ್ಯಕ್ರಮಕ್ಕೆ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಬೆಂಡಿಗೇರಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಚಾಲನೆ ನೀಡಿದರು. ಇದೇ ವೇಳೆ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ, ಅನ್ನಪ್ರಾಶನ, ಅಕ್ಷರಾಭ್ಯಾಸ, ವೇಷಭೂಷಣ, ಹುಟ್ಟುಹಬ್ಬ, ಪೌಷ್ಟಿಕ ಆಹಾರ ಶಿಬಿರ ಸೇರಿದಂತೆ ವಿವಿಧ ಕಾರ್ಯಕ್ರಮಗಳು ಸಹ ನಡೆದವು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವಸದಸ್ಯರು, ವೈದ್ಯಾಧಿಕಾರಿಗಳು, ಐಸಿಡಿಎಸ್ ಮೇಲ್ವಿಚಾರಕಿಯರು, ಅಂಗನವಾಡಿ ಸಿಬ್ಬಂದಿ, ಗ್ರಾಮದ ಹಿರಿಯರು ಉಪಸ್ಥಿತರಿದ್ದರು.

## ಸಹಾಯವಾಣಿ ಕೇಂದ್ರ ಸ್ಥಾಪನೆ

**ಬಾಗಲಕೋಟೆ:** ಜಿಲ್ಲಾ ಮಟ್ಟದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಪ್ರತಿನಿತ್ಯ ಸ್ವೀಕೃತವಾದ ಮಾಹಿತಿ, ದೂರು, ಆಕ್ಷೇಪಣೆ, ಸಲಹೆ ಸೂಚನೆಗಳನ್ನು ಸ್ವೀಕರಿಸಲು ಜಿಲ್ಲಾ ಆಡಳಿತ ಭವನದಲ್ಲಿ ಸಹಾಯವಾಣಿ ಕೇಂದ್ರ ಸ್ಥಾಪಿಸಲಾಗಿದ್ದು ಸಮೀಕ್ಷಾ ಕಾರ್ಯ ಪೂರ್ಣಗೊಳ್ಳುವವರೆಗೂ ಸಹಾಯವಾಣಿ ಸಂಖ್ಯೆ 08354-236240 ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 8 ಗಂಟೆ ಸಹಾಯವಾಣಿ ಕಾರ್ಯ ನಿರ್ವಹಿಸಲಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :196, Postal Reg No. PMG/KA/NK/BM/135/25-27 / POST AT Vantamury Colony Post Office